ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 57

14-8-2025 ಗುರುವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 57

### ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇಧ ಮತ್ತು ಪುನರ್ವಸತಿ ಕಾಯ್ದೆ 2013ರ ಅನುಷ್ಠಾನ ಸಮಿತಿ ಸಭೆಯಲ್ಲಿ ಡಿ.ಸಿ ಗಂಗಾಧರಸ್ವಾಮಿ ಸೂಚನೆ

# ಅರ್ಹ ಫಲಾನುಭವಿಗಳಿಗೆ ಗುರುತಿನ ಚೀಟಿ, ನಿವೇಶನ ಕಲ್ಪಿಸಿ

**ದಾವಣಗೆರೆ :** ಜಿಲ್ಲಾ ಹಾಗೂ ತಾಲ್ಲೂಕು ವ್ಯಾಪ್ತಿಯಲ್ಲಿ ಗುರುತಿಸಿದ ಎಲ್ಲಾ ಅರ್ಹ ಮ್ಯಾನ್ಯುಯಲ್ ಸ್ಕ್ಯಾವೆಂಜರ್, ಸಫಾಯಿ ಕರ್ಮಚಾರಿಗಳನ್ನು ಸಮೀಕ್ಷೆ ಮಾಡಿ ಅವರಿಗೆ ಗುರುತಿನ ಚೀಟಿ, ನಿವೇಶನ ರಹಿತರಿಗೆ ನಿವೇಶನ ಹಾಗೂ ಪನರ್ವಸತಿ ಕಲ್ಪಿಸುವಂತೆ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ತಾಕೀತು ಮಾಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ ನೇಮಕಾತಿ ನಿಷೇಧ ಮತ್ತು ಪುನರ್ವಸತಿ ಕಾಯ್ದೆ 2013ರ ಅನುಷ್ಠಾನ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದಾವಣಗೆರೆ ಮಹಾನಗರ ಪಾಲಿಕೆಯಲ್ಲಿ 245, ಹರಿಹರ ನಗರಸಭೆ ವ್ಯಾಪ್ತಿಯಲ್ಲಿ 78 ಸೇರಿ ಒಟ್ಟು 388 ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿದ್ದು, ಈ ಪೈಕಿ 372 ಸ್ಕ್ಯಾವೆಂಜರ್‌ಗಳಿಗೆ ಗುರುತಿನ ಚೀಟಿ ನೀಡಿದೆ. ಇನ್ನುಳಿದ 16 ರಲ್ಲಿ 4 ಜನರು



ಮರಣ ಹೊಂದಿದ್ದು, 12 ಜನ ಫಲಾನುಭವಿಗಳು ಸ್ಥಳದಲ್ಲಿ ಲಭ್ಯವಿಲ್ಲದ ಕಾರಣ ಕಾರ್ಡ್ ವಿತರಿಸಲಾಗಿಲ್ಲ. ನಗರ ಸ್ಥಳೀಯ ಸಂಸ್ಥೆಗಳಾದ ಮಹಾನಗರ ಪಾಲಿಕೆ, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿ ಮಂಜೂರಾದ ಪೌರಕಾರ್ಮಿಕ, ಸೆಕ್ಯೂರಿಟಿ ಗಾರ್ಡ್, ವಾಹನ ಚಾಲಕ, ನೀರು ಸರಬರಾಜು ಸಹಾಯಕ, ಎಸ್.ಡಬ್ಲ್ಯೂ.ಎಂ. ಫೀಲ್ಡ್ ವರ್ಕರ್ ಸೇರಿ 9 ಜನರನ್ನು ಹೊರಗುತ್ತಿಗೆ ಆಧಾರದಡಿ ಹಾಗೂ ಲೋಡರ್ ಹುದ್ದೆಗಳಿಗೆ 3 ಕಾರ್ಮಿಕರನ್ನು ಖಾಯಂ ನೇಮಕ ಮಾಡಲಾಗಿದೆ ಎಂದರು.

ಶೌಚಾಲಯಗಳ ನಿರ್ವಹಣಾ ಟೆಂಡರ್, ಸಫಾಯಿ ಕರ್ಮಚಾರಿಗಳು ಮತ್ತು ಗುರುತಿಸಿದ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಗಳಿಗೆ ಮೀಸಲಿಗೆ ಅನುಗುಣವಾಗಿ ಟೆಂಡರ್ ಪ್ರಕ್ರಿಯೆ ನಡೆಸಿ ಸ್ಕ್ಯಾವೆಂಜರ್‌ಗಳಿಗೆ ಪ್ರಥಮಾದ್ಯತೆ ನೀಡಬೇಕು. ನಿವೇಶನ ರಹಿತ 297 ಸ್ಕ್ಯಾವೆಂಜರ್ ಕುಟುಂಬಗಳಿಗೆ ಅಗತ್ಯವಾಗಿ ನಿವೇಶನ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಸಂಬಂಧಪಟ್ಟ ಅಧಿಕಾರಿಗಳು ಮಹಾನಗರ ಪಾಲಿಕೆ ವ್ಯಾಪ್ತಿಗೊಳಪಡುವ ದೊಡ್ಡಬಾತಿ ಗ್ರಾಮದಲ್ಲಿ 8 ಎಕರೆ 8 ಗುಂಟೆ ಭೂಮಿ ಗುರುತಿಸಿದ್ದು, ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಮಾಹಿತಿ ನೀಡಿದರು.

59 ಸ್ಕ್ಯಾವೆಂಜರ್ ಕುಟುಂಬಗಳಿಗೆ ವಸತಿ ಸೌಲಭ್ಯ: ನಗರ ಸ್ಥಳೀಯ ಸಂಸ್ಥೆಗಳು ಸೇರಿ ಜಿಲ್ಲೆಯಲ್ಲಿ 388 ಸ್ಕ್ಯಾವೆಂಜರ್‌ಗಳ ಪೈಕಿ 59 ನಿವೇಶನ ಲಭ್ಯವಿರುವ ಕುಟುಂಬಗಳು ಎಂದು ಗುರುತಿಸಲಾಗಿದೆ. ಅದರಲ್ಲಿ ದೇವರಾಜ್ ಅರಸು ವಸತಿ ಯೋಜನೆಯಡಿ 16 ಫಲಾನುಭವಿಗಳ ಪಟ್ಟಿ ಅನುಮೋದನೆ ಪಡೆಯಲಾಗಿದೆ. ಬಾಕಿ ಉಳಿದ ಫಲಾನುಭವಿಗಳಿಗೆ ವಿವಿಧ ತಾಂತ್ರಿಕ ಮತ್ತು ದಾಖಲಾತಿಗಳ ಕಾರಣಗಳಿಂದ ಬಾಕಿ ಇದ್ದು, ಶೀಘ್ರದಲ್ಲೇ ಉಳಿದ ಫಲಾನಭವಿಗಳಿಗೂ ಅನುಮೋದನೆ ಪಡೆದು ವಸತಿ ಸೌಲಭ್ಯ ಕಲ್ಪಿಸಲಾಗುವುದು ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು. ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳಿಗೆ ಸರ್ಕಾರದ ಯೋಜನೆ, ಸಾಲ, ಸೌಲಭ್ಯಗಳನ್ನು ಸಮರ್ಪಕವಾಗಿ ಸಕಾಲದಲ್ಲಿ ಅರ್ಹ ಫಲಾನುಭವಿಗಳಿಗೆ ಒದಗಿಸಿ ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಮುನ್ನಲೆಗೆ ಬರಲು ಅಧಿಕಾರಿಗಳು ಸಹಕರಿಸಬೇಕು ಎಂದರು.

ಸಭೆಯಲ್ಲಿ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಪರಮೇಶ್ವರ ಹೆಗಡೆ, ಪಾಲಿಕೆ ಆಯುಕ್ತೆ ರೇಣುಕಾ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ಮಹಾಂತೇಶ, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಕೆ.ನಾಗರಾಜ್, ಜಿ.ಪಂ. ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ್, ನಾಮ ನಿರ್ದೇಶಿತ ಸದಸ್ಯರಾದ ಶಂಕರ್, ರಘುಪತಿ, ಓಬಳೇಶ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಂಘಟನೆಗಳ ಪದಾಧಿಕಾರಿಗಳು ಇದ್ದರು.

# ಆ.17ರಂದು ಸಮರ್ಪಣ –2025

**ದಾವಣಗೆರೆ:** ಕೇರಳ ಸಮಾಜ–ದಾವಣಗೆರೆಯ ಮೊದಲ ವಾರ್ಷಿಕೋತ್ಸವ ನಿಮಿತ್ತ ಸಮರ್ಪಣ –2025 'ಮಹಿಳಾ ಸಬಲೀಕರಣ ಮತ್ತು ಮಕ್ಕಳ ಕಲ್ಯಾಣ' ವಿಶೇಷ ಕಾರ್ಯಕ್ರಮವನ್ನು ಆ.17ರಂದು ನಗರದ ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದಲ್ಲಿ ಹಮ್ಮಿಕೊಂಡಿದೆ.

ಅವಳ ಆರೋಗ್ಯ ನಮ್ಮ ಆದ್ಯತೆ ಹೆಸರಿನಡಿ ಅಂದು ಬೆಳಿಗ್ಗೆ 7ರಿಂದ ಮಹಿಳೆಯರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರ, ಬೆಳಿಗ್ಗೆ 10 ರಿಂದ ಗಾಯನ ಸ್ಪರ್ಧೆ ಮತ್ತು ಸಮೂಹ ಗಾಯನ ಸ್ಪರ್ಧೆ, ಮಧ್ಯಾಹ್ನ 12ರಿಂದ ನೃತ್ಯ ಸ್ಪರ್ಧೆ ಮತ್ತು ಸಮೂಹ ನೃತ್ಯ ಸ್ಪರ್ಧೆ, ಮಧ್ಯಾಹ್ನ 2ರಿಂದ ಮಹಿಳೆಯರಿಗಾಗಿ ಫ್ಯಾಷನ್ ಶೋ ಸ್ಪರ್ಧೆ ನಡೆಯಲಿದೆ. 25 ವರ್ಷದೊಳಗಿನ ಮಹಿಳೆಯರು ಮೊ: 8310034867, 9902779514 ಸಂಪರ್ಕಿಸಿ ಹೆಸರು ನೋಂದಾಯಿಸಿಕೊಳ್ಳಬಹುದಾಗಿದೆ.

# ಆ.23ರಂದು ಜಿಲ್ಲಾ ವಕೀಲರ ಸಂಘದ ಚುನಾವಣೆ

**ದಾವಣಗೆರೆ:** ದಾವಣಗೆರೆ ಜಿಲ್ಲಾ ವಕೀಲರ ಸಂಘ–ಕ್ಕೆ 2025–2027 ದ್ವೈವಾರ್ಷಿಕ ಸಾಲಿನ ಚುನಾವಣೆಯು ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿ, ಖಜಾಂಚಿ, ಸಹ ಕಾರ್ಯದರ್ಶಿ ಮತ್ತು ಕಾರ್ಯಕಾರಿ ಸಮಿತಿಯ ಮಹಿಳಾ ಮೀಸಲು ಸ್ಥಾನ ಸೇರಿ 12 ಸ್ಥಾನಗಳಿಗಾಗಿ ಆ.23 ರಂದು ಬೆಳಗ್ಗೆ 11–30 ಗಂಟೆಯಿಂದ ಸಂಜೆ 5–30 ಗಂಟೆಯವರೆಗೆ ನಗರದ ದಾವಣಗೆರೆ ವಕೀಲರ ಸಂಘದಲ್ಲಿ ಚುನಾವಣೆ ನಡೆಯಲಿದೆ.

ನಂತರ ಅದೇ ದಿನ ಸಂಜೆ 6–30ಕ್ಕೆ ಮತಗಳ ಎಣಿಕೆ ನಡೆದು ಅಭ್ಯರ್ಥಿಗಳ ಹೆಸರನ್ನು ಘೋಷಣೆಯಾಗಲಿದೆ. ಚುನಾವಣಾ ಕಣದಲ್ಲಿ ಅಧ್ಯಕ್ಷ ಸ್ಥಾನಕ್ಕೆ ಟಿ.ಆರ್. ಗುರುಬಸವರಾಜ್, ಕೆ.ಎಂ.ಮಲ್ಲಿಕಾರ್ಜುನಪ್ಪ, ಕೆ.ಹೆಚ್. ಮಂಜಪ್ಪ, ತಿಮ್ಮಲಾಪುರದ ರವಿಶಂಕರ್. ಉಪಾಧ್ಯಕ್ಷ ಸ್ಥಾನಕ್ಕೆ ಮಂಜಪ್ಪ ಹಲಗೇರಿ, ಕೆ.ಸಿ. ನಾಗರಾಜಪ್ಪ, ಟಿ.ಬಿ. ರಾಮಣ್ಣ, ಕೆ.ಜಿ.ಕೆ. ಸ್ವಾಮಿ. ಕಾರ್ಯದರ್ಶಿ ಸ್ಥಾನಕ್ಕೆ ಪಿ.ಲಕ್ಕಪ್ಪ, ಎಲ್.ಹೆಚ್. ಪ್ರದೀಪ್, ಸಹ ಕಾರ್ಯದರ್ಶಿ ಸ್ಥಾನಕ್ಕೆ ಆರ್. ಭಾಗ್ಯಲಕ್ಷ್ಮಿ ?ಮೇ, ಕೆ.ಎನ್. ರೇವಣಸಿದ್ದಪ್ಪ ಇವರು ಚುನಾವಣಾ ಕಣದಲ್ಲಿದ್ದಾರೆ.

ಚುನಾವಣೆಯಲ್ಲಿ (ಮಹಿಳಾ ಮೀಸಲು ಸ್ಥಾನ) ಖಜಾಂಚಿ ಸ್ಥಾನಕ್ಕೆ ಜಿ.ಇ. ವನಜಾಕ್ಷಿ 12 ಕಾರ್ಯಕಾರಿ ಸಮಿತಿ ಸದಸ್ಯರುಗಳಾದ ಬಿ. ಅಜ್ಜಯ್ಯ, ಎಂ. ಚೌಡಪ್ಪ, ಎಂ. ಶಂಕರರಾವ್, ಬಿ.ಹೆಚ್. ಸಿದ್ದೇಶ್, ಆರ್. ಸುರೇಶ್, ಎಸ್. ವಿಜಯಕುಮಾರ್, ಬಿ. ವಿಶ್ವನಾಥ್ ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರ ಸ್ಥಾನಕ್ಕೆ (4 ಮಹಿಳಾ ಮೀಸಲು) ಅಲಮೇಲಮ್ಮ, ಹೆಚ್.ಕೆ.ಅಮೃತ, ಕೆ. ಮಂಜುಳ, ಶ್ವೇತ ಹಿಂಜಗಿಮಠ್ ಇವರುಗಳು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ತಿಳಿಸಿದ್ದಾರೆ.

# ಮಣ್ಣಿನ ಗಣೇಶ ಮೂರ್ತಿಯನ್ನೆ ಪ್ರತಿಷ್ಠಾಪಿಸಿ ಜಲ ಮಾಲಿನ್ಯ ತಡೆಗೆ ನಿಗದಿತ ಸ್ಥಳದಲ್ಲೆ ವಿಸರ್ಜಿಸಲು ಮನವಿ

**ದಾವಣಗೆರೆ:** ನೀರಿನ ಮೂಲಗಳಾದ ನದಿ, ತೊರೆ, ಹಳ್ಳ, ಕೆರೆ, ಬಾವಿ ಇವುಗಳ ನೀರು ಮಾಲಿನ್ಯಗೊಳಗಾಗದಂತೆ ಸಂರಕ್ಷಿಸುವ ಉದ್ದೇಶದಿಂದ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಪ್ಲಾಸ್ಟರ್ ಆಫ್ ಪ್ಯಾರೀಸ್‌ನಿಂದ ತಯಾರಿಸಿದ ಗಣೇಶ ವಿಗ್ರಹಗಳು ಹಾಗೂ ಅದೇ ಭಾರಲೋಹ ಮಿಶ್ರಿತ ರಾಸಾಯನಿಕಯುಕ್ತ ಬಣ್ಣದಿಂದ ಅಲಂಕೃತಗೊಂಡಂತಹ ಯಾವುದೇ ರೀತಿಯ ಇತರೆ ವಿಗ್ರಹಗಳ ಉತ್ಪಾದನೆ, ಮಾರಾಟ ಹಾಗೂ ಅವುಗಳನ್ನು ಮೇಲೆ ತಿಳಿಸಿದ ಯಾವುದೇ ನೀರಿನ ಮೂಲಗಳಲ್ಲಿ ವಿಸರ್ಜಿಸುವುದನ್ನು ಜಿಲ್ಲೆಯಾದ್ಯಂತ ಸಂಪೂರ್ಣವಾಗಿ ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ ತಿಳಿಸಿದ್ದಾರೆ.

ಅನುಸರಿಸ ಬೇಕಾದ ವಿಧಾನಗಳು: ಪ್ರಸಕ್ತ ಗೌರಿ–ಗಣೇಶ ಹಬ್ಬವನ್ನು ಪರಿಸರ ಸ್ನೇಹಿಯಾಗಿ ಆಚರಿಸುವ ಸಲುವಾಗಿ ಸಾರ್ವಜನಿಕರು ಮಣ್ಣಿನಿಂದ ತಯಾರಿಸಿದ ಹಾಗೂ ನೈಸರ್ಗಿಕ ಬಣ್ಣ ಲೇಪಿತ ಮಣ್ಣಿನ ಗಣೇಶ ಮೂರ್ತಿಗಳೊಂದಿಗೆ ಹಬ್ಬ ಆಚರಿಸಿ ತದನಂತರ ಸ್ಥಳೀಯ ಸಂಸ್ಥೆಗಳು ನಿಗದಿಪಡಿಸಿದ ಸಂಚಾರಿ ತೊಟ್ಟಿಗಳಲ್ಲಿ ಅಥವಾ ಕಲ್ಯಾಣಿಗಳಲ್ಲಿಯೇ ಗಣೇಶ ಮೂರ್ತಿಗಳನ್ನು ವಿಸರ್ಜಿಸಬೇಕು.

ಗಣೇಶ ಚತುರ್ದಿ ಹಬ್ಬವನ್ನು ಸರಳ ರೀತಿಯಲ್ಲಿ ಭಕ್ತಿ ಪೂರ್ವಕವಾಗಿ ದೇವಸ್ಥಾನದೊಳಗೆ ಅಥವಾ ತಮ್ಮ ಮನೆಗಳಲ್ಲಿಯೇ ಆಚರಿಸಬೇಕು. ಮಣ್ಣಿನ ಗಣೇಶ ಮೂರ್ತಿಗಳ ವಿಸರ್ಜನೆ ಸಂದರ್ಭದಲ್ಲಿ ಸಂಚಾರಿ ತೊಟ್ಟಿಗಳಲ್ಲಿ ಅಥವಾ ಕಲ್ಯಾಣಿಗಳ ಪಕ್ಕದಲ್ಲಿ ಹಸಿಕಸ, ಹೂವು, ಹಣ್ಣು, ಬಾಳೆಕಂಬ, ಮಾವಿನ ತೋರಣ ಇತ್ಯಾದಿ ಪ್ರತ್ಯೇಕಿಸಿ ಮೂರ್ತಿಗಳೊಂದಿಗೆ ನೀರಿಗೆ ವಿಸರ್ಜಿಸದೆ ಪ್ರತ್ಯೇಕವಾಗಿ ವಿಲೇವಾರಿ ಮಾಡಬೇಕು.

ಮತ್ತು ಗಣೇಶಮೂರ್ತಿ ಪ್ರತಿಷ್ಠಾಪನೆ ವೇಳೆ ರಾತ್ರಿ 10 ರಿಂದ ಬೆಳಗ್ಗೆ 6 ಗಂಟೆ ಅವಧಿಯಲ್ಲಿ ಯಾವುದೇ ರೀತಿಯ ಧ್ವನಿವರ್ಧಕಗಳನ್ನು ಅಥವಾ ಧ್ವನಿಯನ್ನುಂಟು ಮಾಡುವ ಡೋಲು, ತಮ್ಮಟೆ, ಜಾಗಟೆ ಇತ್ಯಾದಿ ಇವುಗಳನ್ನು ತುರ್ತು ಸಮಯವನ್ನು ಹೊರತುಪಡಿಸಿ ಉಳಿದ ಸಂದರ್ಭಗಳಲ್ಲಿ ನಿಷೇಧಿಸಲಾಗಿರುತ್ತದೆ. ಗೌರಿಗಣೇಶ ಹಬ್ಬದ ಸಂದರ್ಭದಲ್ಲಿ ಹಸಿರು ಪಟಾಕಿಗಳನ್ನು ನಿಗಧಿತ ಸಮಯದಲ್ಲಿ ಮಾತ್ರ ಸಿಡಿಸಬೇಕು.

ಗಣೇಶ ಹಬ್ಬದಲ್ಲಿ ರಸ್ತೆ ಮತ್ತು ಚರಂಡಿಗಳಲ್ಲಿ, ಲೋಟ, ಎಲೆ ಎಸೆಯಬೇಡಿ, ಮನೆಯ ಹತ್ತಿರ ಬರುವ ಸ್ಥಳೀಯ ಸಂಸ್ಥೆಗಳ ಕಸದ ವಾಹನಗಳಿಗೆ ಹಾಕಿ. ಗೌರಿಗಣೇಶ ಹಬ್ಬದ ಸಂದರ್ಭದಲ್ಲಿ ಅಲಂಕಾರಕ್ಕಾಗಿ ನಿಷೇಧಿತ ಏಕ ಬಳಕೆ ಪ್ಲಾಸ್ಟಿಕ್ ವಸ್ತುಗಳನ್ನು ಬಳಸದೆ ಪರಿಸರ ಸ್ನೇಹಿಯಾಗಿ ಆಚರಿಸಬೇಕು.

ಪ್ಲಾಸ್ಟರ್ ಆಫ್ ಪ್ಯಾರೀಸ್ ಮೂರ್ತಿಗಳ ವಿಸರ್ಜನೆಯಿಂದಾಗಿ ಜಲಮೂಲಗಳು ಕಲುಷಿತವಾಗುತ್ತಿದ್ದು, ಅದರಂತೆ ಯಾವುದೇ ರಾಸಾಯನಿಕ ಬಣ್ಣ ಸಹಿತ ಪ್ಲಾಸ್ಟರ್ ಆಫ್ ಪ್ಯಾರೀಸ್ ವಿಗ್ರಹಗಳನ್ನು ಯಾವುದೇ ನೀರಿನ ಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿರುತ್ತದೆ. ಹಾಗೂ ಅವುಗಳ ತಯಾರಿಕೆ, ಸಾಗಾಣಿಕೆ, ಮಾರಾಟ ಸಹ ಮಾಡಬಾರದು. ತಪ್ಪಿದ್ದಲ್ಲಿ, ಜಲಮಾಲಿನ್ಯ ಕಾಯ್ದೆಯನ್ವಯ ಸೂಕ್ತ ಕ್ರಮ ಜರುಗಿಸಲಾಗುವುದು.

# ಮತ್ತೆರಡು ಹುಲಿ ಮರಿಗಳ ಸಾವು!



**ಚಾಮರಾಜನಗರ:** ರಾಜ್ಯಾದ್ಯಂತ ಸಂಚಲನ ಸೃಷ್ಟಿಸಿದ್ದ 5 ಹುಲಿಗಳ ಸಾವು ಪ್ರಕರಣ ಹಸಿರಾಗಿರುವಂತೆಯೇ ಮತ್ತೆರಡು ಹುಲಿಮರಿಗಳು ಸಾವನ್ನಪ್ಪಿರುವ ವಿಚಾರ ಬೆಳಕಿಗೆ ಬಂದಿದೆ.

ಹೌದು.. ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ವನ್ಯಧಾಮದಲ್ಲಿ 5 ಹುಲಿಗಳ ಸಾವು ಪ್ರಕರಣ ಸಾಕಷ್ಟು ಸಂಚಲನ ಸೃಷ್ಟಿಸಿತ್ತು. ಈ ಘಟನೆ ಮಾಸುವ ಮುನ್ನವೇ ಮತ್ತೆ ಎರಡು ಹುಲಿ ಮರಿಗಳು ಸಾವನ್ನಪ್ಪಿರುವ ವಿಚಾರ ಸುದ್ದಿಯಾಗಿದೆ.

ಚಾಮರಾಜ ನಗರ ಜಿಲ್ಲೆಯ ಕಾವೇರಿ ವನ್ಯಧಾಮದ ಹೋಳೆಮೂರ್ದಟ್ಟಿ ಗಸ್ತಿನ ಕಿರುಬನಕಲ್ಲುಗುಡ್ಡ ಬಳಿ ಎರಡು ಹುಲಿ ಮರಿಗಳ ಸಾವನ್ನಪ್ಪಿದ್ದು, ಹಸಿವಿನಿಂದ ನಿತ್ರಾಣಗೊಂಡು ಮರಿಗಳು ಮೃತಪಟ್ಟಿರುವ ಸಾಧ್ಯತೆಗಳಿವೆ ಎಂದು ಶಂಕಿಸಲಾಗಿದೆ.

ಮೂಲಗಳ ಪ್ರಕಾರ ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕು ವ್ಯಾಪ್ತಿಯ ಹೋಳೆಮೂರ್ದಟ್ಟಿ ಗಸ್ತಿನ ಕಿರುಬನಕಲ್ಲುಗುಡ್ಡ ಬಳಿ 10 ದಿನದ ಹಿಂದೆಯೇ 1 ಹೆಣ್ಣು, 1 ಗಂಡು ಹುಲಿ ಮರಿ ಸಾವನ್ನಪ್ಪಿವೆ ಎನ್ನಲಾಗಿದೆ. ಸಿಬ್ಬಂದಿ ಗಸ್ತಿನ ವೇಳೆ ಹುಲಿ ಮರಿ ಮೃತಪಟ್ಟಿರುವುದು ಕಂಡುಬಂದಿದೆ.

# ಕಾರವಾರ ಶಾಸಕ ಸತೀಶ್ ಸೈಲ್ ನಿವಾಸ ಮೇಲೆ ಇಡಿ ದಾಳಿ

**ಕಾರವಾರ:** ಕಾರವಾರ–ಅಂಕೋಲಾ ಕ್ಷೇತ್ರದ ಶಾಸಕ ಸತೀಶ್ ಸೈಲ್ ಅವರ ಸದಾಶಿವಗಡದಲ್ಲಿರುವ ಮನೆ ಮೇಲೆ ಬುಧವಾರ ಬೆಳಗ್ಗೆ ಇಡಿ ಅಧಿಕಾರಿಗಳು ದಾಳಿ ನಡೆಸಿದ್ದಾರೆ. ಬೇಲೆಕೇರಿ ಅದಿರು ಪ್ರಕರಣಕ್ಕೆ ಸಂಬಂಧಿಸಿದಂತೆ ಈ ತಪಾಸಣೆ ನಡೆದಿದೆ ಎನ್ನಲಾಗಿದೆ. 6 ಕಾರುಗಳಲ್ಲಿ ಬಂದಿರುವ 24 ಕ್ಕೂ ಹೆಚ್ಚು ಇಡಿ ಅಧಿಕಾರಿಗಳು ಸತೀಶ್ ಸೈಲ್ ನಿವಾಸದಲ್ಲಿ ದಾಖಲೆ ಪರಿಶೀಲನೆ ನಡೆಸುತ್ತಿದ್ದಾರೆ.

ಶಾಸಕ ಸತೀಶ್ ಸೈಲ್ ಎಂಸಿಎ ಅಧ್ಯಕ್ಷರೂ ಆಗಿದ್ದರು. ಅಧಿವೇಶನದ ಹಿನ್ನೆಲೆಯಲ್ಲಿ ಶಾಸಕ ಸತೀಶ್ ಸೈಲ್ ಬೆಂಗಳೂರಿಗೆ ತೆರಳಿದ್ದಾರೆ. ಇಂದು ಬೆಳಗ್ಗೆ ಏಕಾಏಕಿ ಇಡಿ ಅಧಿಕಾರಿಗಳು ಸತೀಶ್ ಸೈಲ್ ಮನೆಗೆ ದಾಳಿ ನಡೆಸಿ ಪರಿಶೀಲನೆ ನಡೆಸುತ್ತಿದ್ದಾರೆ. ಶಾಸಕರ ಮನೆಯ ಮುಂಭಾದಲ್ಲಿ ಸಿಐಎಸ್ಎಫ್ ಸಿಬ್ಬಂದಿಯ ಕಾವಲು ನಿಯೋಜಿಸಲಾಗಿದೆ.

ಮಲ್ಲಿಕಾರ್ಜುನ ಶಿಪ್ಪಿಂಗ್ ಕಂಪನಿ ಮೂಲಕ ಅಕ್ರಮ ಅದಿರು ಸಾಗಾಟ ಮಾಡಿದ್ದ ಪ್ರಕರಣದಲ್ಲಿ ನಿವೃತ್ತ ಲೋಕಾಯುಕ್ತ ನ್ಯಾ. ಸಂತೋಷ್ ಹೆಗ್ದೆ ಅವರ ತಂಡ ಸೈಲ್ ವಿರುದ್ಧ ದೂರು ದಾಖಲಿಸಿತ್ತು. ಸತೀಶ್ ಸೈಲ್?ಗೆ ಜನಪ್ರತಿನಿಧಿಗಳ ನ್ಯಾಯಾಲಯ ಜೈಲು ಶಿಕ್ಷೆ ವಿಧಿಸಿತ್ತು. ನಂತರ ಅವರು ಹೈಕೋರ್ಟ್‌ನಲ್ಲಿ ಜಾಮೀನು ಪಡೆದು–ಕೊಂಡಿದ್ದರು.

# 'ಖಾಯಂ ಜನತಾ ನ್ಯಾಯಾಲಯಕ್ಕೆ ವಿವಾದಗಳ ಇತ್ಯರ್ಥ ಅಧಿಕಾರ'

**ಚಿಕ್ಕಮಗಳೂರು, ಆ.13:** ಕಾನೂನು ಸೇವೆಗಳ ಪ್ರಾಧಿಕಾರದ ಆಶ್ರಯದಲ್ಲಿ ಖಾಯಂ ಜನತಾ ನ್ಯಾಯಾಲಯವು ಸಾರ್ವಜನಿಕ ಉಪಯುಕ್ತ ಸೇವೆಗಳಿಗೆ ಸಂಬಂಧಿಸಿದ ವಿವಾದಗಳನ್ನು ರಾಜಿ ಮತ್ತು ವಿಚಾರಣೆ ಮೂಲಕ ತೀರ್ಮಾನ ಮಾಡುವ ಅಧಿಕಾರವನ್ನು ಹೊಂದಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ವಿ.ಹನುಮಂತಪ್ಪ ತಿಳಿಸಿದರು.

ನಗರ ಹೊರವಲಯದ ತೇಗೂರಿನ ತೇಗೂರಿನ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜಿನಲ್ಲಿ ಇಂದು ಆಯೋಜಿಸಿದ್ದ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

1987ರ ಕಾನೂನು ಸೇವೆಗಳ ಪ್ರಾಧಿಕಾರಗಳ ಕಾಯ್ದೆಯನ್ನು 2002ರಲ್ಲಿ ಕೇಂದ್ರ ಸರ್ಕಾರವು ತಿದ್ದುಪಡಿ ಮಾಡಿದ ನಂತರ 2007 ರಲ್ಲಿ ರಾಜ್ಯ ಸರ್ಕಾರವು ಬೆಂಗಳೂರು, ಬೆಳಗಾವಿ, ಧಾರವಾಡ, ಕಲುಬುರಗಿ, ಮಂಗಳೂರು ಮತ್ತು ಮೈಸೂರಿನಲ್ಲಿ ಖಾಯಂ ಜನತಾ ನ್ಯಾಯಾಲಯಗಳನ್ನು ಸ್ಥಾಪಿಸಿದೆ ಎಂದು ತಿಳಿಸಿದರು.

ಪ್ರಯಾಣಿಕರನ್ನು ಅಥವಾ ಸರಕು ಸಾಗಿಸುವ ಭೂ ಸಾರಿಗೆ, ಜಲಸಾರಿಗೆ, ವಾಯು ಸಾರಿಗೆ ಸೇವೆಗಳು, ಅಂಚೆ ತಂತಿ, ದೂರವಾಣಿ ಸೇವೆಗಳು, ವಿದ್ಯುತ್,





ಬೆಳಕು, ನೀರು ಸರಬರಾಜು ಮಾಡುವ ಯಾವುದೇ ಸಂಸ್ಥೆಗಳ ಸೇವೆಗಳು, ಸಾರ್ವಜನಿಕ ನೈರ್ಮಲ್ಯ ವ್ಯವಸ್ಥೆ, ಚರಂಡಿ ವ್ಯವಸ್ಥೆ, ವಿಮಾ ಸೇವೆಗಳು, ಆಸ್ಪತ್ರೆ ಅಥವಾ ಔಷಧಾಲಯಗಳ ಸೇವೆಗಳು, ಹಣಕಾಸು ಸಂಸ್ಥೆಗಳು ಹಾಗೂ ಬ್ಯಾಂಕ್ ಸೇವೆಗಳಿಗೆ ಸಂಬಂಧಿಸಿದ ಪ್ರಕರಣಗಳು, ಶಿಕ್ಷಣ ಮತ್ತು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದ ಸೇವೆಗಳು, ಗೃಹ ಮತ್ತು ರಿಯಲ್ ಎಸ್ಟೇಟ್‌ಗಳಿಗೆ ಸಂಬಂಧಿಸಿದ ಸೇವೆಗಳು, ಎಲ್‌ಪಿಜಿ ಹೊಸ ಸಂಪರ್ಕದ ಪೂರೈಕೆ ಅಥವಾ ಮರುಪೂರಣಗಳು ಇಲ್ಲವೆ ಅದಕ್ಕೆ ಸಂಬಂಧಿಸಿದ ಸೇವೆಗಳು ಹಾಗೂ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಸಾರ್ವಜನಿಕ ಹಿತದೃಷ್ಟಿಯಿಂದ ಸಾರ್ವಜನಿಕ ಉಪಯುಕ್ತ ಸೇವೆ ಎಂದು ಘೋಷಿಸಿರುವ ಇನ್ನಿತರ ಸೇವೆಗಳನ್ನು ಖಾಯಂ ಜನತಾ ನ್ಯಾಯಾಲಯಗಳಲ್ಲಿ ಇತ್ಯರ್ಥಪಡಿಸಬಹುದು ಎಂದು ಅವರು ಮಾಹಿತಿ ನೀಡಿದರು.

ಖಾಯಂ ಜನತಾ ನ್ಯಾಯಾಲಯದಲ್ಲಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಅಧ್ಯಕ್ಷರಾಗಿ ಹಾಗೂ ಸಾರ್ವಜನಿಕ ಉಪಯುಕ್ತ ಸೇವೆಗಳ ಬಗ್ಗೆ 15 ರಿಂದ 20 ವರ್ಷಗಳ ಅನುಭವ ಹೊಂದಿರುವ ಇಬ್ಬರು ಸದಸ್ಯರು ರಾಜ್ಯ ಸರ್ಕಾರ ನಾಮ ನಿರ್ದೇಶನ ಮಾಡಿದಂತೆ ಕಾರ್ಯ ನಿರ್ವಹಿಸುತ್ತಾರೆ. ಪ್ರಕರಣಗಳನ್ನು ದಾಖಲಿಸಲು ನೇರವಾಗಿ ಅಥವಾ ವಕೀಲರ ಮೂಲಕ ದಾಖಲಿಸಲು ಅವಕಾಶವಿದ್ದು, ಯಾವುದೇ ಆದಾಯ ಮಿತಿ, ನ್ಯಾಯಾಲಯದ ಶುಲ್ಕ ಇರುವುದಿಲ್ಲ. ಆದರೆ ದಾಖಲಿಸುವ ಪ್ರಕರಣಗಳ ಬಗ್ಗೆ ಬೇರೆ ನ್ಯಾಯಾಲಯಗಳಲ್ಲಿ ದಾಖಲಿಸಿರಬಾರದು. ವಿವಾದದಲ್ಲಿ ಒಂದು ವೇಳೆ ಉಭಯ ಪಕ್ಷಗಾರರು ಒಪ್ಪದೇ ಇದ್ದರೆ ವಿವಾದವನ್ನು ವಿಚಾರಣೆ ನಡೆಸಿ ಕಾನೂನು ಆಧಾರದ ಮೇಲೆ ತ್ವರಿತವಾಗಿ ಐತೀರ್ಪು ನೀಡಲಾಗುತ್ತದೆ ಎಂದರು.

ಖಾಯಂ ಜನತಾ ನ್ಯಾಯಾಲಯದಲ್ಲಿ ನೀಡಿದ ಐತೀರ್ಪನ್ನು ಯಾವುದೇ ಸಿವಿಲ್ ಅಥವಾ ಜಿಲ್ಲಾ ನ್ಯಾಯಾಲಯದಲ್ಲಿ ಪ್ರಶ್ನಿಸುವ ಅವಕಾಶವಿಲ್ಲ. ಆದರೆ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಲ್ಲಿಸುವ ಮೂಲಕ ಮಾತ್ರ ಐತೀರ್ಪನ್ನು ಪ್ರಶ್ನಿಸಬಹುದು. ಖಾಯಂ ಜನತಾ ನ್ಯಾಯಾಲಯವು ನೀಡಿದ ಐತೀರ್ಪನ್ನು ಸ್ಥಾನಿಕ ಅಧಿಕಾರ ವ್ಯಾಪ್ತಿ ಹೊಂದಿರುವ ಸಿವಿಲ್ ನ್ಯಾಯಾಲಯವು ತಮ್ಮ ನ್ಯಾಯಾಲಯವೇ ಮಾಡಿದ ಡಿಕ್ರಿ ಎಂದು ಪರಿಗಣಿಸಿ ಜಾರಿ ಮಾಡುವ ಅಧಿಕಾರ ಹೊಂದಿರುತ್ತದೆ ಎಂದು ಅವರು ತಿಳಿಸಿದರು.

ಮಕ್ಕಳ ಹಕ್ಕುಗಳ ಬಗ್ಗೆ ಕೂಡ ಅವರು ಕಾನೂನು ಅರಿವು ಮೂಡಿಸಿದರು. ಕಾರ್ಯಕ್ರಮದಲ್ಲಿ ಮಕ್ಕಳ ರಕ್ಷಣಾ ಘಟಕದ ಅಧಿಕಾರಿ ಮಂಜುನಾಥ್, ಮಹಿಳಾ ಮತ್ತು ಮಕ್ಕಳ ರಕ್ಷಣಾ ಸಮಿತಿಯ ಅಧ್ಯಕ್ಷೆ ಜಯಶೀಲಾ, ಸರ್ವೋದಯ ಸಮಾಜ ಸೇವಾ ಸಂಸ್ಥೆಯ ಅಧ್ಯಕ್ಷ ಸಿದ್ದರಾಮು, ಕಾಲೇಜಿನ ಪ್ರಾಂಶುಪಾಲರಾದ ಜೆ.ಸಂತೋಷ್ ಪಾಲ್ಗೊಂಡಿದ್ದರು. 250ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಿಕ್ಷಕೇತರರು ಭಾಗವಹಿಸಿದ್ದರು.

# ಆ.16 ಪ್ರಾಣಿವಧೆ–ಮಾಂಸ ಮಾರಾಟ ನಿಷೇಧ

**ಚಿಕ್ಕಮಗಳೂರು, ಆ.13:** ನಗರಸಭೆ ವ್ಯಾಪ್ತಿಯಲ್ಲಿ ಇರುವ ಕುರಿ, ಕೋಳಿ, ಮೀನು ಮಾಂಸ ಮಾರಾಟಗಾರರು ಹಾಗೂ ಮಾಂಸಾಹಾರಿ ಹೋಟೆಲ್ ಮತ್ತು ರೆಸ್ಟೋರೆಂಟ್ ಮಾಲೀಕರು ಸರ್ಕಾರದ ಸುತ್ತೋಲೆಯಂತೆ ಆಗಸ್ಟ್ 16 ರಂದು ಶ್ರೀ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಕಡ್ಡಾಯವಾಗಿ ಪ್ರಾಣಿ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಿದೆ. ಕೋಳಿ, ಕುರಿ, ಮೀನು, ಮಾಂಸ ಮಾರಾಟಗಾರರು ಮತ್ತು ಮಾಂಸಾಹಾರಿ ಹೋಟೆಲ್‌ಗಳನ್ನು ಈ ದಿನದಂದು ತೆರೆಯಬಾರದು. ತಪ್ಪಿದಲ್ಲಿ ಅಂತಹ ಮಾಂಸ ಮಾರಾಟ ಮಾಡುವವರು ಮತ್ತು ಮಾಂಸಾಹಾರಿ ಹೋಟೆಲ್ ಮಾಲೀಕರ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸಲಾಗುವುದೆಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆ.27 ರಿಂದ ಸೆ.15 ರವರೆಗೆ ಬೈಕ್ ರ್ಯಾಲಿ ನಿಷೇಧ

**ಶಿವಮೊಗ್ಗ :** ಶಿವಮೊಗ್ಗ ನಗರ ಹಾಗೂ ಜಿಲ್ಲಾ ವ್ಯಾಪ್ತಿಯಲ್ಲಿ ಗಣೇಶ ಹಬ್ಬ ಹಾಗೂ ಈದ್ ಮಿಲಾದ್ ಆಚರಣೆ ಪ್ರಯುಕ್ತ ಮುಂಜಾಗ್ರತಾ ಕ್ರಮವಾಗಿ ಜಿಲ್ಲೆಯಲ್ಲಿ ಸಾರ್ವಜನಿಕ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಅ. 27 ರಿಂದ ಸೆ.15 ರವರೆಗೆ ಶಿವಮೊಗ್ಗ ಜಿಲ್ಲೆಯಾದ್ಯಂತ ಬೈಕ್ ರ್ಯಾಲಿ ನಡೆಸುವುದನ್ನು ನಿಷೇದಿಸಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆಯವರು ಆದೇಶಿಸಿದ್ದಾರೆ.

# ಎಸ್ಸಿ–ಎಸ್ಟಿ ಹಣ ಗ್ಯಾರಂಟಿಗೆ ವರ್ಗ ವಾಲ್ಮೀಕಿ ನಾಯಕರ ಟಾರ್ಗೆಟ್

## ಎಸ್‌ಟಿ ಮೋರ್ಚಾ ರಾಜ್ಯ ಅಧ್ಯಕ್ಷ ಬಂಗಾರು ಹನುಮಂತು ಆರೋಪ

**ದಾವಣಗೆರೆ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ನಿಗಮ ಗಳಿಗೆ ಅನುದಾನ ಬಿಡುಗಡೆ ಮಾಡದಿ ರುವ ಹಾಗೂ ವಾಲ್ಮೀಕಿ ಸಮಾಜದ ರಾಜಕೀಯ ಮುಖಂಡರು, ಅಧಿಕಾರಿಗಳ ಮೇಲೆ ದಬ್ಬಾಳಿಕೆ ನಡೆಸುತ್ತಿದೆ ಎಂದು ಆರೋಪಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಜಿಲ್ಲಾ ಬಿಜೆಪಿ ಬೃಹತ್ ಪ್ರತಿಭಟನೆ ನಡೆಸಿತು.

ದಾವಣಗೆರೆಯಲ್ಲಿ ನಡೆದ ಈ ಪ್ರತಿಭಟನೆಯಲ್ಲಿ ನೂರಾರು ಕಾರ್ಯಕರ್ತರು ಭಾಗವಹಿಸಿದ್ದರು. ಜಿಲ್ಲಾ ಬಿಜೆಪಿ ಕಾರ್ಯಾಲಯದಿಂದ ಆರಂಭವಾದ ಮೆರವಣಿಗೆ, ಜಯದೇವ ಸರ್ಕಲ್, ಡಾ.ಅಂಬೇಡ್ಕರ್ ವೃತ್ತದ ಮೂಲಕ ತಾಂಡಾ ಅಭಿವೃದ್ಧಿ ನಿಗಮದ ಕಚೇರಿಗೆ ತೆರಳಿ ಮುತ್ತಿಗೆ ಹಾಕುವ ಮೂಲಕ ಆಕ್ರೋಶ ವ್ಯಕ್ತಪಡಿಸಲಾಯಿತು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ಬಿಜೆಪಿ ಎಸ್‌ಟಿ ಮೋರ್ಚಾ ರಾಜ್ಯ ಅಧ್ಯಕ್ಷ ಬಂಗಾರು ಹನುಮಂತು ಮಾತನಾಡುತ್ತಾ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ 'ಅಹಿಂದ' ಕೇವಲ ಒಂದು ರಾಜಕೀಯ ಘೋಷಣೆಯಾಗಿದ್ದು, ಆ ಸಮುದಾಯಗಳ ನಿಜವಾದ ಅಭಿವೃದ್ಧಿಗೆ ಕಾಂಗ್ರೆಸ್ ಸರ್ಕಾರ ಬದ್ಧವಾಗಿಲ್ಲ ಎಂದು





ಟೀಕಿಸಿದರು.

ಕಾಂಗ್ರೆಸ್ ಸರ್ಕಾರವು ಎಸ್ಸಿ,ಎಸ್ಟಿ ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿಟ್ಟಿದ್ದ ಸಾವಿರಾರು ಕೋಟಿ ರೂ. ಹಣವನ್ನು ತನ್ನ ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸಿದೆ. ಇದ–ರಿಂದ ಎಸ್ಸಿ,ಎಸ್ಟಿ ಕಾಲೋನಿಗಳಲ್ಲಿ ಮೂಲಸೌಕರ್ಯಗಳಾದ ಚರಂಡಿ, ರಸ್ತೆ ಇತ್ಯಾದಿಗಳನ್ನು ನಿರ್ಮಿಸಲು ಹಣವಿಲ್ಲದೆ ಅಭಿವೃದ್ಧಿ ಕುಂಠಿತವಾಗಿದೆ ಎಂದು ಆರೋಪಿಸಿದರು. ಸಿದ್ದರಾಮಯ್ಯ ಅಧಿಕಾರಕ್ಕೆ ಬಂದಾಗಿನಿಂದಲೂ ಪರಿಶಿಷ್ಟ ಜಾತಿ ಪಂಗಡದ ಜನರನ್ನು ತುಳಿಯುವ ಕೆಲಸ ಮಾಡುತ್ತಿದ್ದಾರೆ. ಅದರಲ್ಲೂ ವಾಲ್ಮೀಕಿ ಸಮಾಜವನ್ನು ತುಳಿಯುವ ಕೆಲಸ ಹೆಚ್ಚಾಗಿ ನಡೆಯುತ್ತಿದೆ ಎಂದು ಆರೋಪಿಸಿದರು.

ವಾಲ್ಮೀಕಿ ನಿಗಮದ ಹಗರಣದಲ್ಲಿ ಬಿ. ನಾಗೇಂದ್ರ ಅವರ ಪಾತ್ರವಷ್ಟೇ ಇರಲಿಲ್ಲ. ಇದಕ್ಕೆ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಸಹ ಕಾರಣರಾಗಿದ್ದರು. ಆದರೆ ನಾಗೇಂದ್ರ ಅವರನ್ನು ಬಲಿಪಶು ಮಾಡಲಾಯಿತು ಎಂದು ಆರೋಪಿಸಿದರು.

ಇನ್ನು ಮತಕಳ್ಳತನದ ಬಗ್ಗೆ ಸತ್ಯವನ್ನು ನುಡಿದಿದ್ದ ಸಚಿವ ರಾಜಣ್ಣನವರನ್ನು ಉಚ್ಚಾಟನೆ ಮಾಡಿದ್ದು ದುರಂತ. ಅವರು ಹೇಳಿದ ಸತ್ಯವನ್ನು ಕಾಂಗ್ರೆಸ್‌ಗೆ ಜೀರ್ಣಿಸಿಕೊಳ್ಳಲಾಗಲಿಲ್ಲ ಎಂದು ಲೇವಡಿ ಮಾಡಿದರು.

ಆರ್‌ಸಿಬಿ ಕಾಲ್ತುಳಿತ ಪ್ರಕರಣಕ್ಕೆ ಸಂಬಂಧಿಸಿದಂತೆ ದಕ್ಷ ಹಾಗೂ ಪ್ರಾಮಾಣಿಕ ಪೊಲೀಸ್ ಅಧಿಕಾರಿ ದಯಾನಂದ್ ಅವರನ್ನು ಅಮಾನತ್ತು ಮಾಡಿದ್ದ ಸರ್ಕಾರ ಈಗ ಮತ್ತೆ ನೇಮಕ ಮಾಡಿದೆಯಾದರೂ ಜೈಲು ಕಾಯುವ ಕೆಲಸಕ್ಕೆ ನೇಮಿಸಿದೆ. ಮೊನ್ನೆ ಕೊಪ್ಪಳದಲ್ಲಿ ನಡೆದ ವಾಲ್ಮೀಕಿ ಯುವಕನ ಹತ್ಯೆ ಪ್ರಕರಣದಲ್ಲಿ ಸರ್ಕಾರ ಸರಿಯಾದ ಕ್ರಮ ಕೈಗೊಂಡಿಲ್ಲ ಎಂದು ಖಂಡಿಸಿದರು.

ಮಾಜಿ ಶಾಸಕರುಗಳಾದ ಪ್ರೊ. ಲಿಂಗಣ್ಣ ಮತ್ತು ಎಚ್.ಪಿ. ರಾಜೇಶ್ ಮಾತನಾಡಿ, ಸಂವಿಧಾನದತ್ತವಾಗಿ ಬಂದ ಹಕ್ಕುಗಳನ್ನು ಪಡೆಯಲು ಹೋರಾಟ ನಡೆಸುತ್ತಿರುವುದಾಗಿ ಹೇಳಿದರು. ಸರ್ಕಾರವು ಪರಿಶಿಷ್ಟರನ್ನು 'ಅಸ್ಪೃಶ್ಯರಂತೆ' ನೋಡುತ್ತಿದೆ. ಸಮುದಾಯಗಳ ಅಭಿವೃದ್ಧಿಗೆ ಸರ್ಕಾರಕ್ಕೆ ಮನಸ್ಸಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕ ಎಂ.ಬಸವರಾಜ ನಾಯ್ಕ ಮಾತನಾಡುತ್ತಾ, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಪ್ರಾರಂಭಿಸಿದ್ದ ತಾಂಡಾ ಅಭಿವೃದ್ಧಿ ನಿಗಮಕ್ಕೆ ಸರಿಯಾದ ಅನುದಾನವಿಲ್ಲದೆ ಬೀಗ ಹಾಕುವ ಪರಿಸ್ಥಿತಿ ಬಂದಿದೆ. ನಿಗಮದ ಅಧ್ಯಕ್ಷರು ರಾಜೀನಾಮೆ ನೀಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಯಡಿಯೂರಪ್ಪ ಅವರ ಕನಸಿನ ಯೋಜನೆಗಳನ್ನು ಕಾಂಗ್ರೆಸ್ ಸರ್ಕಾರ ಮುಚ್ಚುವ ಪ್ರಯತ್ನ ಮಾಡುತ್ತಿದೆ ಎಂದೂ ಆಕ್ರೋಶ ವ್ಯಕ್ತಪಡಿಸಿದರು.

ಮುಖಂಡ ಲೋಕಿಕೆರೆ ನಾಗರಾಜ್ ಮಾತನಾಡಿ, ಕಾಂಗ್ರೆಸ್ ಸರ್ಕಾರವು ಸುಳ್ಳು ಭರವಸೆಗಳನ್ನು ನೀಡಿ ಆಡಳಿತಕ್ಕೆ ಬಂದಿದೆ. ಆದರೆ, ಯಾವುದೇ ಗ್ಯಾರಂಟಿಗಳನ್ನು ಸರಿಯಾಗಿ ಅನುಷ್ಠಾನಗೊಳಿಸಿಲ್ಲ ಎಂದು ಆರೋಪಿಸಿದರು.

ದಾವಣಗೆರೆ ರಸ್ತೆಗಳಲ್ಲಿ ಗುಂಡಿಗಳೇ ಇಲ್ಲ ಎಂದು ಜಿಲ್ಲಾ ಉಸ್ತುವಾರಿ ಸಚಿವರು ಹೇಳಿಕೆ ಕೊಟ್ಟಿದ್ದರು. ಆದರೆ ರಸ್ತೆಗಳಲ್ಲಿನ ಗುಂಡಿಗಳನ್ನು ಸಚಿವರು ಗಮನಿಸಿಲ್ಲ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ರಾಜಶೇಖರ ನಾಗಪ್ಪ, ಮುಖಂಡರುಗಳಾದ ಚಂದ್ರಶೇಖರ್ ಪೂಜಾರ್, ಧನಂಜಯ ಕಡ್ಲೇಬಾಳು, ಅನಿಲ್ ಕುಮಾರ್ ನಾಯ್ಕ, ಕೃಷ್ಣಪ್ಪ, ಐರಣಿ ಅಣ್ಣೇಶ್ ಇತರರಿದ್ದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ಮನೆಯಲ್ಲಿ ಕೆಲಸ ಮಾಡುವಾಗ ವಿಶೇಷ ಎಚ್ಚರ ವಹಿಸಿ. ಮನೆ ಬಳಕೆಯ ವಸ್ತುಗಳ ಯಾವುದೇ ಅಸಡ್ಡೆಯ ಬಳಕೆ ನಿಮಗೆ ಸಮಸ್ಯೆ ಉಂಟುಮಾಡಬಹುದು. ಇಂದು ನೀವು ಯಾತ್ರೆಯಲ್ಲಿ ಹೋಗುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ಗಮನ ಹರಿಸಿ ಅವುಗಳನ್ನು ಕಡಿಯುವ ಸಧ್ಯತೆ ಇದೆ. ವಿಶೇಷವಾಗಿ ನಿಮ್ಮ ಹಣದಚೀಲವನ್ನು ಎಚ್ಚರಿಕೆಯಿಂದಿಡಿ.

### ವೃಷಭ ರಾಶಿ

ಆರೋಗ್ಯ ಚೆನ್ನಾಗಿರುತ್ತದೆ. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ. ಒಮ್ಮೆ ನಿಮ್ಮ ಜೀವನಸಂಗಾತಿಯನ್ನು ನೀವು ಭೇಟಿಯಾದ ಮೇಲೆ, ಬೇರೇನೂ ಬೇಕಾಗಿರುವುದಿಲ್ಲ. ನೀವು ಇಂದು ಈ ಸತ್ಯವನ್ನು ಅರಿತುಕೊಳ್ಳುತ್ತೀರಿ. ಸಹಭಾಗಿತ್ವದ ಅವಕಾಶಗಳು ಚೆನ್ನಾಗಿ ಕಂಡರೂ ಎಲ್ಲವನ್ನೂ ಸ್ಪಷ್ಟವಾಗಿ ತಿಳಿದುಕೊಳ್ಳಿ.

### ಮಿಥುನ ರಾಶಿ

ಸೃಜನಶೀಲ ಆಸಕ್ತಿಗಳು ನಿಮ್ಮನ್ನು ಶಾಂತವಾಗಿರಿಸುತ್ತವೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು. ಒಬ್ಬ ಹಳೆಯ ಸ್ನೇಹಿತರು ಸಂಜೆ ನಿಮಗೆ ಕರೆ ಮಾಡುತ್ತಾರೆ ಮತ್ತು ಹಳೆಯ ನೆನಪುಗಳನ್ನು ತೆರೆದಿಡುತ್ತಾರೆ. ನಿಮ್ಮ ಸಂಗಾತಿಯ ಪ್ರೀತಿ ನಿಜವಾಗಿಯೂ ಭಾವಪೂರ್ಣವಾಗಿದೆ ಎಂದು ಇಂದು ನೀವು ತಿಳಿದುಕೊಳ್ಳುತ್ತೀರಿ. ಕೆಲಸದಲ್ಲಿ ಇಂದು ಎಲ್ಲವೂ ನಿಮ್ಮ ಪರವಾಗಿರುತ್ತವೆ

### ಕರ್ಕ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ನೀವು ಇಂದು ಗಣನೀಯ ಪ್ರಮಾಣದ ಹಣವನ್ನು ಸಹ ಹೊಂದಿರುತ್ತೀರಿ ಮತ್ತು ಅದರೊಂದಿಗೆ ಮನಸ್ಸಿನ ಶಾಂತಿ ಇರುತ್ತದೆ. ಕೌಟುಂಬಿಕ ಸಮಸ್ಯೆಗೆ ಮೊದಲ ಆದ್ಯತೆ ನೀಡಬೇಕು.ನೀವು ವಿಳಂಬವಿಲ್ಲದೇ ಇದನ್ನು ಚರ್ಚಿಸಬೇಕು, ಏಕೆಂದರೆ ಒಮ್ಮೆ ಇದನ್ನು ಬಗೆಹರಿಸಿದ ನಂತರ ಮನೆಯಲ್ಲಿನ ಜೀವನ ನಡೆಸಲು ಹೆಚ್ಚು ಸುಲಭವಾಗುತ್ತದೆ

### ಸಿಂಹ ರಾಶಿ

ಪತ್ನಿ ನೀವು ಹುರಿದುಂಬಿಸಬಹುದು. ನಿಮ್ಮ ಸ್ನೇಹಿತರೊಬ್ಬರು ಇಂದು ದೊಡ್ಡ ಸಾಲವನ್ನು ಕೇಳಬಹುದು, ನೀವು ಅವರಿಗೆ ಈ ಹಣವನ್ನು ಕೊಟ್ಟರೆ, ನೀವು ಆರ್ಥಿಕ ತೊಂದರೆಗೊಳಗಾಗಬಹುದು. ಹೊಸ ಕೌಟುಂಬಿಕ ಉದ್ಯಮವನ್ನು ಆರಂಭಿಸಲು ಪವಿತ್ರವಾದ ದಿನ. ಇದನ್ನು ಒಂದು ದೊಡ್ಡ ಯಶಸ್ಸಾಗಿಸಲು ಇತರ ಸದಸ್ಯರ ಸಹಾಯ ತೆಗೆದುಕೊಳ್ಳಿ. ನಿಮ್ಮ ಪ್ರೀತಿಪಾತ್ರರ. ವೃತ್ತಿಪರ ರಂಗದಲ್ಲಿ ಜವಾಬ್ದಾರಿ ಹೆಚ್ಚಾಗುವ ಸಾಧ್ಯತೆಯಿದೆ.

### ಕನ್ಯಾ ರಾಶಿ

ನಿಮ್ಮ ಭರವಸೆ ಒಂದು ಸಮೃದ್ಧ, ಸೂಕ್ಷ್ಮ ಪರಿಮಳಯುಕ್ತ ಮತ್ತು ಬೆರಗಗೊಳಿಸುವ ಹೂವಿನ ಹಾಗೆ ಅರಳುತ್ತದೆ. ಹಣಕಾಸಿನಲ್ಲಿ ಸುಧಾರಣೆ ದೀರ್ಘಕಾಲದಿಂದ ಬಾಕಿಯಿರುವ ನಿಮ್ಮ ಬಾಕಿಗಳು ಮತ್ತು ಬಿಲ್ಲುಗಳನ್ನು ಪಾವತಿಸುವುದನ್ನು ಅನುಕೂಲಕರವಾಗಿಸುತ್ತದೆ. ಕುಟುಂಬದ ಬಾಧ್ಯತೆಗಳನ್ನು ಮರೆಯಬೇಡಿ. ಅನಿರೀಕ್ಷಿತ ಪ್ರಣಯ ಭಾವ. ಸಹ ಕಾರ್ಮಿಕರು ಮತ್ತು ಕೈಕೆಳಗೆ ಕೆಲಸ ಮಾಡುವವರು ಚಿಂತೆ ಹಾಗೂ ಒತ್ತಡದ ಕ್ಷಣಗಳನ್ನು ತರುತ್ತಾರೆ.

### ತುಲಾ ರಾಶಿ

ನೀವು ಮನಸ್ಸಿನ ಸಮಸ್ಯೆಗಳನ್ನು ಬಗೆಹರಿಸಲು ನಿಮ್ಮ ಬುದ್ಧಿವಂತಿಕೆ, ಜಾಣತನ ಮತ್ತು ಸಭ್ಯತೆಯನ್ನು ಬಳಸಬೇಕಾಗುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ
ಶೀಘ್ರದಲ್ಲೇ ಸುಧಾರಿಸುತ್ತದೆ. ಕುಟುಂಬದ ಸದಸ್ಯರೊಂದಿಗೆ ಒಂದು ಶಾಂತಿಯುತ ಮತ್ತು ಶಾಂತ ದಿನವನ್ನು ಆನಂದಿಸಿ ಜನರು ಸಮಸ್ಯೆಗಳೊಡನೆ ನಿಮ್ಮನ್ನು ಸಮೀಪಿಸಿದರೆ – ಅವರನ್ನು ನಿರ್ಲಕ್ಷಿಸಿ ಮತ್ತು ನಿಮ್ಮ ಮನಸ್ಸಿನಲ್ಲಿ ಈ ಚಿಂತೆ ಬೇರೂರಲು ಅವಕಾಶ ನೀಡಬೇಡಿ.

### ವೃಶ್ಚಿಕ ರಾಶಿ

ನಿಮ್ಮ ಸಂಜೆ ವಿಭಿನ್ನ ಪ್ರತಿಕ್ರಿಯೆಗಳಿಂದ ಗುರುತಿಸಲ್ಪಡುತ್ತದೆ ಹಾಗೂ ಇದು ನಿಮ್ಮನ್ನು ಉದ್ವಿಗ್ನವಾಗಿರಿಸಬಹುದು. ಆದರೆ ಹೆಚ್ಚು ಚಿಂತಿಸುವ ಅಗತ್ಯವಿಲ್ಲ – ನಿಮ್ಮ ಸಂತೋಷ ನಿಮಗೆ ನಿರಾಸೆಗಿಂತ ಹೆಚ್ಚು ಆನಂದ ನೀಡುತ್ತದೆ. ಕೆಲವು ದುಃಖದ ಸಮಯದಲ್ಲಿ ನೀವು ಸಂಗ್ರಹಿಸುವ ಹಣ ಮಾತ್ರ ನಿಮ್ಮ ಕೆಲಸಕ್ಕೆ ಬರುತ್ತದೆ ಎಂಬುದನ್ನು ಚೆನ್ನಾಗಿ ಅರ್ಥ ಮಾಡಿಕೊಳ್ಳಿ . ಆದ್ದರಿಂದ ಇಂದು ಹಣವನ್ನು ಸಂಗ್ರಹಿಸುವ ಬಗ್ಗೆ ಆಲೋಚಿಸಿ.

### ಧನು ರಾಶಿ

ಕುಡಿಯುವ ಮತ್ತು ತಿನ್ನುವಾಗ ಎಚ್ಚರದಿಂದಿರಿ. ಅಸಡ್ಡೆ ನಿಮಗೆ ಅನಾರೋಗ್ಯ ತರಬಹುದು. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ. ಕೌಟುಂಬಿಕ ಜವಾಬ್ದಾರಿಗಳು ಹೆಚ್ಚಾಗುತ್ತವೆ ಇವು ನಿಮ್ಮ ಮನಸ್ಸಿನ ಮೇಲೆ ಒತ್ತಡ ತರುತ್ತವೆ.

### ಮಕರ ರಾಶಿ

ನಿಮ್ಮ ಹಠಮಾರಿ ಧೋರಣೆ ಕೇವಲ ಸಮಯ ವ್ಯರ್ಥವಾದದ್ದರಿಂದ ಆದನ್ನು ನಿಮ್ಮ ಸಂತೋಷದ ಜೀವನದ ಸಲುವಾಗಿ ತೊರೆದುಬಿಡಿ. ಇಂದು ನೀವು ಅನಗತ್ಯವಾಗಿ ಹಣವನ್ನು ಖರ್ಚು ಮಾಡುವುದನ್ನು ನಿಲ್ಲಿಸಬೇಕು, ಇಲ್ಲದಿದ್ದರೆ ಅಗತ್ಯವಾದ ಸಮಯದಲ್ಲಿ ನಿಮ್ಮ ಹತ್ತಿರ ಹಣದ ಕೊರತೆ ಇರಬಹುದು. ಸಾಮಾಜಿಕ ಕೂಟಗಳಲ್ಲಿ ನಿಮ್ಮ ಹಾಸ್ಯದ ಪ್ರಕೃತಿ ನಿಮ್ಮನ್ನು ಜನಪ್ರಿಯಗೊಳಿಸುತ್ತದೆ. ಯಾರಿಗಾದರೂ ಅವರ ಪ್ರೀತಿ ಯಶಸ್ವಿಯಾಗುವುದನ್ನು ಸ್ವತಃ ದೃಶ್ಯೀಕರಿಸುವುದು ಸಹಾಯ ಮಾಡಿ.

### ಕುಂಭ ರಾಶಿ

ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ಇಂದು ನಿಮ್ಮ ಆಪ್ತರೊಂದಿಗೆ ಜಗಳವಾಗಬಹುದು ಮತ್ತು ವಿಷಯ ನ್ಯಾಯಾಲಯ ಕಚೇರಿಯ ವರೆಗೂ ಹೋಗಬಹುದು.ಇದರ ಕಾರಣದಿಂದ ನಿಮ್ಮ ವಿಶೇಷ ಹಣ ಖರ್ಚಾಗಬಹುದು.

### ಮೀನ ರಾಶಿ

ನೀವು ಮಾನಸಿಕವಾಗಿ ಅತ್ಯಂತ ದುರ್ಬಲರಾಗಿರುತ್ತೀರಿ – ಆದ್ದರಿಂದ ನೀವು ನೋವಿಗೀಡಾಗಬಹುದಾದ ಸಂದರ್ಭಗಳಿಂದ ದೂರ ಉಳಿಯಿರಿ. ನಿಮ್ಮ ಆರ್ಥಿಕ ಸ್ಥಿತಿ ಸುಧಾರಿಸಿದರೂ ಹಣದ ಹೊರಹರಿವು ನಿಮ್ಮ ಯೋಜನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ತೊಂದರೆಯುಂಟುಮಾಡುತ್ತದೆ. ಮನೆಯ ಸಮಸ್ಯೆಗಳಿಗೆ ತಕ್ಷಣ ಗಮನ ನೀಡುವ ಅಗತ್ಯವಿರುತ್ತದೆ.

## ಅಂಬೇಡ್ಕರ್ ವಸತಿ ಶಾಲೆಗೆ ಜಡ್ಜ್ ಭೇಟಿ



**ಚಿಕ್ಕಮಗಳೂರು:** ನಗರದ ಕಲ್ಯಾಣನಗರದಲ್ಲಿರುವ ಡಾ.ಅಂಬೇಡ್ಕರ್ ವಸತಿ ಶಾಲೆಯ ಮಕ್ಕಳಿಗೆ ಪರಿಶುದ್ಧ ಹಾಗೂ ಗುಣಮಟ್ಟದ ಆಹಾರವನ್ನು ನೀಡಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ವಿ.ಹನುಮಂತಪ್ಪ ಅವರು ನಿರ್ದೇಶನ ನೀಡಿದ್ದಾರೆ.

ಡಾ.ಅಂಬೇಡ್ಕರ್ ವಸತಿ ಶಾಲೆಯಲ್ಲಿ ಆಗಸ್ಟ್ 9 ರಂದು ಕಲುಷಿತ ಆಹಾರ ಸೇವಿಸಿ ಮೂವರು ವಿದ್ಯಾರ್ಥಿಗಳು ಅಸ್ವಸ್ಥರಾಗಿದ್ದ ಹಿನ್ನೆಲೆಯಲ್ಲಿ ಈ ಶಾಲೆಗೆ ನಿನ್ನೆ ಭೇಟಿ ನೀಡಿದ

ಅವರು, ವಿದ್ಯಾರ್ಥಿಗಳ ಕುಂದುಕೊರತೆಗಳನ್ನು ವಿಚಾರಿಸಿದರಲ್ಲದೆ, ಶಿಕ್ಷಣದ ಬಗ್ಗೆ ಅರಿವು ಮೂಡಿಸಿದರು. ಮಧ್ಯಾಹ್ನದ ವೇಳೆ ಮಕ್ಕಳ ಜೊತೆಯಲ್ಲೇ ಉಪ ಆಹಾರವನ್ನು ಸ್ವೀಕರಿಸಿದರು.

## ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆ




**ದಾವಣಗೆರೆ:** ಜಿಲ್ಲಾಡಳಿತ ವತಿಯಿಂದ ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಗುತ್ತಿದ್ದು ಜಿಲ್ಲಾ ಕ್ರೀಡಾಂಗಣದಲ್ಲಿ ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಅವರು ಬೆಳಗ್ಗೆ 9 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸುವರು.

ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್ ಭೋಜೇಗೌಡ, ಡಿ.ಎಸ್ ಅರುಣ್, ಚಿದಾನಂದ. ಎಂ.ಗೌಡ, ಕೆ.ಎಸ್ ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ಬ್ರಾಹ್ಮಣ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಆಸಗೋಡು ಜಯಸಿಂಹ, ಕರ್ನಾಟಕ ತಾಂಡಾ ಅಭಿವೃದ್ಧಿ ನಿಗಮ ನಿಯಮಿಯ ಅಧ್ಯಕ್ಷರಾದ ಎನ್. ಜಯದೇವನಾಯ್ಕ, ದೂಡಾ ಅಧ್ಯಕ್ಷರಾದ ದಿನೇಶ್. ಕೆ.ಶೆಟ್ಟಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಶಾಮನೂರು.ಟಿ.ಬಸವರಾಜ್, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಗಿತ್ತೆ ಮಾಧವ್ ವಿಠ್ಠಲ್‌ರಾವ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಆಯುಕ್ತೆ ರೇಣುಕಾ ಉಪಸ್ಥಿತರಿರುವರು.

## ಹೊಸ ಹೊಸ ಪಠ್ಯಗಳನ್ನು ಅಳವಡಿಸಬೇಕು



**ದಾವಣಗೆರೆ** : ದಿನಾಂಕ: 12.08.2025 ರಂದು ನಗರದ ಎ.ಆರ್.ಎಂ. ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತಕೋತ್ತರ ಕೇಂದ್ರ. ಐ.ಕ್ಯೂ.ಎ.ಸಿ ಘಟಕ ಹಾಗೂ ಇತಿಹಾಸ ವಿಭಾಗದ ವತಿಯಿಂದ ವಿಶ್ವ ವಿದ್ಯಾನಿಲಯ ಮಟ್ಟದ ಒಂದು ದಿನದ ಎಸ್.ಇ.ಪಿ ಇತಿಹಾಸ ಪಠ್ಯಕ್ರಮದ ಕಾರ್ಯಗಾರ ಏರ್ಪಡಿಸಲಾಗಿತ್ತು.

ದಾವಣಗೆರೆ ವಿಶ್ವವಿದ್ಯಾನಿಲಯದ ಇತಿಹಾಸ ವಿಭಾಗದ ಮುಖ್ಯಸ್ಥ ಡಾ. ವೆಂಕಟರಾವ್ ಎಂ ಪಾಲಾಟಿ ಅವರು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ವಿದ್ಯಾರ್ಥಿಗಳಿಗೆ ಹೊಸ ಹೊಸ ಪಠ್ಯಕ್ರಮಗಳನ್ನು ಅಳವಡಿಸಬೇಕು. ಹಳೆಯದನ್ನೇ ಮತ್ತೆ ಮತ್ತೆ ಬೋಧಿಸುವುದಕ್ಕಿಂತ ಹೊಸದನ್ನು ತಿಳಿಸಬೇಕು. ವಿದ್ಯಾರ್ಥಿಗಳ ಸರ್ವತೋಮುಖವಾಗಿ ಬೆಳಸುವ ಪಠ್ಯಕ್ರಮಗಳು ಬೇಕು. ಪ್ರಸ್ತುತ ಸಂದರ್ಭದಲ್ಲಿ ವಿದ್ಯಾರ್ಥಿಗಳ ಪ್ರವೇಶಾತಿ ಇಲ್ಲದೆ ಬೇರೆ ಬೇರೆ ವಿಶ್ವ ವಿದ್ಯಾಲಯಗಳಲ್ಲಿ ಇತಿಹಾಸ ವಿಭಾಗಗಳು ಮುಚ್ಚಿಕೊಂಡಿವೆ. ಹಾಗೆಯೇ ಓದುವವರ ಸಂಖ್ಯೆ ಕಡಿಮೆಯಾಗಿದೆ.ವಿದ್ಯಾರ್ಥಿಗಳ ಗಮನ ಸೆಳೆಯುವಂತಹ ಪಠ್ಯಕ್ರಮಗಳ ಬಗ್ಗೆ ಹೆಚ್ಚು ಯೋಚಿಸಬೇಕು ಎಂದು ಮಾತನಾಡಿದರು.

ವೇದಿಕೆಯ ಅಧ್ಯಕ್ಷತೆಯನ್ನು ಪ್ರಾಂಶುಪಾಲ ಕಾಡಜ್ಜಿ ಶಿವಪ್ಪ ವಹಿಸಿದ್ದರು. ಇತಿಹಾಸ ಅಧ್ಯಾಪಕರ ವೇದಿಕೆಯ ಅಧ್ಯಕ್ಷರಾದ ಶ್ರೀ ಜಗದೀಶ ಸಿ. ಡಾ ಕೊಟ್ರಪ್ಪ ಸಿ ಕೆ. ಡಾ ಸದಾಶಿವ.ಅಂಜಿನಪ್ಪ ಡಿ ಹಾಗೂ ಕಾರ್ಯಕ್ರಮದ ಸಂಯೋಜಕರಾದ ಡಾ ರಾಕೇಶ ಬಿ ಸಿ ಉಪಸ್ಥಿತರಿದ್ದರು. ಬಸವರಾಜ ವಿ ದಮ್ಮಳಿ, ಮನೋಹರ ಎಸ್ ಬಿ, ಶಾಂತನಾಯ್ಕ ಹೆಚ್, ಮಹಮ್ಮದ್ ರಿಯಾಜ್, ಮಧುಮಾಲತಿ, ಗಣೇಶ, ಗೀತ ಪಾಟೀಲ, ಸುಮ, ಮಂಜುಳ ವಿಶ್ವ ವಿದ್ಯಾನಿಲಯದ ವ್ಯಾಪ್ತಿಯ ಪದವಿ ಕಾಲೇಜಿನ ಪ್ರಾಧ್ಯಾಪಕರು ಭಾಗವಹಿಸಿದ್ದರು. ಡಾ ರಾಕೇಶ್ ಬಿ ಸಿ ಸ್ವಾಗತಿಸಿದರು. ಮೌನೇಶ್ವರ ವಂದಿಸಿದರು. ಡಾ ವಿಶ್ವನಾಥ ನಿರೂಪಿಸಿದರು.

## 78ನೇ ಸ್ವಾತಂತ್ರ್ಯ ದಿನದ ಅಂಗವಾಗಿ ತಿರಂಗ ಯಾತ್ರೆ



**ಸೊರಬ:** ಬಿಜೆಪಿ ಯುವ ಮೋರ್ಚಾ ವತಿಯಿಂದ ಆಪರೇಷನ್ ಸಿಂಧೂರ ಮತ್ತು ಆಪರೇಷನ್ ಮಹಾದೇವ ಯಶಸ್ವಿಗಾಗಿ ವೀರಯೋಧರಿಗೆ ನಮನ ಹಾಗೂ 78ನೇ ಸ್ವಾತಂತ್ರ್ಯ ದಿನದ ಅಂಗವಾಗಿ ತಿರಂಗ ಯಾತ್ರೆ ಬೈಕ್ ರ್‍ಯಾಲಿ ಪಟ್ಟಣದಲ್ಲಿ ಮಂಗಳವಾರ ನಡೆಯಿತು.

ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದ ಮಾಜಿ ಅಧ್ಯಕ್ಷ ಡಾ. ರಾಜು ಎಂ. ತಲ್ಲೂರು ಮಾತನಾಡಿ, ದೇಶ ಭಕ್ತಿಯನ್ನು ಪ್ರದರ್ಶಿಸುವ ನಿಟ್ಟಿನಲ್ಲಿ ಮತ್ತು ಸಮಸ್ತ ಭಾರತೀಯರು ಒಂದು ಎಂದು ಜಗತ್ತಿಗೆ ತಿಳಿಸಲು ಪ್ರತಿಯೊಬ್ಬರು ಮನೆಗಳ ಮೇಲೆ ತಿರಂಗವನ್ನು ಹಾರಿಸಬೇಕಿದೆ. ದೇಶ ಭಕ್ತಿಯ ಮುಖೇನ ಸ್ವಾತಂತ್ರ್ಯ ಕಾಪಾಡುವುದು ಮೊದಲ ಆಶಯವಾಗಿದೆ. ಆಪರೇಶನ್ ಸಿಂಧೂರ ಮತ್ತು ಆಪರೇಶನ್ ಮಹಾದೇವ ಯಶಸ್ವಿಗೆ ಕಾರಣರಾದ ದೇಶದ ಸೈನಿಕರಿಗೆ ನಮನ ಸಲ್ಲಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯವಾಗಿದೆ. ಈ ನಿಟ್ಟಿನಲ್ಲಿ ಆ.13ರಿಂದ 15ರವರೆಗೆ ದೇಶದ ಎಲ್ಲಡೆ ಹರ್ ಘರ್ ತಿರಂಗ ಕಾರ್ಯಕ್ರಮ ನಡೆಸಲಾಗುತ್ತಿದೆ ಎಂದರು.

ಬಿಜೆಪಿ ಮುಖಂಡ ಡಾ. ಎಚ್.ಇ. ಜ್ಞಾನೇಶ್ ಮಾತನಾಡಿ, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಪ್ರಸ್ತುತ ದೇಶವು ಹಿಂದೆಂದಿಗಿಂತಲೂ ಸದೃಢವಾಗಿದೆ. ಕೇಂದ್ರದಲ್ಲಿ ವಿರೋಧ ಪಕ್ಷದವರು ವಿಭಿನ್ನ ರೀತಿಯಲ್ಲಿ ಚಿತ್ರಿಸಲು ಪ್ರಯತ್ನ ಪಡುತ್ತಿದ್ದಾರೆ. ಬಿಜೆಪಿ ಸ್ನೇಹಕ್ಕೆ ಮತ್ತು ಪ್ರೀತಿಗೆ ಮುಂದಾಳತ್ವ ವಹಿಸುವ ಪಕ್ಷವಾಗಿದೆ. ಇದಕ್ಕೆ ದಿಟ್ಟ ನಿದರ್ಶನ ಅಟಲ್ ಬಿಹಾರಿ ವಾಜಪೇಯಿಯವರು ಪ್ರಧಾನಿಯಾದ ಸಂದರ್ಭದಲ್ಲಿ ಪಾಕಿಸ್ತಾನಕ್ಕೆ ಬಸ್ ಸಂಚಾರ ವ್ಯವಸ್ಥೆ ಕೈಗೊಳ್ಳುವ ಮೂಲಕ ಸ್ನೇಹ ಹಸ್ತವನ್ನು ಚಾಚಲಾಗಿತ್ತು. ಆದರೆ ಪಾಪಿ ಪಾಕಿಸ್ತಾನ ಕಾರ್ಗಿಲ್‌ನಲ್ಲಿ ಬೆನ್ನಿಗೆ ಚೂರಿ ಹಾಕಿದ್ದನ್ನು ಎಲ್ಲರೂ ಕಂಡಿದ್ದಾರೆ. ಪುಹಲ್ಗಾಮ್‌ನಲ್ಲಿ ನಡೆದ ಘಟನೆಗೆ ಅಪರೇಶನ್ ಸಿಂಧೂರ ಹೆಸರಲ್ಲಿ ತಕ್ಕ ಉತ್ತರ ನೀಡಲಾಗಿದೆ ಎಂದರು.

ಪಟ್ಟಣದ ಶ್ರೀ ರಂಗನಾಥ ದೇವಸ್ಥಾನದ ಆರಂಭವಾದ ಬೈಕ್ ರ್‍ಯಾಲಿ ಮುಖ್ಯರಸ್ತೆ ಮಾರ್ಗವಾಗಿ ಪುರಸಭೆ ಮುಂಭಾಗದ ವೃತ್ತ, ಕೆಇಬಿ ಕಾಲೋನಿ, ನಂತರ ಪುನಃ ಶ್ರೀ ರಂಗನಾಥ ದೇವಸ್ಥಾನದವರೆಗೆ ಸಾಗಿತು.

ಬಿಜೆಪಿ ಯುವ ಮೋರ್ಚಾ ತಾಲೂಕು ಅಧ್ಯಕ್ಷ ರಾಜು ನಾಯ್ಕ್ ಮಾವಿನಬಳ್ಳಿಕೊಪ್ಪ ನೇತೃತ್ವ ವಹಿಸಿದ್ದರು. ಬಿಜೆಪಿ ತಾಲೂಕು ಅಧ್ಯಕ್ಷ ಪ್ರಕಾಶ್ ಅಗಸನಹಳ್ಳಿ, ಮಾಜಿ ಅಧ್ಯಕ್ಷ ಪ್ರಕಾಶ್ ತಲಕಾಲಕೊಪ್ಪ, ಪ್ರಮುಖರಾದ ಪಾಣಿ ರಾಜಪ್ಪ, ಶಿವಕುಮಾರ ಕಡಸೂರು, ಜಾನಕಪ್ಪ ಒಡೆಯರ್, ವಿಜಯೇಂದ್ರ ಗೌಡ, ಆಶೀಕ್ ನಾಗಪ್ಪ, ಬೆನಕಪ್ಪ, ಸುರೇಶ್ ಉದ್ರಿ, ಸಂದೀಪ ಯಲವಳ್ಳಿ, ನಂದೀಶ ಗೌಡ, ಗೀತಾ ಮಲ್ಲಿಕಾರ್ಜುನ್, ಸುಧಾ ಶಿವಮೂರ್ತಿ, ಮಲ್ಲಿಕಾರ್ಜುನ ದ್ವಾರಹಳ್ಳಿ, ಪ್ರೇಮ್ ಬಿದರಗೇರಿ, ರಮೇಶ್ ಹಸ್ವಿ, ಪುನೀತ, ಹರೀಶ್ ಪ್ರಸನ್ನ ಶೇಟ್ ಚಂದ್ರಗುತ್ತಿ, ಸೇರಿದಂತೆ ಮತ್ತಿತರರಿದ್ದರು.

## ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಸ್ಫೂರ್ತಿದಾಯಕ ವ್ಯಕ್ತಿ ರಾಜ್ಯ ಪ್ರಶಸ್ತಿ



**ದಾವಣಗೆರೆ:** ಬೆಂಗಳೂರಿನ ಸಾಂಸ್ಕೃತಿಕ ಕಲಾ ಸಂಸ್ಥೆಯಿಂದ ದಾವಣಗೆರೆಯಲ್ಲಿ ಕಳೆದ ನಾಲ್ಕು ದಶಕಗಳಿಂದ ನಿರಂತರವಾಗಿ ಕಠಿಣ ಪರಿಶ್ರಮದಿಂದ ಕರ್ನಾಟಕ ಕರಾವಳಿ ಜಿಲ್ಲೆಗಳ ಅಪ್ಪಟ ಕನ್ನಡದ ಆರಾಧನಾ ಕಲಾ ಆಧ್ಯಾತ್ಮ ಪರಂಪರೆಯ ಯಕ್ಷಗಾನವನ್ನು ವಾಣಿಜ್ಯ ನಗರಿ ದಾವಣಗೆರೆಯಲ್ಲಿ ಮೊಟ್ಟ ಮೊದಲು ಪರಿಚಯಿಸಿದ ಯಕ್ಷರಂಗ ಯಕ್ಷಗಾನ ಸಂಸ್ಥೆಯನ್ನು ಸ್ಥಾಪನೆ ಮಾಡಿ ಯಕ್ಷಗಾನವನ್ನು ದಾವಣಗೆರೆಯ ಮಹಿಳೆಯರಿಗೂ ತರಬೇತಿ ನೀಡಿ ನಿರಂತರ ಯಕ್ಷಗಾನ ಉಚಿತ ಪ್ರದರ್ಶನ ಮಾಡುತ್ತಾ ಬಂದಿರುವ ಹವ್ಯಾಸಿ ಯಕ್ಷಗಾನ ಕಲಾವಿದ ಸಾಲಿಗ್ರಾಮ ಗಣೇಶ್ ಶೆಣೈಯವರಿಗೆ ಯಕ್ಷಗಾನ ಕ್ಷೇತ್ರವನ್ನು ಗುರುತಿಸಿ "ಸ್ಫೂರ್ತಿದಾಯಕ ವ್ಯಕ್ತಿ" ರಾಜ್ಯ ಪ್ರಶಸ್ತಿಯನ್ನು ಘೋಷಿಸಲಾಗಿದೆ ಎಂದು ಬೆಂಗಳೂರಿನ ಸಾಂಸ್ಕೃತಿಕ ಕಲಾ ಸಂಘದ ಸಂಸ್ಥಾಪಕರಾದ ಸಾಗರ ಆರ್.ಕಲಾದಗಿ ತಿಳಿಸಿದ್ದಾರೆ.

ವರ್ಷಪೂರ್ತಿ ನಿರಂತರವಾಗಿ ರಾಜ್ಯ, ರಾಷ್ಟ್ರ, ಅಂತರಾಷ್ಟ್ರೀಯ ಪ್ರಶಸ್ತಿಗಳು ಮುಡಿಗೇರಿಸುತ್ತಿರುವ ಶೆಣೈಯವರಿಗೆ ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆ, ಯಕ್ಷರಂಗ ಸಂಸ್ಥೆ, ಬಿಚ್ಚುತ್ತಿ ಕುಟುಂಬ, ಚಲನಚಿತ್ರ ಅಭಿಮಾನಿಗಳ ಕ್ರಿಯಾತ್ಮಕ ಸಂಸ್ಥೆ ಸಿನಿಮಾಸಿರಿ, ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನ, ಶ್ರೀ ಗಾಯಿತ್ರಿ ಪರಿವಾರ, ಕನ್ನಡ ಸಾಹಿತ್ಯ ಪರಿಷತ್, ಕರ್ನಾಟಕ ಸಗಮ ಸಂಗೀತ ಪರಿಷತ್, ಗೌಡಸಾರಸ್ವತ ಸಮಾಜ, ಕರಾವಳಿ ಮಿತ್ರ ಮಂಡಳಿ ಮುಂತಾದ ಸಂಘ–ಸಂಸ್ಥೆಗಳ ಸರ್ವ ಸದಸ್ಯರು, ಪದಾಧಿಕಾರಿಗಳು ಅಭಿಮಾನದಿಂದ ಅಭಿನಂದಿಸಿದ್ದಾರೆ.

## ಪ್ರತಿಷ್ಠೆಗಿಂತ ಪರಿವರ್ತನೆ ಆದ್ಯತೆಯಾಗಲಿ



**ಚಿಕ್ಕಮಗಳೂರು** : ಶಿಸ್ತು, ರಾಷ್ಟ್ರೀಯತೆ ಮತ್ತು ತಾಳ್ಮೆ ನಮ್ಮದಾಗಬೇಕು. ಪ್ರತಿಷ್ಠೆಗಿಂತ ಪರಿವರ್ತನೆ ಆದ್ಯತೆಯಾಗಬೇಕು ಎಂದು ಚಿಂತಕ–ಸಾಹಿತಿ–ವಾಗ್ಮಿ ಚಟ್ನಳ್ಳಿಮಹೇಶ್ ನುಡಿದರು.

ಮಾಧ್ಯಮ ಸಂಸ್ಕೃತಿ ಪ್ರತಿಷ್ಠಾನ, ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಹಾಗೂ ಐಸಿರಿ ಫೌಂಡೇಶನ್ ಸಹಯೋಗದೊಂದಿಗೆ ಜುಲೈ26 ರಿಂದ ಆಗಸ್ಟ್24ರ ವರೆಗೆ ಆಯೋಜಿಸಿರುವ 'ಅಂಗಳದೆಡೆಗೆ ಮಂಗಳ ನುಡಿ–ನಡಿಗೆ' 'ಶ್ರಾವಣ ಮಾಸದ ಪ್ರವಚನ ಮಾಲಿಕೆ'ಯ ಅಂಗವಾಗಿ ಕಲ್ಯಾಣ ನಗರದ ಕಲ್ಮರುಡಪ್ಪ ಮನೆಯಂಗಳದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ರಕ್ಷಾಬಂಧನದೊಂದಿಗೆ ಉಪನ್ಯಾಸ ನೀಡಿದರು. ಮನೆಗಳು ಮಹಾಮನೆಗಳಾಗಬೇಕು. ಕಷ್ಟದಲ್ಲಿರುವವರಿಗೆ ಸಾಂತ್ವನ ಹೇಳುವ, ನೊಂದವರಿಗೆ ನೆರವು ನೀಡುವ, ನೈತಿಕವಾಗಿ ಶಕ್ತಿ ತುಂಬುವ ತಾಣಗಳಾಗಬೇಕು. ಸಂವಹನ, ಸಮಾಲೋಚನೆ, ಚರ್ಚೆ, ಮಾತುಕತೆಗಳ ಮೂಲಕ ಬದುಕಿನ ಜಂಜಾಟವನ್ನು ಸರಿದೂಗಿಸಬಹುದು. ಭಾವನೆಗಳು ಬಾಂಧವ್ಯವನ್ನು ಬೆಸೆಯುತ್ತದೆ ಎಂದ ಚಟ್ನಳ್ಳಿಮಹೇಶ್, ಶ್ರಾವಣದಲ್ಲಿ ಬರುವ ರಕ್ಷಾಬಂಧನ ಭಾವಗಳನ್ನು ಬೆಸೆಯುತ್ತದೆ ಎಂದರು. ಹಿರಿಯ ರೈತಮಹಿಳೆ ಪಾರ್ವತಮ್ಮ ಜ್ಯೋತಿಬೆಳಗಿ ಕಾರ್ಯಕ್ರಮ ಉದ್ಘಾಟಿಸಿದರು. ಬೇಲೂರಿನ ಚಂದನ್ ಸಿರಿಕಂಠದಲ್ಲಿ ಶ್ರಾವಣ ಗೀತಗಾಯನ ಗಮನಸೆಳೆಯಿತು. ಬಾಲಕ ಖುಷಿಕ್ ವಚನ ಹಾಡಿದನು.ಐಸಿರಿ ಫೌಂಡೇಶನ ಅಧ್ಯಕ್ಷ ರೋಹನಭಾರ್ಗವಪುರಿ ಸ್ವಾಗತಿಸಿ, ಮಾ.ಸಂ.ಪ್ರ.ಅಧ್ಯಕ್ಷ ಪ್ರಭುಲಿಂಗಶಾಸ್ತ್ರಿ ವಂದಿಸಿದರು. ಉಪನ್ಯಾಸಕ ಈಶ್ವರಪ್ಪ ಮತ್ತು ವಿದ್ಯಾರ್ಥಿನಿ ಸಿಂಧೂ ಅನಿಸಿಕೆ ವ್ಯಕ್ತಪಡಿಸಿದರು. ಕಲ್ಯಾಣನಗರ ಸಾಹಿತ್ಯವೇದಿಕೆ ಅಧ್ಯಕ್ಷ ಲೋಕೇಶ್ವಪ್ಪ ಉಪನ್ಯಾಸಕ ಷಣ್ಮುಖಪ್ಪ, ಸೋಮಶೇಖರ್ ಮತ್ತಿತರರು ಪಾಲ್ಗೊಂಡಿದ್ದರು.

## ಹೆಬ್ಬಾಳ್ ಟೋಲ್ ಅವ್ಯವಸ್ಥೆ ಸರಿಪಡಿಸಲು ಡಿಸಿಗೆ ಮನವಿ

**ದಾವಣಗೆರೆ:** ರಾಷ್ಟ್ರೀಯ ಹೆದ್ದಾರಿ ಹೆಬ್ಬಾಳ ಟೋಲ್‌ನ ಅವ್ಯವಸ್ಥೆ ಸರಿಪಡಿಸುವಂತೆ ಜೆಡಿಎಸ್ ಜಿಲ್ಲಾ ಹಿರಿಯ ಉಪಾಧ್ಯಕ್ಷ ಮತ್ತು ಲಯನ್ಸ್ ಕ್ಲಬ್ ಮಾಜಿ ಅಧ್ಯಕ್ಷ ಎಸ್. ಓಂಕಾರಪ್ಪ ಜಿಲ್ಲಾಧಿಕಾರಿಗೆ ಮನವಿ ಮಾಡಿದ್ದಾರೆ.

ದಾವಣಗೆರೆ–ಬೆಂಗಳೂರು ಮಾರ್ಗದಲ್ಲಿ ಬರುವ ಹೆಬ್ಬಾಳ ಟೋಲ್‌ನಲ್ಲಿ ದಿನನಿತ್ಯ ಓಡಾಡುವ ರೈತರು, ಕೂಲಿ ಕಾರ್ಮಿಕರು, ಬಡವರು ಹಾಗು ಟೋಲ್‌ನಲ್ಲಿ ಹಣ ಕಟ್ಟಲು ಸಾಧ್ಯವಾಗದ ಹಳ್ಳಿಯವರು ಇದೇ ರಸ್ತೆಯಲ್ಲಿ ಸಾಗಿದರೂ ಸಹ ಟೋಲ್ ಹಣ ಪಾವತಿಸಬೇಕಾಗಿದೆ. ಆದ್ದರಿಂದ ಸರ್ವೀಸ್ ರಸ್ತೆಯಲ್ಲಿ ಪ್ರಯಾಣಿಸಿದ ವಾಹನಗಳಿಗೆ ಟೋಲ್ ಮುಕ್ತಗೊಳಿಸುವ ಮೂಲಕ ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡಬೇಕೆಂದು ಅವರು ಕೋರಿದ್ದಾರೆ.ಅಲ್ಲದೇ, ಟೋಲ್ ನಿಯಮದ ಪ್ರಕಾರ ಕನಿಷ್ಠ ಮೂಲಭೂತ ಸೌಕರ್ಯಗಳಾದ ಶೌಚಾಲಯ, ಕ್ಯಾಪಿಟೇರಿಯಾ, ಫೋನಿನ ಸೌಲಭ್ಯ, ಆಂಬ್ಯುಲೆನ್ಸ್ ಈ ಯಾವ ವ್ಯವಸ್ಥೆಯೂ ಅಲ್ಲಿಲ್ಲ. ಕೂಡಲೇ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು. ಈ ಹೆಬ್ಬಾಳ್ ಟೋಲ್‌ನಲ್ಲಿ ಸಿಬ್ಬಂದಿಗಳು ರೌಡಿಗಳಂತೆ ದಬ್ಬಾಳಿಕೆ, ದೌರ್ಜನ್ಯದಿಂದ ವರ್ತಿಸುತ್ತಾರೆ. ಪರಿಶೀಲಿಸಬೇಕೆಂದು ಓಂಕಾರಪ್ಪ ಮನವಿ ಮಾಡಿದ್ದಾರೆ.

## ವಿಜ್ಞಾನ ಪದವಿಪೂರ್ವ ಕಾಲೇಜಿನ ದಾಖಲಾತಿಗೆ ಅರ್ಜಿ ಆಹ್ವಾನ

**ಶಿವಮೊಗ್ಗ:** 2025–26 ನೇ ಶೈಕ್ಷಣಿಕ ಸಾಲಿಗೆ ಸಂಬಂಧಿಸಿದಂತೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಕವಶಿಸಸಂ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಭದ್ರಾವತಿ ತಾಲ್ಲೂಕು ಆನವೇರಿಯ ಮೊರಾರ್ಜಿ ದೇಸಾಯಿ ವಸತಿ ವಿಜ್ಞಾನ ಪದವಿಪೂರ್ವ ಕಾಲೇಜಿಗೆ ಪ್ರಥಮ ಪಿಯುಸಿ ದಾಖಲಾತಿಗೆ ಅರ್ಜಿ ಆಹ್ವಾನಿಸಲಾಗಿದೆ.ಪಿಸಿಎಂಬಿ ಕೋರ್ಸ್‌ನಲ್ಲಿ ಒಟ್ಟು 40 ಸೀಟ್ ಲಭ್ಯವಿದ್ದು, ಅರ್ಜಿ ಸಲ್ಲಿಸಲು ಆ.16 ಕೊನೆಯ ದಿನಾಂಕವಾಗಿದೆ. ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾದ ಆಸಕ್ತ ಪರಿಶಿಷ್ಟ ಜಾತಿ/ಪರಿಶಿಷ್ಟ ವರ್ಗ/ ಹಿಂದುಳಿದ ವರ್ಗದ ವಿದ್ಯಾರ್ಥಿಗಳು 2 ಭಾವಚಿತ್ರ, ಎಸ್‌ಎಸ್‌ಎಲ್‌ಸಿ ಪ್ರಾವಿಷನಲ್ ಅಂಕಪಟ್ಟಿ, ಎಸ್‌ಎಟಿಎಸ್ ನಂ, ಆಧಾರ್ ಕಾರ್ಡ್ ನಕಲು ಪ್ರತಿ, ಚಾಲ್ತಿಯಲ್ಲಿರುವ ಜಾತಿ ಅಥವಾ ಆದಾಯ ಪ್ರಮಾಣ ಪತ್ರ ನಕಲುಪ್ರತಿ, ಪೋಷಕರು ಅಥವಾ ಹಿಂದಿನ ಶಾಲೆಯ ಮುಖ್ಯೋಪಾಧ್ಯಾಯರ ಮೊಬೈಲ್ ಸಂಖ್ಯೆ, ವಿಶೇಷ ಪ್ರಮಾಣ ಪತ್ರವನ್ನು ಅರ್ಜಿಯೊಂದಿಗೆ ಲಗತ್ತಿಸಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ:9535636963 ಗೆ ಸಂಪರ್ಕಿಸಬಹುದೆಂದು ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ಡಿ ಮಲ್ಲೇಶಪ್ಪ ತಿಳಿಸಿದ್ದಾರೆ.

## ಹಾಸ್ಟೆಲ್ ಪ್ರವೇಶಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ:** ಜಿಲ್ಲಾ ಗಂಗಾಮತಸ್ಥರ (ಬೆಸ್ತರ) ಸಮಾಜದ 2025–26ನೇ ಸಾಲಿನ ವಿದ್ಯಾರ್ಥಿಗಳಿಂದ ಹಾಸ್ಟೆಲ್ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ವಿದ್ಯಾರ್ಥಿಗಳು ಜಿಲ್ಲಾ ಗಂಗಾಮತಸ್ಥರ (ಬೆಸ್ತರ) ಸಂಘದ ಕಚೇರಿ, ಆಶ್ರಯ ಆಸ್ಪತ್ರೆ ಪಕ್ಕ, ಶಾಮನೂರು ರಸ್ತೆ, ದಾವಣಗೆರೆ ಈ ವಿಳಾಸಕ್ಕೆ ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗೆ ಸಂಘದ ಅಧ್ಯಕ್ಷ ಬಿ.ಕೆ. ಮಂಜುನಾಥ (8310121858), ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜೆ.ಉಮೇಶ್ (8073964928), ಅಶೋಕ್ ಕೋಲ್ಕುಂಟೆ (9945858010) ಅವರನ್ನು ಸಂಪರ್ಕಿಸಬಹುದು.

## ನಿಧನ ಸುದ್ದಿಗಳು

### ಶ್ರೀ ಹೆಚ್.ಸಿ. ಶ್ರೀಕಂಠ ನಿಧನ

**ದಾವಣಗೆರೆ** : ಸಿಟಿ, ಒಆಅ 'ಠ' ಬ್ಲಾಕ್ ವಾಸಿ ಅನ್ನೇಹಾಳ್ ಶ್ರೀಮತಿ ಪುಷ್ಪರವರ ಪತಿಶ್ರೀ ಹೆಚ್.ಸಿ. ಶ್ರೀಕಂಠ (ಉಪ ಕೃಷಿ ನಿರ್ದೇಶಕರು ನಿ.)ಅವರು, ದಿನಾಂಕ : 12.08.2025ರ ಮಂಗಳವಾರ ಬೆಳಿಗ್ಗೆ 10 ಗಂಟೆಗೆ ನಿಧನರಾದರು. ಮೃತರಿಗೆ 83 ವರ್ಷ ವಯಸ್ಸಾಗಿತ್ತು. ಪತ್ನಿ, ಓರ್ವ ಪುತ್ರ, ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಮೃತರ ಅಂತ್ಯಕ್ರಿಯೆಯುಬಂಧು–ಬಳಗವನ್ನು ಅಗಲಿರುವ ದಿನಾಂಕ : 13.08.2025ರ ಬುಧವಾರ ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ತಾಲ್ಲೂಕು ಅನ್ನೇಹಾಳ್ ಗ್ರಾಮದ ಮೃತರ ಸ್ವಂತ ಜಮೀನಿನಲ್ಲಿ ನೆರವೇರಿದೆ.

### ಸೈಯದ್ ಇಮ್ಮಿಯಾಜ್ ನಿಧನ

**ದಾವಣಗೆರೆ** : ಸಿಟಿ ವಿನೋಬನಗರ 3ನೇ ಮೇನ್, 13ನೇ ಕ್ರಾಸ್ ವಾಸಿ ಚೋಟು ಇಂಜಿನಿಯರಿಂಗ್ ಮಾಲೀಕರಾದ ಶ್ರೀ ಸೈಯದ್ ಇಮ್ಮಿಯಾಜ್ (55) ಇವರು ದಿ: 12.08.2025 ರ ಮಂಗಳವಾರ ರಾತ್ರಿ 7.30ಕ್ಕೆ ನಿಧನರಾದರು. ಪತ್ನಿ, ಓರ್ವ ಪುತ್ರಿ, ಸಹೋದರ–ಸಹೋದರಿ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿರುವ ಮೃತರ ದಿನಾಂಖ: 13.08.20250 ಬುಧವಾರ ಬೆಳಿಗ್ಗೆ 11 ಗಂಟೆಗೆ ನಗರದ ಪಿ.ಬಿ. ರಸ್ತೆಯಲ್ಲಿರುವ ಖಬರಸ್ಥಾನದಲ್ಲಿ ನೆರವೇರಿದೆ.

## 10 ಖಾಯಂ ಚಾಲಕ ಹುದ್ದೆ : ಮಾಜಿ ಸೈನಿಕರಿಂದ ಅರ್ಜಿ ಆಹ್ವಾನ

**ದಾವಣಗೆರೆ :** ಭಾರತ್ ಎಲೆಕ್ಟ್ರಾನಿಕ್ಸ್ ಲಿಮಿಟೆಡ್ ಬೆಂಗಳೂರು 10 ಖಾಯಂ ಚಾಲಕ ಹುದ್ದೆಗಳಿಗಾಗಿ 43 ವರ್ಷದೊಳಗಿನ ಶೇಪ್-1 ಮೆಡಿಕಲ್ ಕೆಟಗೆರಿ ಹೊಂದಿರುವ ಅರ್ಹ ಮಾಜಿ ಸೈನಿಕರಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಆಸಕ್ತ ರ್ಹ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಉತ್ತೀರ್ಣರಾಗಿದ್ದು, ಕನ್ನಡ ಭಾಷಾ ಜ್ಞಾನವನ್ನು ಕಡ್ಡಾಯವಾಗಿ ಹೊಂದಿರಬೇಕು.

ಅರ್ಜಿಯನ್ನು ತಿತಿತಿ.ಭಜಟ-ಒಟಜುಚಿ.ಟಿ/ಫಿಚಿಡಿಜಜಥಿ ನಲ್ಲಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಇಲಾಖೆ ದೂರವಾಣಿ ಸಂಖ್ಯೆ 080-22195650 ಗೆ ಸಂಪರ್ಕಿಸಬಹುದು ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಉಪನಿರ್ದೇಶಕ ಡಾ.ಸಿ.ಎ.ಹಿರೇಮಠ ತಿಳಿಸಿದ್ದಾರೆ.

## ವೈದ್ಯಕೀಯ ಮತ್ತು ದಂತ ವೈದ್ಯಕೀಯ ವಿದ್ಯಾಭ್ಯಾಸಕ್ಕೆ ಅರ್ಜಿ ಆಹ್ವಾನ

**ದಾವಣಗೆರೆ:** ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲಿ ಮಾಜಿ ಸೈನಿಕರು, ಮಾಜಿ ಸೈನಿಕ ಅವಲಂಬಿತ ಮಕ್ಕಳ ವೈದ್ಯಕೀಯ ಮತ್ತು ದಂತ ವೈದ್ಯಕೀಯ ವ್ಯಾಸಂಗಕ್ಕಾಗಿ ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯದ ಸೀಟು ಹಂಚಿಕೆ ಮೇರೆಗೆ ಕೇಂದ್ರಿಯ ಸೈನಿಕ ಮಂಡಳಿಯಿಂದ ಡಿಫೆನ್ಸ್ ಕೋಟಾದಡಿ ಅರ್ಜಿ ಆಹ್ವಾನಿಸಲಾಗಿದೆ.

ರಾಷ್ಟ್ರೀಯ ಅರ್ಹತೆ ಮತ್ತು ಪ್ರವೇಶ ಪರೀಕ್ಷೆ (ನೀಟ್) ಯಲ್ಲಿ ಅರ್ಹತೆ ಪಡೆದಿರುವ ವಿದ್ಯಾರ್ಥಿಗಳು ಕೆ.ಎಸ್.ಬಿ ಜಾಲತಾಣದ ಬದಲಾಗಿ ಗೂಗಲ್ ಫಾರಂ ಮೂಲಕ ಆಗಸ್ಟ್ 15ರೊಳಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಕಲ್ಯಾಣ ಇಲಾಖೆಯಿಂದ ಪಡೆದ ದೃಢೀಕೃತ ಅರ್ಹತಾ ಪ್ರಮಾಣ ಪತ್ರದೊಂದಿಗೆ ಜಾಲತಾಣ DESW Website - www.desw.gov.in and DGR Website – www.dgrindia.gov.in ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ದೂರವಾಣಿ ಸಂಖ್ಯೆ 080182-220925 ಗೆ ಸಂಪರ್ಕಿಸಬಹುದು ಎಂದು ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಾಮಧೇಯ ಶವ ಪತ್ತೆ

**ದಾವಣಗೆರೆ :** ನಗರದ ಚಿಗಟೇರಿ ಜಿಲ್ಲಾ ಆಸ್ಪತ್ರೆಯ ವಾರ್ಡ್ ನಂ: 209ರಲ್ಲಿ ಹಾವೇರಿ ಜಿಲ್ಲೆಯ ಸುಣಗಾರ ಗ್ರಾಮದ ವಾಸಿಯಾದ ಅಶೋಕ ಬಿನ್ ರಾಮಪ್ಪ (31 ವರ್ಷ) ವ್ಯಕ್ತಿ ಮೃತನಾದ ಕುರಿತು ದಾವಣಗೆರೆ ಬಡಾವಣೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಮೃತರ ಚಹರೆ ವಿವರ: ಅಶೋಕ 6 ಅಡಿ ಎತ್ತರ, ಕೋಲುಮುಖ, ತೆಳುವಾದ ಮೈಕಟ್ಟು, ಗೋಧಿ ಮೈಬಣ್ಣ, ಬಚ್ಚುಬಾಯಿ ಸುಮಾರು 3 ಇಂಚು ತಲೆ ಕೂದಲು, ಕಪ್ಪು ಮತ್ತು ಕೆಂಪು ಪಟ್ಟಿಯ ಟೀ ಶರ್ಟ್, ಮೆರೂನ್ ಕಲರ್ ಚಡ್ಡಿಯನ್ನು ಧರಿಸಿರುತ್ತಾರೆ. ವಾರಸುದಾರರು ಇದ್ದಲ್ಲಿ ಬಡಾವಣೆ ಪೊಲೀಸ್ ಇನ್ಸ್‌ಪೆಕ್ಟರ್ ದೂರವಾಣಿ ಸಂಖ್ಯೆ 9480803249, 08192-272012,259213,253400 ತಿಳಿಸಬಹುದು.

## ಕುರಿ ಮತ್ತ ಮೇಕೆ ಸಾಕಾಣಿಕೆ ತರಬೇತಿ

**ದಾವಣಗೆರೆ:** ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಆಗಸ್ಟ್ ತಿಂಗಳ ಆಗಸ್ಟ್ 11 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರಿಗೆ ಉಚಿತ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದೆ.

ಸ್ವಯಂ ಉದ್ಯೋಗಿಗಳಾಗಲು ಇಚ್ಚಿಸುವ 18 ರಿಂದ 35 ವರ್ಷ ವಯಸ್ಸಿನ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರು ಈ ಶಿಬಿರದಲ್ಲಿ ಭಾಗವಹಿಸಬಹುದು.

ಆಸಕ್ತಿಯುಳ್ಳ ಶಿಬಿರಾರ್ಥಿಗಳು ಆಗಸ್ಟ್ 6 ರಂದು ಬೆಳಗ್ಗೆ 9 ಗಂಟೆಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ, ಸೊಣ್ಣಹಳ್ಳಿಪುರ, ಹಸಿಗಾಳ (ಅಂಚೆ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಡೆಯುವ ನೇರ ಸಂದರ್ಶನಕ್ಕೆ ವಿದ್ಯಾರ್ಹತೆಗಳೊಂದಿಗೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ 9505894247, 8970476050, 9591514154, 9686248369, 8970446644 ಗಳಿಗೆ ಸಂಪರ್ಕಿಸಬಹುದೆಂದು ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ.

## ರಾಜ್ಯ ಪ್ರಶಸ್ತಿಗೆ ಅರ್ಜಿ

**ಚಿತ್ರದುರ್ಗ:** ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ರಾಜ್ಯ ಪ್ರಶಸ್ತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 15 ಅರ್ಜಿ ಸಲ್ಲಿಸಲು ಕೊನೆಯ ದಿನ

ವಿಶ್ವ ವಿಕಲಚೇತನರ ದಿನಾಚರಣೆಯನ್ನು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ವತಿಯಿಂದ 2025ರ ಡಿಸೆಂಬರ್ 03 ರಂದು ಬೆಂಗಳೂರಿನಲ್ಲಿ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸೇವೆ ಮಾಡಿದ ಸಂಸ್ಥೆಗಳಿಗೆ, ವಿಶೇಷ ಶಿಕ್ಷಕರಿಗೆ ಮತ್ತು ವೈಯಕ್ತಿಕ ಪ್ರಶಸ್ತಿಗಳನ್ನು ರಾಜ್ಯ ಮಟ್ಟದಲ್ಲಿ ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿನ ಸಮಿತಿಯಲ್ಲಿ ಆಯ್ಕೆ ಮಾಡಿ ವಿಶ್ವ ವಿಕಲಚೇತನ ದಿನಾಚರಣೆಯಂದು ಪ್ರದಾನ ಮಾಡಲಾಗುವುದು. ಚಿತ್ರದುರ್ಗ ಜಿಲ್ಲೆಯಲ್ಲಿ ವಿಕಲಚೇತನರ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸುತ್ತಿರವ ವಿಶೇಷ ಶಿಕ್ಷಕರ ವಿಭಾಗ, ವೈಯಕ್ತಿಕ ವಿಭಾಗ, ಮತ್ತು ಸಂಸ್ಥೆಗಳ ವಿಭಾಗದಲ್ಲಿ ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿರುತ್ತದೆ. ಜಿಲ್ಲಾ ಕಛೇರಿಯಿಂದ ಅರ್ಜಿ ನಮೂನೆಗಳನ್ನು ಪಡೆದು ದಿನಾಂಕ:15-10-2025 ರೊಳಗಾಗಿ ಪೂರ್ಣ ವಿವರವನ್ನು ಕನ್ನಡದಲ್ಲಿಯೇ ಭರ್ತಿ ಮಾಡಿ, ಭರ್ತಿ ಮಾಡಿದ ಅರ್ಜಿ ನಮೂನೆ ಹಾಗೂ ಪ್ರಸ್ತಾವನೆಯನ್ನು ದ್ವಿ-ಪ್ರತಿಯಲ್ಲಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಸ್ಟೇಡಿಯಂ

## ಮಳೆ ವರದಿ : ಚಿತ್ರದುರ್ಗ ಜಿಲ್ಲೆಯಲ್ಲಿ 31 ಮಿ.ಮೀ ಮಳೆ

**ಚಿತ್ರದುರ್ಗ:** ಮಂಗಳವಾರ ರಾತ್ರಿ ಸುರಿದ ಮಳೆ ವಿವರದನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಸರಾಸರಿ 31 ಮಿ.ಮೀ ಮಳೆಯಗಿದೆ.

ಚಳ್ಳಕೆರೆ ತಾಲ್ಲೂಕಿನಲ್ಲಿ 17 ಮಿ.ಮೀ, ಚಿತ್ರದುರ್ಗ ತಾಲ್ಲೂಕು 16.5 ಮಿ.ಮೀ, ಹಿರಿಯೂರು ತಾಲ್ಲೂಕು 36.4 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 44.6 ಮಿ.ಮೀ, ಹೊಸದುರ್ಗ ತಾಲ್ಲೂಕು 51.5 ಮಿ.ಮೀ ಹಾಗೂ ಮೊಳಕಾಲ್ಮೂರು ತಾಲ್ಲೂಕಿನಲ್ಲಿ 21.1 ಮಿ.ಮೀ. ಮಳೆಯಾಗಿದೆ.

ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 20.6 ಮಿ.ಮೀ, ನಾಯಕನಹಟ್ಟಿ 20.9 ಮಿ.ಮೀ, ಪರಶುರಾಂಪುರ 18.2 ಮಿ.ಮೀ, ತಳಕು 9.6 ಮಿ.ಮೀ, ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 24.3 ಮಿ.ಮೀ, ಭರಮಸಾಗರ 6.8 ಮಿ.ಮೀ, ಹಿರೇಗುಂಟನೂರು 8.4 ಮಿ.ಮೀ, ತುರುವನೂರು 19.4 ಮಿ.ಮೀ, ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 71.8 ಮಿ.ಮೀ,. ಐಮಂಗಳ 48.8 ಮಿ.ಮೀ, ಧರ್ಮಪುರ 13.6 ಮಿ.ಮೀ, ಜವನಗೊಂಡನಹಳ್ಳಿ 20.5 ಮಿ.ಮೀ ಮಳೆಯಾಗಿದೆ.

# ಮಲೆನಾಡಿನಲ್ಲಿ ಮಳೆ ಅಬ್ಬರ : ತುಂಬಿ ಹರಿಯುತ್ತಿರುವ ನದಿಗಳು, ವಿದ್ಯುತ್ ಕಂಬಗಳು ಧರೆಗೆ

**ಚಿಕ್ಕಮಗಳೂರು:** ಜಿಲ್ಲೆಯ ಮಲೆನಾಡಿನ ನಾಲ್ಕು ತಾಲೂಕುಗಳು ಹೊರತುಪಡಿಸಿ ಇನ್ನುಳಿದ ಐದು ತಾಲೂಕುಗಳಲ್ಲಿ ಭಾನುವಾರ ಮಳೆಯ ಪ್ರಮಾಣ ಇಳಿಮುಖವಾಗಿತ್ತು. ಆದರೆ, ಗಾಳಿಯ ಅಬ್ಬರ ಜೋರಾಗಿದೆ. ಹಲವೆಡೆ ಮರಗಳು, ವಿದ್ಯುತ್ ಕಂಬಗಳು ಧರೆಗುರುಳುತ್ತಿರುವುದರಿಂದ ಮನೆಯಿಂದ ಹೊರ ಹೋಗಲು ಜನರು ಆತಂಕಪಡುವ ಪರಿಸ್ಥಿತಿ ನಿರ್ಮಾಣಗೊಂಡಿದೆ.

ಶನಿವಾರ ಇಡೀ ರಾತ್ರಿಯಿಂದ ಭಾನುವಾರ ಮುಂಜಾನೆಯವರೆಗೆ ಮಲೆನಾಡಿನಲ್ಲಿ ಧಾರಾಕಾರವಾಗಿ ಮಳೆ ಸುರಿದ ಪರಿಣಾಮ ತುಂಗಾ, ಭದ್ರಾ ಹಾಗೂ ಹೇಮಾವತಿ ನದಿಗಳು ತುಂಬಿ ಹರಿಯುತ್ತಿವೆ. ನದಿ ಪಾತ್ರಗಳಲ್ಲಿರುವ ತಗ್ಗಿನ ಪ್ರದೇಶಗಳಲ್ಲಿ ನೀರು ಆವರಿಸಿಕೊಂಡಿದೆ. ಶೃಂಗೇರಿ ಪಟ್ಟಣಕ್ಕೆ ಜಲ ದಿಗ್ಬಂಧನವಾಗುವ ಆತಂಕ ಎದುರಾಗಿದೆ. ಇಲ್ಲಿನ ಕುರುಬಗೇರಿ, ವಿದ್ಯಾರಣ್ಯಪುರ ರಸ್ತೆಗಳು ಜಲಾವ್ರತವಾಗಿವೆ.



ಶೃಂಗೇರಿಯ ದೇಗುಲಕ್ಕೆ ಬರುವ ಭಕ್ತರು ವಾಹನಗಳು ಪಾರ್ಕಿಂಗ್ ಮಾಡುವ ಗಾಂಧಿ ಮೈದಾನವೂ ಸಹ ಜಲವ್ರತವಾಗಿದ್ದು, ರಾತ್ರಿ ಹೊತ್ತಿನಲ್ಲಿ ಕೆಲವು ಕಾರ್‌ಗಳು ನದಿ ನೀರಿನಲ್ಲಿದ್ದವು.

ಶೃಂಗೇರಿ ತಾಲೂಕಿನ ನೆಮ್ಮಾರ್ ಬಳಿ ಭೂ ಕುಸಿತ ಮುಂದುವರೆದಿತ್ತು. ಕೊಪ್ಪ ತಾಲೂಕಿನಲ್ಲೂ ಮಳೆ ಮುಂದುವರೆದಿದ್ದು, ನಾಗಲಾಪುರ ಗ್ರಾಮದಲ್ಲಿ ತುಂಗಾ ನದಿ ತುಂಬಿ ಹರಿಯುತ್ತಿರುವ ಪರಿಣಾಮ ಸಮೀಪದ ಭತ್ತದ ಗದ್ದೆಗಳು ಜಲಾವ್ರತವಾಗಿದ್ದವು. ಹರಿಹರಪುರದ ಮಠದ ಮೆಟ್ಟಿಲು ಸಮೀಪಕ್ಕೆ ನೀರು ಬಂದಿತ್ತು. ಕಳಸ ತಾಲೂಕಿನಲ್ಲಿ ಬಿಡುವಿಲ್ಲದೆ ಮಳೆ ಸುರಿಯುತ್ತಿದೆ. ಹೀಗಾಗಿ ಭದ್ರಾ ನದಿ ಅಪಾಯ ಮಟ್ಟ ಮೀರಿ ಹರಿಯುತ್ತಿದೆ.

ಮೂಡಿಗೆರೆ ತಾಲೂಕಿನಲ್ಲಿ ಮಳೆ ಮುಂದುವರೆದಿದೆ. ಆದರೆ, ಚಿಕ್ಕಮಗಳೂರು ತಾಲೂಕಿನಲ್ಲಿ ಬೆಳಿಗ್ಗೆಯಿಂದಲೇ ಬಿಸಿಲಿನ ವಾತಾವರಣ ಇದ್ದು, ಮಳೆ ಬಿಡುವು ನೀಡಿತ್ತು. ಎನ್.ಆರ್.ಪುರ ತಾಲೂಕಿನಲ್ಲಿ ಮಳೆ, ಬಿಸಿಲು, ಮೋಡ ಕವಿದ ವಾತಾವರಣ ಇತ್ತು. ಆದರೆ, ತರೀಕೆರೆ, ಕಡೂರು ಹಾಗೂ ಅಜ್ಜಂಪುರ ತಾಲೂಕುಗಳಲ್ಲಿ ಮಳೆ ಇಳಿಮುಖವಾಗಿತ್ತು. ಜಿಲ್ಲೆಯಲ್ಲಿ ಮಳೆ ಇಳಿಮುಖವಾಗುತ್ತಿದ್ದಂತೆ ಗಾಳಿಯ ಆರ್ಭಟ ಜೋರಾಗಿದೆ. ಬಲವಾಗಿ ಗಾಳಿ ಬೀಸುತ್ತಿರುವುದರಿಂದ ವಿದ್ಯುತ್ ಕಂಬಗಳು, ಮರಗಳು ಬೀಳುತ್ತಿರುವುದರಿಂದ ಹಲವೆಡೆ ವಿದ್ಯುತ್ ಸಂಪರ್ಕ ಕಡಿದು ಹೋಗಿದೆ. ಶೃಂಗೇರಿ, ಕೊಪ್ಪ, ಕಳಸ ಹಾಗೂ ಮೂಡಿಗೆರೆ ತಾಲೂಕಿನ ಹಲವೆಡೆ ಕಳೆದ 3-4 ದಿನಗಳಿಂದ ವಿದ್ಯುತ್ ಸಂಪರ್ಕ ಸ್ಥಗಿತಗೊಂಡಿದೆ. ಚಾರ್ಜ್ ಮಾಡಿಕೊಳ್ಳಲು ವಿದ್ಯುತ್ ಇಲ್ಲದಿರುವುದರಿಂದ ಮೊಬೈಲ್‌ಗಳು ಸಹ ಸ್ವಿಚ್ ಆಫ್ ಆಗಿವೆ.

ಕೊಪ್ಪ ತಾಲಕಿನ ಲೋಕನಾಥಪುರ ಬಳಿ ಮರವೊಂದು ಬಿದ್ದ ಪರಿಣಾಮ, ಸಮೀಪದಲ್ಲೇ ಹಾದು ಹೋಗಿರುವ ವಿದ್ಯುತ್ ಕಬ್ಬವೂ ಸಹ ಬಿದ್ದ ಪರಿಣಾಮ ಈ ಮಾರ್ಗದಲ್ಲಿ ವಾಹನಗಳ ಸಂಚಾರ ಸ್ಥಗಿತಗೊಂಡಿತ್ತು. ಚಿಕ್ಕಮಗಳೂರು ನಗರದಿಂದ ಗಿರಿ ಪ್ರದೇಶಕ್ಕೆ ತೆರಳುವ ಮಾರ್ಗದಲ್ಲಿರುವ ಕೈಮರ ಚೆಕ್ ಪೋಸ್ಟ್ ಬಳಿ ಮರ ಹಾಗೂ ವಿದ್ಯುತ್ ಕಂಬ ಬಿದ್ದಿದ್ದರಿಂದ ವಾಹನಗಳ ಸಂಚಾರಕ್ಕೆ ಅಡಚಣೆಯಾಗಿತ್ತು. ಚಿಕ್ಕಮಗಳೂರು ತಾಲೂಕಿನ ಬನ್ನೂರು ಗ್ರಾಮದ ಕಡ್ಡಿಪುಡಿ ಎಸ್ಟೇಟ್ ಬಳಿ ರಸ್ತೆಗೆ ಅಡ್ಡಲಾಗಿ ಮರ ಬಿದ್ದಿದ್ದರಿಂದ ವಾಹನಗಳ ಸಂಚಾರಕ್ಕೆ ಕೆಲ ಸಮಯ ಅಡಚಣೆಯಾಗಿತ್ತು. ಒಟ್ಟಾರೆ ಮುಂಗಾರು ಮಳೆ ಮತ್ತು ಗಾಳಿಯಿಂದಾಗಿ ಅನಾಹುತಗಳು ಹೆಚ್ಚಾಗುತ್ತಿವೆ.

# ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದ ಮಲ್ಲಿಕಾರ್ಜುನ ಖರ್ಗೆ ಹೇಳಿಕೆ

**ಬೆಂಗಳೂರು :** ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆ ರಾಜ್ಯ ರಾಜಕೀಯದಲ್ಲಿ ಭಾರೀ ಸಂಚಲನ ಮೂಡಿಸಿದ್ದು, ನಾಯಕತ್ವ ಬದಲಾವಣೆ ಬಗೆಗಿನ ಚರ್ಚೆಗೂ ಇಂಬು ನೀಡಿದೆ. ಈ ಹಿಂದೆ ತಮಗೆ ಮುಖ್ಯಮಂತ್ರಿಯಾಗುವ ಅವಕಾಶಗಳು ತಪ್ಪಿ ಹೋದ ಬಗ್ಗೆ ವಿಜಯಪುರದ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಖರ್ಗೆ ಹೇಳಿಕೆ ನೀಡುವ ಮೂಲಕ ಮೊದಲ ಬಾರಿಗೆ ತಮ ಅಸಮಾಧಾನವನ್ನು ಹೊರಹಾಕಿದ್ದರು. ಆದರೆ ಅವರು ತಮ ಹೇಳಿಕೆ ನೀಡುವ ವೇಳೆಯಲ್ಲಿ ಸ್ಥಾನಮಾನಗಳು ಸಿಗಲಿ, ಸಿಗದೇ ಇರಲಿ ಪಕ್ಷನಿಷ್ಠೆ ಮುಖ್ಯ ಎಂಬ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದರು.

ಖರ್ಗೆಯವರ ಹೇಳಿಕೆಗಳನ್ನು ಬೇರೆ ರೀತಿಯಲ್ಲೇ ಬಿಂಬಿಸ ಲಾಗುತ್ತಿದೆ. ರಾಷ್ಟ್ರ ರಾಜಕಾರಣದಿಂದ ರಾಜ್ಯ ರಾಜಕಾರಣಕ್ಕೆ ಖರ್ಗೆ ಮರಳುತ್ತಾರೆ., ಮುಖ್ಯಮಂತ್ರಿ ಯಾಗುತ್ತಾರೆ ಎಂಬೆಲ್ಲಾ ಚರ್ಚೆಗಳು ನಡೆಯುತ್ತವೆ. ಇದು ಕಾಂಗ್ರೆಸ್‌ನ ಸಚಿವರು, ಶಾಸಕರಿಗೆ ಬಿಸಿ ತುಪ್ಪವಾಗಿದೆ.

ಸಿದ್ದರಾಮಯ್ಯನವರ ಬೆಂಬಲಿಗರು ಶಾಸಕಾಂಗ ಸಭೆಯಲ್ಲಿ 5 ವರ್ಷಗಳಿಗೆ ಸಿದ್ದರಾಮಯ್ಯನವರನ್ನು ಮುಖ್ಯಮಂತ್ರಿ ಎಂದು ಆಯ್ಕೆ ಮಾಡಲಾಗಿದೆ. ಯಾವುದೇ ಸಂದರ್ಭದಲ್ಲೂ ಬದಲಾವಣೆಯ ಪ್ರಶ್ನೆ ಇಲ್ಲ ಎಂದು ಹೇಳುವ ಮೂಲಕ ಖರ್ಗೆಯವರ ರಂಗಪ್ರವೇಶಕ್ಕೆ ಪರೋಕ್ಷವಾಗಿ ವಿರೋಧ ವ್ಯಕ್ತಪಡಿಸುತ್ತಿದ್ದಾರೆ.



ಇದಕ್ಕೆ ಪ್ರತಿಯಾಗಿ ಸಿದ್ದರಾಮಯ್ಯನವರನ್ನು ಅಸಹನೆ ಯಿಂದಲೇ ಸಹಿಸಿಕೊಂಡಿರುವ ಕೆಲ ಸಚಿವರು, ಶಾಸಕರು ಮಲ್ಲಿಕಾರ್ಜುನ ಖರ್ಗೆಯವರಿಗೆ ಪ್ರಧಾನಿಯಾಗುವ ಅರ್ಹತೆ ಇದೆ. ಮುಖ್ಯಮಂತ್ರಿ ಸೇರಿದಂತೆ ಯಾವುದೇ ಸ್ಥಾನಗಳನ್ನು ನಿಭಾಯಿಸುವ ಸಾಮರ್ಥ್ಯ ಅವರಿಗಿದೆ. 50 ವರ್ಷಗಳ ಹಿರಿಯ ಅನುಭವಿ ರಾಜಕಾರಣಿ ಮಲ್ಲಿಕಾರ್ಜುನ ಖರ್ಗೆಯವರು ರಾಜ್ಯ ರಾಜಕಾರಣಕ್ಕೆ ಬಂದರೆ ಅದರಲ್ಲಿ ತಪ್ಪೇನೂ ಇಲ್ಲ ಎಂದು ಅಡ್ಡಗೋಡೆ ಮೇಲೆ ದೀಪ ಇಡುವಂತಹ ಮಾತುಗಳನ್ನಾ ಡುತ್ತಿದ್ದಾರೆ.

ಖರ್ಗೆ ರಾಜ್ಯ ರಾಜಕಾರಣಕ್ಕೆ ಬರುತ್ತಾರೋ, ಇಲ್ಲವೋ ಎಂಬುದು ಮಿಲಿಯನ್ ಡಾಲರ್ ಪ್ರಶ್ನೆಯಾಗಿದ್ದು, ಇದ-ಕ್ಕೆ ಸದ್ಯಕ್ಕೆ ನಿಖರ ಉತ್ತರ ದೊರೆಯುವ ಸಾಧ್ಯತೆಗಳು ಕಡಿಮೆ. ಖರ್ಗೆಯವರು ಅತ್ಯಂತ ಪಕ್ಷನಿಷ್ಠರಾಗಿದ್ದು, ಈವರೆಗೂ ಯಾವುದೇ ವೇದಿಕೆಗಳಲ್ಲಿ ತಮಗಾದ ರಾಜಕೀಯ ಅನ್ಯಾಯದ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿರಲಿಲ್ಲ. ಪಕ್ಷದಲ್ಲಿ ಬಹಳಷ್ಟು ಉನ್ನತ ಸ್ಥಾನಗಳನ್ನು ಅನುಭವಿಸಿದ ಉನ್ನತ ನಾಯಕರು ಕಾಂಗ್ರೆಸ್ ತೊರೆದು ಹೊರ ಹೋದರು. ಪದೇಪದೇ ಅವಕಾಶ ವಂಚಿತರಾದರೂ ಕೂಡ ಖರ್ಗೆಯವರು ಪಕ್ಷದಲ್ಲೇ ಉಳಿಯುವ ಮೂಲಕ ಸೈದ್ಧಾಂತಿಕ ನಿಷ್ಠೆ ಪ್ರದರ್ಶಿಸಿದರು.

ಎಐಸಿಸಿ ಅಧ್ಯಕ್ಷರಾಗಿರುವ ಅವರು ಈಗ ತಮಗೆ ಅವಕಾಶ ತಪ್ಪಿದ್ದರ ಬಗ್ಗೆ ವಿಷಾದ ವ್ಯಕ್ತಪಡಿಸಿದ್ದು ವ್ಯಾಪಕ ಚರ್ಚೆಗೆ ಗಾಸವಾಗಿದೆ. ರಾಜ್ಯದಲ್ಲಿ ಮುಖ್ಯಮಂತ್ರಿ ಸ್ಥಾನದ ಮೇಲೆ ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ ಪರಮೇಶ್ವರ್, ಎಂ.ಬಿ.ಪಾಟೀಲ್ ಸೇರಿದಂತೆ ಅರ್ಧ ಡಜನ್‌ಗೂ ಹೆಚ್ಚಿನ ನಾಯಕರು ಕಣ್ಣಿಟ್ಟಿದ್ದಾರೆ.

ಈ ಹಿಂದೆ ವಿಧಾನಸಭೆ ಚುನಾವಣೆಯಲ್ಲಿ ಡಿಕೆಶಿ ಬಹಿರಂಗ ಹೇಳಿಕೆ ನೀಡಿ ಖರ್ಗೆಯವರು ಮುಖ್ಯಮಂತ್ರಿಯಾಗುವುದಾದರೆ ತಾವು ರೇಸ್‌ನಿಂದ ಹಿಂದೆ ಸರಿಯುವುದಾಗಿ ಹೇಳಿದ್ದರು. ಆದರೆ ಆ ವೇಳೆ ಮಲ್ಲಿಕಾರ್ಜುನ ಖರ್ಗೆ ತಾವು ರಾಜಕೀಯ-ಕ್ಕೆ ಮರಳುವುದಿಲ್ಲ ಎಂದಿದ್ದರು. ಈ ಮತ್ತೆ ಖರ್ಗೆಯವರನ್ನು ಎಳೆದು ತರುವ ಮೂಲಕ ಸಿದ್ದರಾಮಯ್ಯನವರ ನಾಯಕತ್ವದ ಅಧಿಪತ್ಯಕ್ಕೆ ಅಡೆತಡೆ ಸೃಷ್ಟಿಸುವ ಪ್ರಯತ್ನಗಳಾಗಿದ್ದವು ಎಂಬ ಚರ್ಚೆಗಳಾಗುತ್ತಿವೆ.

# ಸಂಖ್ಯಾಶಾಸ್ತ್ರಕ್ಕೆ 'ಮಹಾಲನೋಬಿಸ್' ಕೊಡುಗೆ ಅಪಾರ



**ಚಿತ್ರದುರ್ಗ :** ಸಾಂಖ್ಯಿಕ ತಜ್ಞರಾದ ಪ್ರೊ.ಪಿ.ಸಿ.ಮಹಾಲನೋಬಿಸ್ ಅವರು ಸಂಖ್ಯಾಶಾಸ್ತ್ರಕ್ಕೆ ಅಪಾರವಾದ ಕೊಡುಗೆ ನೀಡಿದ್ದಾರೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸಿ.ಎಸ್.ಗಾಯತ್ರಿ ಹೇಳಿದರು.

ನಗರದ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯಲ್ಲಿ ಮಂಗಳವಾರ ಸಾಂಖ್ಯಿಕ ತಜ್ಞರಾದ ಪ್ರೊ.ಪಿ.ಸಿ.ಮಹಲನೋಬಿಸ್ ಅವರ ಜನ್ಮ ದಿನಾಚರಣೆಯನ್ನು "ಸಾಂಖ್ಯಿಕ ದಿನಾಚರಣೆ"ಯನ್ನಾಗಿ ಆಚರಿಸುವ ಸಲುವಾಗಿ "75 years of National sample Survey" ವಿಷಯದ ಕುರಿತು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರೊ.ಪಿ.ಸಿ.ಮಹಾಲನೋಬಿಸ್ ಅವರು ಭಾರತ ಸಂಖ್ಯಾಶಾಸ್ತ್ರದ ಪಿತಾಮಹರಾಗಿದ್ದು, ಅವರು ಹಾಕಿಕೊಟ್ಟ ದಾರಿಯಲ್ಲಿ ನಾವೆಲ್ಲರೂ ಸಾಗಬೇಕು. ಸಾಂಖ್ಯಿಕ ಇಲಾಖೆಯಲ್ಲಿ ಸೇವೆ ಸಲ್ಲಿಸುವ ಅಧಿಕಾರಿಗಳು, ಸಿಬ್ಬಂದಿಗಳು ಸಾಂಖ್ಯಿಕ ಕ್ಷೇತ್ರಕ್ಕೆ ಸಣ್ಣ ಪ್ರಮಾಣದ ಕೊಡುಗೆ ನೀಡುವುದೇ ನಮ್ಮ ಜೀವಮಾನದಲ್ಲಿ ಮಾಡುವ ಸಾಧನೆ ಎಂದು ತಿಳಿಸಿದ ಅವರು, ಸಾಂಖ್ಯಿಕ ಇಲಾಖೆಯಲ್ಲಿ ಕಾರ್ಯನಿರ್ವಹಿಸುವವರಿಗೆ ಸಾಕಷ್ಟು ಅವಕಾಶಗಳಿದ್ದು, ಬಹುಮುಖ ವ್ಯಕ್ತಿತ್ವ ವಿಕಸನಕ್ಕೆ ಸಾಂಖ್ಯಿಕ ಇಲಾಖೆ ಸಹಾಯಕವಾಗಲಿದೆ ಎಂದು ಹೇಳಿದರು.

ಭದ್ರಾ ಮೇಲ್ದಂಡೆ ಯೋಜನೆಯ ಉಪನಿರ್ದೇಶಕಿ ಕುಮುದಾ ಮಾತನಾಡಿ, ಯಾವುದೇ ಒಂದು ಜನಸಾಮಾನ್ಯರ ಕಾರ್ಯಯೋಜನೆಗೆ ಸರ್ವೆಯ ಅಂಕಿ-ಅಂಶಗಳು ಪ್ರಮುಖ ಪಾತ್ರವಹಿಸುತ್ತವೆ. ಪ್ರೊ.ಪಿ.ಸಿ. ಮಹಾಲನೋಬಿಸ್ ಅವರ ಕೊಡುಗೆ ಇಂದಿನ ಕಾಲಕ್ಕೆ ಒಂದು ಇಲಾಖೆಯಾಗಿ, ಇಲಾಖೆಯಡಿ ಕಾರ್ಯನಿರ್ವಹಿಸುವ ಹಲವರಿಗೆ ಉದ್ಯೋಗ ದೊರಕಿದ್ದು ಸಹ ಅವರ ಮೇರು ಕೊಡುಗೆಯಾಗಿದೆ ಎಂದು ಹೇಳಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಎನ್.ರವಿಕುಮಾರ ಮಾತನಾಡಿ, ರಾಷ್ಟ್ರೀಯ ಮಾದರಿ ಸಮೀಕ್ಷೆಯು ನಮ್ಮ ಜೀವನದ ತಳಮಟ್ಟದಿಂದ ಮೇಲಿನ ಹಂತದವರೆಗೂ ಒಂದು ಸಮೀಕ್ಷೆ ನಡೆಸಲಾಗುವುದು ಎಂದು ತಿಳಿಸಿದರು.

ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಚನ್ನಬಸಪ್ಪ ಅವರು "75 years of National sample Survey" ವಿಷಯದ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯ ಸಹಾಯಕ ಸಂಖ್ಯಾ ಸಂಗ್ರಹಣಾಧಿಕಾರಿ ಅಶ್ವತ್ಥಾಮ, ಸಹಾಯಕ ನಿರ್ದೇಶಕಿ ಶಶಿರೇಖಾ, ತೋಟಗಾರಿಕೆ ಇಲಾಖೆಯ ಶಶಿಧರ್ ಸೇರಿದಂತೆ ಸಾಂಖ್ಯಿಕ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಇದ್ದರು.

### ಗ್ಯಾಸ್ ಸಿಲಿಂಡರ್ ತುಂಬಿದ್ದ ಟ್ರಕ್‌ಗೆ ಬಸ್ ಡಿಕ್ಕಿ

# 18 ಕನ್ವಾರಿಯಾ ಯಾತ್ರಿಗಳ ಸಾವು

**ರಾಂಚಿ :** ಜಾರ್ಖಂಡ್‌ನ ದಿಯೋಘರ್ ಜಿಲ್ಲೆಯಲ್ಲಿ ಅಡುಗೆ ಅನಿಲ ಸಿಲಿಂಡರ್‌ಗಳನ್ನು ತುಂಬಿದ್ದ ಟ್ರಕ್‌ಗೆ ಬಸ್ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ 18 ಕನ್ವಾರಿಯಾಗಳು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿರುವ ಘಟನೆ ಸಂಭವಿಸಿದೆ.

ಹಲವಾರು ಗಾಯಾಳುಗಳ ಸ್ಥಿತಿ ಗಂಭೀರವಾಗಿರುವುದರಿಂದ ಸಾವು-ನೋವುಗಳು ಹೆಚ್ಚಾಗುವ ಸಾಧ್ಯತೆ ಇದೆ. ಮೃತಪಟ್ಟವರ ಗುರುತು ಇನ್ನೂ ಪತ್ತೆಯಾಗಿಲ್ಲ. ಸದ್ಯ ಮೃತದೇಹಗಳನ್ನು ದಿಯೋಘರ್ ಸದರ್ ಆಸ್ಪತ್ರೆಗೆ ರವಾನಿಸಲಾಗಿದ್ದು, ಗಾಯಾಳುಗಳು ಚಿಕಿತ್ಸೆ ಪಡೆಯುತ್ತಿದ್ದಾರೆ. ಸ್ಥಳೀಯರ ಪ್ರಕಾರ, 20 ಕ್ಕೂ ಹೆಚ್ಚು ಭಕ್ತರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಮೋಹನಪುರ ಪೊಲೀಸ್ ಠಾಣೆ ವ್ಯಾಪ್ತಿಯ ಜಮುನಿಯಾ ಅರಣ್ಯದ ಬಳಿ ಬೆಳಿಗ್ಗೆ 4.30



ರ ಸುಮಾರಿಗೆ ಅಪಘಾತ ಸಂಭವಿಸಿದೆ. ದಿಯೋಘರ್‌ನ ಮೋಹನಪುರದ ಜಮುನಿಯಾ ಅರಣ್ಯದ ಬಳಿ, ಕನ್ವಾರಿಯಾ ಕುಟುಂಬವನ್ನು ಹೊತ್ತೊಯ್ಯುತ್ತಿದ್ದ 32 ಆಸನಗಳ ಬಸ್, ಗ್ಯಾಸ್ ಸಿಲಿಂಡರ್‌ಗಳನ್ನು ಸಾಗಿಸುತ್ತಿದ್ದ ಟ್ರಕ್‌ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಐದು ಜನರು ಸಾವನ್ನಪ್ಪಿದ್ದಾರೆ ಮತ್ತು ಅನೇಕರು ಗಾಯಗೊಂಡಿದ್ದಾರೆ ಎಂದು ಸಿನ್ಹಾ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಮೋಹನಪುರ ಪೊಲೀಸ್ ಠಾಣೆ ವ್ಯಾಪ್ತಿಯ ಜಮುನಿಯಾ ಅರಣ್ಯದ ಬಳಿ ಬೆಳಿಗ್ಗೆ 4.30 ರ ಸುಮಾರಿಗೆ ಈ ಅಪಘಾತ ಸಂಭವಿಸಿದೆ. ನನ್ನ ಲೋಕಸಭಾ ಕ್ಷೇತ್ರವಾದ ದಿಯೋಘರ್‌ನಲ್ಲಿ, ಪವಿತ್ರ ಶ್ರಾವಣ ಮಾಸದಲ್ಲಿ ಕನ್ವರ್ ಯಾತ್ರೆಯ ಸಮಯದಲ್ಲಿ ಬಸ್ ಮತ್ತು ಟ್ರಕ್ ನಡುವೆ ಸಂಭವಿಸಿದ ದುರಂತ ಅಪಘಾತದಲ್ಲಿ 18 ಭಕ್ತರು ಪ್ರಾಣ ಕಳೆದುಕೊಂಡರು ಎಂದು ಗೊಡ್ಡಾ ಸಂಸದ ನಿಶಿಕಾಂತ್ ದುಬೆ ಎಕ್ಸ್ ಪೋಸ್ಟ್‌ನಲ್ಲಿ ಬರೆದಿದ್ದಾರೆ.

ಬಾಬಾ ಬೈದ್ಯನಾಥ್ ಅವರ ಕುಟುಂಬಗಳಿಗೆ ಈ ದುಃಖವನ್ನು ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದ್ದಾರೆ. ದಿಯೋಘರ್ ಉಪವಿಭಾಗಾಧಿಕಾರಿ ರವಿ ಕುಮಾರ್ ಅವರ ಪ್ರಕಾರ, ಕನ್ವಾರಿಯರು ಬಾಸುಕಿನಾಥ್ ದೇವಸ್ಥಾನಕ್ಕೆ ಹೋಗುತ್ತಿದ್ದರು. ಕನ್ವಾರಿಯರು ಶಿವನ ಭಕ್ತರಾಗಿದ್ದಾರೆ.

# ರಾಷ್ಟ್ರಪತಿ ಅಧಿಕಾರ ಕುರಿತ ವಿಚಾರಣೆಗೆ ಸುಪ್ರೀಂಕೋರ್ಟ್ ಸಮ್ಮತಿ

**ನವದೆಹಲಿ:** ವಿಧಾನಸಭೆ ಅಂಗೀಕರಿಸಿದ ಮಸೂದೆಗಳನ್ನು ನಿರ್ವಹಿಸಲು ನ್ಯಾಯಲಯ ಸಮಯ ಮಿತಿಯನ್ನು ವಿಧಿಸಬಹುದೇ ಎಂಬ ಬಗ್ಗೆ ಸಾಂವಿಧಾನಿಕ ಸಮಸ್ಯೆಗಳನ್ನು ಪ್ರಸ್ತಾಪಿಸಿದ್ದ ರಾಷ್ಟ್ರಪತಿಗಳ ಉಲ್ಲೇಖವನ್ನು ವಿಚಾರಣೆ ಮಾಡಲು ಸುಪ್ರೀಂ ಕೋರ್ಟ್ ಸಮ್ಮತಿಸಿದೆ.

ಮುಖ್ಯ ನ್ಯಾಯಮೂರ್ತಿ ಬಿ.ಆರ್. ಗವಾಯಿ ನೇತೃತ್ವದ ಐದು ನ್ಯಾಯಾಧೀಶರ ಪೀಠವು ಆ. 12 ರೊಳಗೆ ಕೇಂದ್ರ ಮತ್ತು ರಾಜ್ಯಗಳು ತಮ್ಮ ಲಿಖಿತ ಸಲ್ಲಿಕೆಗಳನ್ನು ಸಲ್ಲಿಸುವಂತೆ ಕೇಳಿದೆ. ಹಾಗೂ ಆಗಸ್ಟ್ 19 ರಿಂದ ವಿಚಾರಣೆಯನ್ನು ಪ್ರಾರಂಭಿಸಲು ತೀರ್ಮಾನಿಸಿದೆ.

ಪಕ್ಷಗಳು ಸಮಯ ಮಿತಿಯನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಕೇಳಿಕೊಂಡ ನ್ಯಾಯಮೂರ್ತಿಗಳಾದ ಸೂರ್ಯಕಾಂತ್, ವಿಕ್ರಮ್ ನಾಥ್, ಪಿ.ಎಸ್. ನರಸಿಂಹ ಮತ್ತು ಎ.ಎಸ್. ಚಂದೂರ್ಕರ್ ಅವರನ್ನೂ ಒಳಗೊಂಡ ಪೀಠವು, ಆಗಸ್ಟ್ 19 ರಂದು ರಾಷ್ಟ್ರಪತಿಗಳ ಉಲ್ಲೇಖದ ನಿರ್ವಹಣೆಯನ್ನು ಪ್ರಶ್ನಿಸಿ ಕೇರಳ ಮತ್ತು ತಮಿಳುನಾಡಿನಂತಹ ರಾಜ್ಯಗಳು ಸಲ್ಲಿಸಿದ ಪ್ರಾಥಮಿಕ ಆಕ್ಷೇಪಣೆಗಳನ್ನು ಮೊದಲು ಆಲಿಸುವುದಾಗಿ ಹೇಳಿದೆ.

ರಾಷ್ಟ್ರಪತಿಗಳ ಉಲ್ಲೇಖವನ್ನು ಬೆಂಬಲಿಸುವ ಕೇಂದ್ರ ಮತ್ತು ರಾಜ್ಯಗಳ ಅರ್ಜಿಗಳನ್ನು





ಆಗಸ್ಟ್ 19, 20, 21 ಮತ್ತು 26 ರಂದು ವಿಚಾರಣೆ ನಡೆಸಲಾಗುವುದು ಎಂದು ಸುಪ್ರೀಂ ಕೋರ್ಟ್ ಹೇಳಿದೆ, ಆದರೆ ಅದನ್ನು ವಿರೋಧಿಸುವ ಅರ್ಜಿಗಳನ್ನು ಆಗಸ್ಟ್ 28 ಮತ್ತು ಸೆಪ್ಟೆಂಬರ್ 2, 3 ಮತ್ತು 9 ರಂದು ವಿಚಾರಣೆ ನಡೆಸಲಾಗುವುದು. ಯಾವುದೇ ರೀತಿಯ ಮರುಪ್ರತ್ಯಾರೋಪ ಸಲ್ಲಿಕೆಗಳಿದ್ದರೆ, ಅವುಗಳನ್ನು ಸೆಪ್ಟೆಂಬರ್ 10 ರಂದು ವಿಚಾರಣೆ ನಡೆಸಲಾಗುವುದು ಎಂದು ಪೀಠ ಹೇಳಿದೆ. ಜುಲೈ 22 ರಂದು, ರಾಷ್ಟ್ರಪತಿಗಳ ಉಲ್ಲೇಖದಲ್ಲಿ ಎತ್ತಲಾದ ಸಮಸ್ಯೆಗಳು ಇಡೀ ದೇಶದ ಮೇಲೆ ಪರಿಣಾಮ ಬೀರುತ್ತವೆ ಎಂದು ಸುಪ್ರೀಂ ಕೋರ್ಟ್ ಗಮನಿಸಿದೆ. ಮೇ ತಿಂಗಳಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಜ್ಯ ವಿಧಾನಸಭೆಗಳು ಅಂಗೀಕರಿಸಿದ ಮಸೂದೆಗಳನ್ನು ನಿರ್ವಹಿಸುವಾಗ ರಾಷ್ಟ್ರಪತಿಗಳು ವಿವೇಚನೆಯನ್ನು ಚಲಾಯಿಸಲು ನ್ಯಾಯಾಂಗ ಆದೇಶಗಳ ಮೂಲಕ ಕಾಲಮಿತಿಗಳನ್ನು ವಿಧಿಸಬಹುದೇ ಎಂದು ಉನ್ನತ ನ್ಯಾಯಾಲಯದಿಂದ ತಿಳಿದುಕೊಳ್ಳಲು ವಿಧಿ 143(1) ರ ಅಡಿಯಲ್ಲಿ ಅಧಿಕಾರವನ್ನು ಚಲಾಯಿಸಿದ್ದರು. ತಮಿಳುನಾಡು ಸರ್ಕಾರ ಪ್ರಶ್ನಿಸಿದ ಮಸೂದೆಗಳನ್ನು ನಿರ್ವಹಿಸುವಲ್ಲಿ ರಾಜ್ಯಪಾಲರ ಅಧಿಕಾರಗಳ ಕುರಿತು ಸುಪ್ರೀಂ ಕೋರ್ಟ್ ಏಪ್ರಿಲ್ 8 ರಂದು ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ ರಾಷ್ಟ್ರಪತಿಗಳಿಂದ ಇಂತಹ ನಿರ್ಧಾರ ಬಂದಿತ್ತು. ಮೊದಲ ಬಾರಿಗೆ ತೀರ್ಪು, ರಾಷ್ಟ್ರಪತಿಗಳು ಅಂತಹ ಉಲ್ಲೇಖವನ್ನು ಸ್ವೀಕರಿಸಿದ ದಿನಾಂಕದಿಂದ ಮೂರು ತಿಂಗಳೊಳಗೆ ರಾಜ್ಯಪಾಲರು ತಮ್ಮ ಪರಿಗಣನೆಗೆ ಕಾಯ್ದಿರಿಸಿದ ಮಸೂದೆಗಳ ಬಗ್ಗೆ ನಿರ್ಧರಿಸಬೇಕೆಂದು ಸೂಚಿಸಿದೆ.

# ಸಮರ್ಪಕ ಯೂರಿಯಾ ಗೊಬ್ಬರ ವಿತರಿಸಲು ಎಚ್.ಪಿ.ರಾಜೇಶ್ ಆಗ್ರಹ

**ಜಗಳೂರು :** ರೈತರಿಗೆ ಸಮರ್ಪಕವಾಗಿ ಯೂರಿಯಾ ರಸಗೊಬ್ಬರ ವಿತರಿಸಲು ಸರ್ಕಾರ ತಕ್ಷಣವೇ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಮಾಜಿ ಶಾಸಕ ಎಚ್.ಪಿ.ರಾಜೇಶ್ ಆಗ್ರಹಿಸಿದರು.

ಪಟ್ಟಣದ ಕೃಷಿ ಇಲಾಖೆ ಅಧಿಕಾರಿಗಳೊಂದಿಗೆ ಬಿಜೆಪಿ ಪಕ್ಷದ ರೈತ ಮೋರ್ಚಾ ಪದಾಧಿಕಾರಿಗಳೊಂದಿಗೆ ಚರ್ಚಿಸಿ ನಂತರ ಮಾತನಾಡಿದ ಅವರು, ಉತ್ತಮ ಮಳೆಯಾಗಿ ಬೆಳೆಗಳು ಕೈಗೆಟಕುವ ಸ್ಥಿತಿಯಲ್ಲಿ ಯೂ-ರಿಯಾ ರಸ ಗೊಬ್ಬರ ಕೃತಕ ಅಭಾವ ಉಂಟಾಗಿದೆ. ಕೂಡಲೇ ಸಕಾಲದಲ್ಲಿ ಕೃಷಿ ಇಲಾಖೆ ಅಧಿಕಾರಿಗಳು ರಸಗೊಬ್ಬರ ವಿತರಿಸಲು ಮುಂದಾಗಬೇಕು ಎಂದು ಹೇಳಿದರು.



ಪಟ್ಟಣದಲ್ಲಿ ಮಲ್ಪೆ-ಮೊಳಕಾಲ್ಮೂರು ರಾಜ್ಯ ಹೆದ್ದಾರಿ ಮುಖ್ಯ ರಸ್ತೆ ವಿಸ್ತರಣೆ ಕಾರ್ಯದ ಬಗ್ಗೆ ಶಾಸಕರು ಸ್ಪಷ್ಟನೆ ನೀಡಬೇಕು. ಮೂರು ನಾಲ್ಕು ಬಾರಿ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಅಳತೆ ಸಮೀಕ್ಷೆ ಕಾರ್ಯ ನಡೆದಿದೆ. ಅಲ್ಲದೆ ಹೋರಾಟಗಾರರು ರಸ್ತೆಯ ಎರಡೂ ಬದಿ 69 ಅಡಿ ಅಗಲೀಕರಣಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸಿದ್ದಾರೆ. ಆದರೆ ಕೆಲ ವರ್ತಕರು ತಮಗಿಷ್ಟ ಬಂದಂತೆ ಮಳಿಗೆ ತೆರವುಗೊಳಿಸಿಕೊಂಡು ಪುನಃ ಕಟ್ಟಡ ನಿರ್ಮಾಣ ಮಾಡಿಕೊಳ್ಳುತ್ತಿದ್ದಾರೆ. ಇದು ಗೊಂದಲದ ಗೂಡಾಗಿದೆ. ಶಾಸಕರು ಮತ್ತು ವರ್ತಕರ ಮಧ್ಯೆ ಒಳ ಒಪ್ಪಂದ ನಡೆದಿದೆಯಾ? ಎಂಬ ಅನುಮಾನಗಳು ಮೂಡುತ್ತಿವೆ. ಸರ್ಕಾರದ ನಿಯಮಾನು ಸಾರ ಸರ್ಕಾರಿ ಸ್ವಾಮ್ಯದಲ್ಲಿರುವ ಕಟ್ಟಡಗಳನ್ನು ನಿಯಮಾನುಸಾರ 69 ಅಡಿ ಅಗಲೀಕರಣಕ್ಕೆ ಮೊದಲು ತೆರವುಗೊಳಿಸಲಿ, ಪಟ್ಟಣ ಪಂಚಾಯಿತಿ ಬಿಜೆಪಿ ತೆಕ್ಕೆಯಲ್ಲಿದ್ದರೂ ಯಾವುದೇ ಪರಿಪೂರ್ಣ ಮಾಹಿತಿ ಸಿಗುತ್ತಿಲ್ಲ ಎಂದರು.

ಈ ಸಂದರ್ಭದಲ್ಲಿ ಬಿಜೆಪಿ ರೈತ ಮೋರ್ಚಾ ರಾಜ್ಯ ಕಾರ್ಯದರ್ಶಿ ಡಾ.ನವೀನ್ ಕುಮಾರ್, ಉಪಾಧ್ಯಕ್ಷ ಲೋಕಿಕೆರೆ ನಾಗರಾಜ್, ಪಟ್ಟಣ ಪಂಚಾಯತಿ ಅಧ್ಯಕ್ಷ ನವೀನ್ ಕುಮಾರ್, ಸದಸ್ಯ ರೇವಣ್ಣ, ಮುಖಂಡರಾದ ಬಿಸ್ತುವಳ್ಳಿ ಬಾಬು, ಓಬಳೇಶ್, ಬಿದರಕೆರೆ ರವಿಕುಮಾರ್, ಜೆ.ವಿ.ನಾಗರಾಜ್, ಮರೇನಹಳ್ಳಿ ಶೇಖರಪ್ಪ ಇದ್ದರು.

# ಸುಪ್ರೀಂಕೋರ್ಟ್ ತೀರ್ಪಿನಂತೆ ಎಸ್ಸಿ ಒಳ ಮೀಸಲಾತಿ ಜಾರಿಗೆ ಆಗ್ರಹ

**ದಾವಣಗೆರೆ :** ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಆಧಾರದ ಮೇಲೆ ಕೂಡಲೇ ಪರಿಶಿಷ್ಟ ಜಾತಿ ಒಳ ಮೀಸಲಾತಿ ಜಾರಿ ಮಾಡುವಂತೆ ಆಗ್ರಹಿಸಿ ಮಾದಿಗ ಮಹಾಸಭಾ ಕ್ಷೇಮಾಭಿ ವೃದ್ಧಿ ಸಂಘ, ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿ, ಭೀಮ್ ಆರ್ಮಿ ಸೇರಿದಂತೆ ವಿವಿಧ ದಲಿತ ಪರ ಸಂಘಟನೆಗಳ ಸಹಯೋಗ ದಲ್ಲಿ ನಗರದ ಅಂಬೇಡ್ಕರ್ ವೃತ್ತದಲ್ಲಿ ಪ್ರತಿಭಟನೆ ನಡೆಸಿ, ಜಿಲ್ಲಾಡಳಿತ ಭವನಕ್ಕೆ ತೆರಳಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ಸರ್ವೋಚ್ಚ ನ್ಯಾಯಾಲಯ ತೀರ್ಪು ನೀಡಿ ಒಂದು ವರ್ಷ ಕಳೆದರೂ ವಿಳಂಬ ನೀತಿ ಅನುಸರಿಸುತ್ತಿರುವ ರಾಜ್ಯ ಕಾಂಗ್ರೆಸ್ ಸರ್ಕಾರದ ನಡೆಯನ್ನು ಖಂಡಿಸಿ, ಶವಯಾತ್ರೆ ಮಾಡುವ ಮೂಲಕ ದಲಿತ ಪರ ಸಂಘನೆಗಳ ಕಾರ್ಯಕರ್ತರು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಇದೇ ವೇಳೆ ಮಾತನಾಡಿದ ಮಾದಿಗ ಒಳ ಮೀಸಲಾತಿ ಹೋರಾಟ ಸಮಿತಿ ಮುಖಂಡ ಆಲೂರು ನಿಂಗರಾಜ್, ಹಳ್ಳಿಗಳಲ್ಲಿ ದಲಿತರನ್ನು ದಲಿತರನ್ನು ಬಹಿಷ್ಕರಿಸುವಂತೆ ಸರ್ಕಾರಗಳು ಸಹ ದಲಿತರನ್ನು ಬಹಿಷ್ಕರಿಸುತ್ತಿವೆ. ಒಳ ಮೀಸಲಾತಿ ಜಾರಿಗಾಗಿ ಕಳೆದ 35 ವರ್ಷಗಳಿಂದ ಪ್ರತಿಭಟನೆ ಮಾಡಿ ಸರ್ವೋಚ್ಚ ನ್ಯಾಯಾಲಯದ ಮೊರೆ ಹೋಗಿದ್ದಕ್ಕೆ ರಾಜ್ಯ ಸರ್ಕಾರಗಳು ಆಯಾ ರಾಜ್ಯಗಳ ಪರಿಶಿಷ್ಟ ಜಾತಿ ಪಟ್ಟಿಯಲ್ಲಿರುವ ಸಮುದಾಯಗಳ ಜನಸಂಖ್ಯೆಗೆ ಅನುಗುಣವಾಗಿ ನಿರ್ಣಯ ಕೈಗೊಂಡು



ಒಳ ಮೀಸಲಾತಿ ನೀಡಲು ತೀರ್ಪು ನೀಡಿದೆ. ಆದರೆ ರಾಜ್ಯ ಸರ್ಕಾರ ವಿಳಂಬ ಧೋರಣೆ ಅನುಸರಿಸುತ್ತಿದೆ ಎಂದು ಆರೋಪಿಸಿದರು.

ಈಗಾಗಲೇ ತೆಲಂಗಾಣ, ತಮಿಳುನಾಡು, ಹರಿಯಾಣ, ಆಂಧ್ರಪ್ರದೇಶ ಸೇರಿದಂತೆ ವಿವಿಧ ರಾಜ್ಯ ಸರ್ಕಾರಗಳು ಒಳ ಮೀಸಲಾತಿ ಜಾರಿಗೊಳಿಸಿವೆ. ಕರ್ನಾಟಕ ಸರ್ಕಾರ ಇನ್ನೂ ವಿಳಂಬ ನೀತಿ ಅನುಸರಿಸುತ್ತಿದ್ದು, ಇದೇ ನೀತಿ ಮುಂದುವರೆದರೆ ದಲಿತರು ಕಾಂಗ್ರೆಸ್ ಪಕ್ಷವನ್ನು ಸಹ ದೂರ ಇಡಬೇಕಾಗುತ್ತದೆ ಎಂದು ಎಚ್ಚರಿಸಿದರು.

ದಲಿತ ಮುಖಂಡ ಎಂ. ಹಾಲೇಶ್ ಮಾತನಾಡಿ, ದಲಿತರಿಗೆ ನ್ಯಾಯ ಕೊಡಿಸಿದ ಮುಖ್ಯಮಂತ್ರಿ ಸಿದ್ಧರಾಮಯ್ಯ ದಲಿತ ನಾಯಕ, ಅಹಿಂದ ಮುಖಂಡ ಆಗಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಪ್ರತಿಭಟನೆಯಲ್ಲಿ ದಲಿತ ಪರ ಸಂಘಟನೆಗಳ ಮುಖಂಡರಾದ ಬಿ. ನಿಂಗಪ್ಪ, ರಾಜು ಶಾಮನೂರು, ಅಂಜಿನಪ್ಪ ಶಾಮನೂರು, ಉಚ್ಚಂಗಿ ಪ್ರಸಾದ್, ಡಿ.ಹನುಮಂತಪ್ಪ, ಮಂಜುನಾಥ್ ಕುಂದುವಾಡ, ಬಸವರಾಜ ಆಲೂರು, ಆನಂದ್ ಎಂ. ಜಾಲಿಹಾಳು, ಅತ್ತಿಗೆರೆ ಸಿದ್ಧಪ್ಪ, ಬೇತೂರು ಹನುಮಂತಪ್ಪ, ಕೆ.ಹೆಚ್. ಅವಿನಾಶ್, ಕರಿಯಪ್ಪ ಆವರಗೆರೆ, ಹರೀಶ್ ಹೊನ್ನೂರು, ಸಿ.ಬಸವರಾಜ್, ಎಸ್.ಹೆಚ್.ದುಗ್ಗಪ್ಪ, ಸದಾನಂದ ಚಿಕ್ಕನಹಳ್ಳಿ, ವೈ.ಸುಮ, ಎನ್.ಮಹಾಂತೇಶ್, ಬಿ. ಶಾಂತಪ್ಪ, ಆರ್.ಧನಂಜಯ, ಡಿ. ಸುರೇಶ್, ಎನ್.ವಿಜಯ, ಮಾರುತಿ ಸೇರಿದಂತೆ ಅನೇಕರಿದ್ದರು.

## ಚಿರತೆ ದಾಳಿ: ಇಬ್ಬರಿಗೆ ಗಾಯ

**ಕಡೂರು:** ತಾಲ್ಲೂಕಿನ ಸಖರಾಯಪಟ್ಟಣ ಸಮೀಪದ ಎಮ್ಮೆದೊಡ್ಡಿ ಗ್ರಾಮದ ಮದಗದ ಕೆರೆ ಸಮೀಪ ಬೈಕ್‌ನಲ್ಲಿ ತೆರಳುತ್ತಿದ್ದ ಇಬ್ಬರ ಮೇಲೆ ಚಿರತೆ ದಾಳಿ ನಡೆಸಿದೆ.

ಹೊಸ ಸಿದ್ಧರಹಳ್ಳಿಯ ಮಂಜಪ್ಪ(56) ಮತ್ತು ಹಳೇ ಸಿದ್ಧರಹಳ್ಳಿಯ ಮೂರ್ತಪ್ಪ(55) ಗಾಯಗೊಂಡವರು. ಇಬ್ಬರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ.ಸಖರಾಯಪಟ್ಟಣಕ್ಕೆ ಬೈಕ್‌ನಲ್ಲಿ ಹೋಗುತ್ತಿದ್ದಾಗ ಚಿರತೆ ಅವರ ಮೇಲೆ ಎರಗಿದೆ. ಮೂರ್ತಣ್ಣ ಅವರ ತಲೆ, ಕೈಗಳಿಗೆ ಮತ್ತು ಮಂಜಪ್ಪ ಅವರ ಎಡಗೈಗೆ ಪೆಟ್ಟಾಗಿದೆ. ಸಮೀಪ ಇದ್ದವರು ಓಡಿ ಬಂದು ಕೂಗಾಡಿ ಇಬ್ಬರನ್ನು ರಕ್ಷಿಸಿದ್ದಾರೆ. ವಿಷಯ ತಿಳಿಯುತ್ತಿದ್ದಂತೆ ಸ್ಥಳದಲ್ಲಿ ಜಮಾಯಿಸಿದ ನೂರಾರು ಜನ ಕಲ್ಲಿನಿಂದ ಹೊಡೆದು ಚಿರತೆಯನ್ನು ಅಟ್ಟಾಡಿಸಿದರು.

'ಎಮ್ಮೆದೊಡ್ಡಿ ಗ್ರಾಮದ ಸುತ್ತಮುತ್ತಲ ಅರಣ್ಯದಲ್ಲಿ ಚಿರತೆಗಳಿದ್ದು, ರಸ್ತೆಯಲ್ಲಿ ಸಾಗುವವರ ಮೇಲೆ ದಾಳಿ ನಡೆಸುತ್ತಿವೆ. ಚಿರತೆಗಳನ್ನು ಹಿಡಿದು ಸ್ಥಳಾಂತರ ಮಾಡಬೇಕು' ಎಂದು ಸ್ಥಳೀಯರು ಆಗ್ರಹಿಸಿದರು.

# ಮಾನವ ಕಳ್ಳಸಾಗಣೆ ತಡೆಗೆ ಪ್ರಾಮಾಣಿಕ ಪ್ರಯತ್ನ ಅಗತ್ಯ

**ಚಿಕ್ಕಮಗಳೂರು:** ಮಾನವ ಕಳ್ಳಸಾಗಣೆಯಂತಹ ಹೀನ ಕೃತ್ಯ, ಅಪರಾಧ ಕೃತ್ಯದಿಂದ ಈ ಜಿಲ್ಲೆಯನ್ನು ಮುಕ್ತಗೊಳಿಸಲು ಪ್ರಾಮಾಣಿಕವಾದ ಪ್ರಯತ್ನದ ಅಗತ್ಯವಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಆದ ವಿ. ಹನುಮಂತಪ್ಪ ಹೇಳಿದರು.

ನಗರದ ತಾಲ್ಲೂಕು ಕಚೇರಿ ಆವರಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಮಕ್ಕಳ ರಕ್ಷಣಾ ಘಟಕ, ಪೊಲೀಸ್ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಆಶ್ರಯದಲ್ಲಿ ಇಂದು ಮಾನವ ಕಳ್ಳಸಾಗಣೆ ತಡೆ ದಿನಾಚರಣೆ ಪ್ರಯುಕ್ತ ಆಯೋಜಿಸಲಾಗಿದ್ದ ಜಾಥಾವನ್ನು ಉದ್ಘಾಟಿಸಿ ಅವರು ಮಾತನಾಡಿದರು.



ಮಹಿಳೆಯರು, ಮಕ್ಕಳು ಅಬಲರಾಗಿದ್ದು, ಪ್ರತಿರೋಧವೊಡ್ಡಲು ಅಸಾಧ್ಯವಾಗಿರುವ ಪರಿಸ್ಥಿತಿಯಲ್ಲಿ ಆಮಿಷವೊಡ್ಡುವ ಮುಖಾಂತರ ಅವರನ್ನು ಕರೆದೊಯ್ದು ಜೀತ ಪದ್ಧತಿ ಇಲ್ಲವೇ ಲೈಂಗಿಕ ಶೋಷಣೆಗೆ ಒಳಪಡಿಸುವ ಹೀನ ಕೃತ್ಯ ನಿರಂತರವಾಗಿ ನಡೆಯುತ್ತಿದೆ. ಮಕ್ಕಳನ್ನು ಸಹ ಕಳ್ಳಸಾಗಣೆ ಮಾಡಿ ಬಾಲಕಾರ್ಮಿಕ ಪದ್ಧತಿಗೆ ದೂಡುವಂತಹ ಪದ್ಧತಿ ನಡೆಯುತ್ತಿದೆ. ಇದರ ವಿರುದ್ಧ ವಿಶ್ವಾದ್ಯಂತ ಸಾಕಷ್ಟು ಹೋರಾಟಗಳು ನಡೆಯುತ್ತಿವೆ. ಜನರಲ್ಲಿ ಈ ಬಗ್ಗೆ ಅರಿವು ಮೂಡಿಸುವುದು ಈ ಜಾಥಾದ ಪ್ರಮುಖ ಉದ್ದೇಶ ಎಂದರು.

ವಕೀಲರ ಸಂಘದ ಅಧ್ಯಕ್ಷ ಸುಜೇಂದ್ರ ಮಾನವ ಕಳ್ಳಸಾಗಣೆ ಹೆಚ್ಚುತ್ತಲೇ ಇದೆ. ಲೈಂಗಿಕ ದೌರ್ಜನ್ಯ ಎಸಗುವುದಕ್ಕಾಗಿ, ಅಂಗಾಂಗಗಳನ್ನು ಪಡೆಯುವುದಕ್ಕಾಗಿ ಹಾಗೂ ಗುಲಾಮಗಿರಿಗಾಗಿ ಮತ್ತು ಹತ್ತು ಹಲವು ಕಾರಣಗಳಿಗಾಗಿ ಮಹಿಳೆಯರು ಮತ್ತು ಮಕ್ಕಳ ಮೇಲೆ ದೌರ್ಜನ್ಯ ನಡೆಯುತ್ತಲೇ ಬಂದಿದೆ. ಜೊತೆಗೆ ಮಹಿಳೆಯರನ್ನು ಮತ್ತು ಮಕ್ಕಳನ್ನು ವಸ್ತುಗಳು ಅಥವಾ ಪ್ರಾಣಿಗಳ ರೀತಿಯಲ್ಲಿ ವಿದೇಶಗಳಿಗೆ ಮಾರಾಟ ಮಾಡುವ ದಂಧೆಯೂ ಅವರ ಶೋಷಣೆಗೆ ಕಾರಣವಾಗಿದೆ. ಈ ಪರಿಸ್ಥಿತಿ ಇರಬಾರದು. ಈ ಹಿನ್ನೆಲೆಯಲ್ಲಿ ಜನಜಾಗೃತಿ ಮೂಡಿಸುವ ಸಲುವಾಗಿ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಇದು ಒಂದು ದಿನಕ್ಕೆ ಸೀಮಿತವಾಗಬಾರದು. ಜನರು ನಿರಂತರವಾಗಿ ಜಾಗೃತರಾಗಿರಬೇಕು. ಹಾಗೆಯೇ ಈ ಶೋಷಣೆ ನಿಲ್ಲಬೇಕು. ಈ ನಿಟ್ಟಿನಲ್ಲಿ ಎಲ್ಲರ ಕಣ್ಣು ಮತ್ತು ಹೃದಯಗಳು ತೆರೆಯಲಿ ಎಂದು ಅವರು ಆಶಿಸಿದರು.

ಸ್ವಾಗತಿಸಿದ ಶಿಶು ಅಭಿವೃದ್ಧಿ ಅಧಿಕಾರಿ ರಂಗನಾಥ್ ಮಾತನಾಡಿದರು. ಉಪವಿಭಾಗಾಧಿಕಾರಿಗಳಾದ ಸುಂದರೇಶ್, ಆರಕ್ಷಕ ಹೆಚ್ಚುವರಿ ಅಧೀಕ್ಷಕ ಸಿ.ಟಿ.ಜಯಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀನಿವಾಸ್ ವೈ.ಆಲವತ್ತಿ, ಜಿಲ್ಲಾ ನಿರೂಪಣಾಧಿಕಾರಿ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸಂತೋಷ್, ವಿವಿಧ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮದಲ್ಲಿದ್ದರು.

ಇದೇ ಸಂದರ್ಭದಲ್ಲಿ ಮಾನವ ಕಳ್ಳಸಾಗಾಣಿಕೆ ತಡೆ ದಿನಾಚರಣೆ ಅಂಗವಾಗಿ ಜನರಲ್ಲಿ ಅರಿವು ಮೂಡಿಸುವ ಸಲುವಾಗಿ ತಾಲ್ಲೂಕು ಕಚೇರಿಯಿಂದ ಆಜಾದ್ ಪಾರ್ಕ್ ವೃತ್ತದವರೆಗೆ ಜಾಥಾ ನಡೆಯಿತು.

# ಫುಟ್‌ಪಾತ್ ಮೇಲಿನ ವಸ್ತು ತೆರವಿಗೆ ನಿರ್ಧಾಕ್ಷಿಣ್ಯ ಕ್ರಮ ವಹಿಸಿ : ಭೋಜೇಗೌಡ

**ಚಿಕ್ಕಮಗಳೂರು :** ನಗರಸಭೆಯಿಂದ 15 ದಿನಗಳ ಮುನ್ನವೇ ಫುಟ್‌ಪಾತ್ ಮೇಲಿನ ವಸ್ತುಗಳನ್ನು ತೆರವುಗೊಳಿಸುವಂತೆ ಸೂಚನೆ ನೀಡಿದ್ದರೂ ಉಲ್ಲಂಘಿಸಿರುವ ವರ್ತಕರ ವಿರುದ್ಧ ನಿರ್ಧಾಕ್ಷಿಣ್ಯ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ವಿಧಾನ ಪರಿಷತ್ ಸದಸ್ಯ ಸೂಚನೆ ನೀಡಿದರು.

ಅವರು ಇಂದು ನಗರಸಭೆಯಿಂದ ಏರ್ಪಡಿಸಲಾಗಿದ್ದ ನಗರದ ಮಲ್ಲಂದೂರು ರಸ್ತೆಯಲ್ಲಿ ಫುಟ್‌ಪಾತ್ ತೆರವು ಕಾರ್ಯಾಚರಣೆಯಲ್ಲಿ ಭಾಗವಹಿಸಿ ಮಾತನಾಡಿದರು.

ನಗರಸಭೆಯಿಂದ ಪರವಾನಗಿ ಪಡೆಯದೆ ಅನಧಿಕೃತವಾಗಿ ತರಕಾರಿ ಸೇರಿದಂತೆ ಹೂವು, ಹಣ್ಣು ಇನ್ನಿತರೆ ಅಂಗಡಿಗಳನ್ನು ನಡೆಸುತ್ತಿರುವ ವರ್ತಕರು ಫುಟ್‌ಪಾತ್ ಮೇಲೆ ವಸ್ತುಗಳನ್ನು ಇಡಬಾರದು ಎಂದು ಹೇಳಿದರು.

ಪರವಾನಗಿ ಪಡೆಯದೆ ಎಷ್ಟು ವರ್ಷಗಳಾಗಿವೆ ಅಲ್ಲಿಂದ ಇಲ್ಲಿಯವರೆಗೆ ವರ್ತಕರಿಗೆ ದಂಡ ಸಹಿತ ಶುಲ್ಕ ವಿಧಿಸಿ ಪರವಾನಗಿ ನೀಡಬೇಕು ಹಾಗೂ ಖಾಲಿ ನಿವೇಶನಗಳಲ್ಲಿ ಗಿಡಘಂಟಿಗಳು ಬೆಳೆದಿದ್ದರೆ ಸಂಬಂಧಪಟ್ಟ ಮಾಲಿಕರಿಗೆ ಸೂಚನೆ ನೀಡಿ ಸ್ವಚ್ಚತೆ ಮಾಡಿಕೊಳ್ಳಬೇಕೆಂದು ತಾಕೀತು ಮಾಡಿ ಎಂದು ಸಲಹೆ ನೀಡಿದರು.

ಕಸವನ್ನು ನಿಗದಿತ ಸ್ಥಳದಲ್ಲಿ ಹಾಕದೆ ಎಲ್ಲೆಂದರಲ್ಲಿ ಹಾಕಿ ನಗರದ ಸೌಂದರ್ಯಕ್ಕೆ ಧಕ್ಕೆ ತರಲಾಗುತ್ತಿದೆ. ಈ ಬಗ್ಗೆ ಪೊಲೀಸರು ಮತ್ತು ನಗರಸಭೆ ಸಿಬ್ಬಂದಿ, ಅಧಿಕಾರಿಗಳು ಕ್ರಮವಹಿಸಬೇಕೆಂದು ಸೂಚಿಸಿದರು.

ಲಾಡ್ಜ್‌ಗಳ ನಿರ್ಮಾಣಕ್ಕೆ ನಗರಸಭೆಯಿಂದ ಪರವಾನಗಿ ನೀಡುವಾಗ ನಿಬಂಧನೆಗಳನ್ನು ವಿಧಿಸಿದ್ದು, ಕಟ್ಟಡ ಪೂರ್ಣಗೊಂಡ ಬಳಿಕ ಪಾರ್ಕಿಂಗ್‌ಗೆ ಮೀಸಲಿಟ್ಟಿದ್ದ ಜಾಗದಲ್ಲಿ ಪೆಟ್ಟಿಗೆ ಅಂಗಡಿಗೆ ಅನುಮತಿ ನೀಡಿ ವ್ಯಾಪಾರ ಮಾಡುತ್ತಿದ್ದಾರೆಂದು ದೂರಿದರು.

ಸಧ್ಯದಲ್ಲೇ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಆರ್‌ಟಿಓ ಪೊಲೀಸರು ಮತ್ತು ಪರಿಸರ ಇಲಾಖೆಯ ಮುಖ್ಯಸ್ಥರನ್ನೊಳಗೊಂಡ ಸಭೆ ನಡೆಸಿ ಸೂಕ್ತ ಕ್ರಮ ವಹಿಸುತ್ತೇವೆ ಎಂದ



ಅವರು, ಹಾಲಿ ಇರುವ ರಸ್ತೆಯನ್ನು ಸ್ವಚ್ಚವಾಗಿಡುವ ಮೂಲಕ ಸಾರ್ವಜನಿಕರ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕೆಂದು ಹೇಳಿದರು.

ಪೌರಕಾರ್ಮಿಕರ ಹುದ್ದೆ ಭರ್ತಿಯಾಗದ ಹೊರತು ಸಮಸ್ಯೆ ಇತ್ಯರ್ಥವಾಗುವುದಿಲ್ಲ, ನಗರದಲ್ಲಿ ಅಂಗಡಿಗಳು ಹೆಚ್ಚಾದಂತೆ ಕಸ ವಿಲೇವಾರಿ ಕಷ್ಟವಾಗುತ್ತಿದೆ. ಹಾಲಿ 203 ಪೌರ ಕಾರ್ಮಿಕರ ಹುದ್ದೆಗೆ ಕೇವಲ 175 ಜನ ಮಾತ್ರ ಸೇವೆ ಸಲ್ಲಿಸುತ್ತಿದ್ದಾರೆಂದು ಹೇಳಿದರು.

ಈ ಬಾರಿಯ ಮುಂಗಾರು ಅಧಿವೇಶನದಲ್ಲಿ ವೈದ್ಯರು, ದಾದಿಯರು, ಪೌರ ಕಾರ್ಮಿಕರು, ಶಿಕ್ಷಕರನ್ನು ಭರ್ತಿಮಾಡುವಂತೆ ಆದ್ಯತೆ ನೀಡಬೇಕೆಂದು ಆಗ್ರಹಿಸುವುದಾಗಿ ಭರವಸೆ ನೀಡಿದರು.

ನಗರಸಭಾಧ್ಯಕ್ಷೆ ಶೀಲಾ ದಿನೇಶ್ ಮಾತನಾಡಿ, ಸಾರ್ವಜನಿಕರ ಸಂಚಾರಕ್ಕೆ ರಸ್ತೆಬದಿ ಫುಟ್‌ಪಾತ್ ಮೇಲೆ ವಸ್ತುಗಳನ್ನಿಟ್ಟು ವ್ಯಾಪಾರ ಮಾಡುತ್ತಿರುವುದರಿಂದ ತೊಂದರೆಯಾಗುತ್ತಿದೆ ಎಂದು ಬಂದ ದೂರಿನ ಹಿನ್ನೆಲೆಯಲ್ಲಿ ಇಂದು ಫುಟ್‌ಪಾತ್ ಮೇಲಿನ ವಸ್ತುಗಳನ್ನು ತೆರವುಗೊಳಿಸುವ ಮೂಲಕ ವರ್ತಕರಿಗೆ ಕಡಕ್ ಸೂಚನೆ ನೀಡಲಾಗಿದೆ ಎಂದರು.

ಸದಸ್ಯ ಎ.ಸಿ. ಕುಮಾರ್‌ಗೌಡ ಮಾತನಾಡಿ, ನಗರವನ್ನು ಸುಂದರ ಮತ್ತು ಸ್ವಚ್ಚ ನಗರವನ್ನಾಗಿ ಮಾಡಬೇಕೆಂಬ ಉದ್ದೇಶದೊಂದಿಗೆ ನಗರಸಭೆಯಿಂದ ಕಳೆದ ಒಂದು ತಿಂಗಳಿನಿಂದ ಸಂತೆ ಮಾರ್ಕೆಟ್ ಸ್ವಚ್ಚತೆ ಹಾಗೂ ಎಂಜಿ ರಸ್ತೆ, ಮಲ್ಲಂದೂರು ರಸ್ತೆಯ ಫುಟ್‌ಪಾತ್ ಮೇಲೆ ವಸ್ತುಗಳನ್ನಿಡುತ್ತಿರುವುದರಿಂದ ತೆರವುಗೊಳಿಸಿ ಸಾರ್ವಜನಿಕರ ಅನುಕೂಲಕ್ಕೆ ಅನುವು ಮಾಡಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರುಗಳಾದ ಗೋಪಿ, ಲಕ್ಷ್ಮಣ್, ಪೌರಾಯುಕ್ತ ಬಿ.ಸಿ ಬಸವರಾಜು, ಆರೋಗ್ಯ ನಿರೀಕ್ಷಕರಾದ ನಾಗಪ್ಪ, ಅಣ್ಣಯ್ಯ, ಪೊಲೀಸ್ ಇಲಾಖೆ ಅಧಿಕಾರಿಗಳು ಮತ್ತು ನಗರಸಭೆ ಸಿಬ್ಬಂದಿ ಉಪಸ್ಥಿತರಿದ್ದರು.

## ಫಿಟ್ನೆಸ್ ಸೆಂಟರ್‌ನ 3ನೇ ಅಂತಸ್ತಿನಿಂದ ಬಿದ್ದು ಯುವತಿ ಸಾವು

**ಬೆಂಗಳೂರು:** ಬೆಂಗಳೂರು ಉತ್ತರ ತಾಲೂಕಿನ ಕಡಬಗೆರೆಯಲ್ಲಿ



ಫಿಟ್ನೆಸ್ ಸೆಂಟರ್ ಒಂದರಲ್ಲಿ ರಿಸೆಪ್ಷನಿಸ್ಟ್ ಆಗಿ ಕೆಲಸ ಮಾಡುತ್ತಿದ್ದ ಯುವತಿಯೊಬ್ಬಳು ಮೂರನೇ ಅಂತಸ್ತಿನಿಂದ ಕೆಳಗೆ ಬಿದ್ದು ಸಾವನ್ನಪ್ಪಿದ್ದಾಳೆ. 20 ವರ್ಷದ ರಿಸೆಪ್ಷನಿಸ್ಟ್ ರಕ್ಷಿತಾ ಮೃತ ದುರ್ದೈವಿ. ಕಳೆದ ಎಂಟು ತಿಂಗಳಿನಿಂದ ರಕ್ಷಿತಾ ಜುನಿಫರ್ ಫಿಟ್ನೆಸ್ ಸೆಂಟರ್‌ನಲ್ಲಿ ರಿಸೆಪ್ಷನಿಸ್ಟ್ ಆಗಿ ಕೆಲಸ ಮಾಡುತ್ತಿದ್ದರು. ಫಿಟ್ನೆಸ್ ಸೆಂಟರ್‌ನ ಮೂರನೇ ಮಹಡಿಗೆ ಹೋಗಿ ಅಲ್ಲಿಂದ ಬಿದ್ದು ಮೃತಪಟ್ಟಿದ್ದಾರೆ. ಮಾದನಾಯಕನಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಆಗಿದೆ.

## ಕೇರಳಕ್ಕೆ ಯೂರಿಯಾ ಗೊಬ್ಬರ ಅಕ್ರಮ ಸಾಗಣೆ: ಬಂಡೀಪುರ ಚೆಕ್‌ಪೋಸ್ಟ್‌ನಲ್ಲಿ ಲಾರಿ ವಶ


**ಮೈಸೂರು:** ರಾಜ್ಯದ ರೈತರು ರಸಗೊಬ್ಬರ ಕೊರತೆ ಅನುಭವಿಸುತ್ತಿದ್ದಾರೆ, ಇದೇ ವೇಳೆ ಅಕ್ರಮವಾಗಿ ನೆರೆಯ ಕೇರಳಕ್ಕೆ ಯೂರಿಯಾ ರಸಗೊಬ್ಬರ ಸಾಗಣೆ ಮಾಡುತ್ತಿದ್ದ ಲಾರಿಯನ್ನು ಕೃಷಿ ಇಲಾಖೆ ಅಧಿಕಾರಿಗಳು ದಾಳಿ ನಡೆಸಿ ವಶಕ್ಕೆ ಪಡೆದಿರುವ ಘಟನೆ ತಾಲೂಕಿನ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮೂಲೆಹೊಳೆ ಚೆಕ್ ಪೋಸ್ಟ್ ನಲ್ಲಿ ನಡೆದಿದೆ.

ನಂಜಗೂಡಿನ ಗೋಧಾಮಿನಿಂದ ಯೂರಿಯಾ ರಸಗೊಬ್ಬರ ತುಂಬಿಕೊಂಡು ಕೇರಳಕ್ಕೆ ಅಕ್ರಮವಾಗಿ ಸಾಗಣೆ ಮಾಡುತ್ತಿರುವ ಕುರಿತು ಬಂದ ಖಚಿತ ಮಾಹಿತಿ ಮೇರೆಗೆ ಕೃಷಿ ಇಲಾಖೆ ಅಧಿಕಾರಿಗಳು ಪೊಲೀಸರ ಸಹಕಾರದೊಂದಿಗೆ ದಾಳಿ ನಡೆಸಿ ಮೂಲೆಹೊಳೆ ಚೆಕ್ ಪೋಸ್ಟ್ ಬಳಿ ಕೇರಳ ನೋಂದಣಿಯ ಕೆ.ಎಲ್–73, ಡಿ–1699 ಲಾರಿಯನ್ನು ತಡೆದು ಪರಿಶೀಲನೆ ನಡೆಸಿದ ವೇಳೆ ಅಕ್ರಮ ಬೆಳಕಿಗೆ ಬಂದಿದೆ.

ಚೆಕ್‌ಪೋಸ್ಟ್ ಬಳಿ ಕೇರಳ ನೋಂದಣಿಯಾದ ಟ್ರಕ್ ಅನ್ನು ಅಧಿಕಾರಿಗಳು ತಡೆದಿದ್ದಾರೆ. ಪರಿಶೀಲನೆಯ ಸಮಯದಲ್ಲಿ, ಸುಮಾರು 300 ಚೀಲಗಳಷ್ಟು ಯೂರಿಯಾ ಗೊಬ್ಬರವನ್ನು, ಕೆಲವು ಟನ್‌ಗಳಷ್ಟು, ಸರಿಯಾದ ಅನುಮತಿಯಿಲ್ಲದೆ ಸಾಗಿಸಲಾಗುತ್ತಿರುವುದು ಕಂಡುಬಂದಿದೆ.

ಲಾರಿಯಲ್ಲಿ ಸುಮಾರು 15 ಟನ್‌ನಷ್ಟು 300 ರಿಂದ 330 ಚೀಲ ಯೂರಿಯಾ ಇದ್ದು, ಸಾಗಣೆದಾರರ ವಿರುದ್ಧ ಕೇಸು ದಾಖಲಿಸಿ ಮುಂದಿನ ಕ್ರಮ ಕೈಗೊಳ್ಳುವಂತೆ ಯೂರಿಯಾ ತುಂಬಿದ ಲಾರಿಯನ್ನು ಪೊಲೀಸರ ವಶಕ್ಕೆ ನೀಡಲಾಗಿದೆ ಎಂದು ಕೃಷಿ ಅಧಿಕಾರಿ ಕಿರಣ್ ಕುಮಾರ್ ಮಾಹಿತಿ ನೀಡಿದ್ದಾರೆ. ಈ ಸಂಬಂಧ ಕೃಷಿ ಇಲಾಖೆ ಸಹಾಯಕ ನಿರ್ದೇಶಕರಾದ ಶಶಿಧರ್ ಪ್ರತಿಕ್ರಯೆ ನೀಡಿ, ತಾಲೂಕಿನಲ್ಲಿ ಭತ್ತ ಇತರೆ ನೀರಾವರಿ ಬೆಳೆಗಳ ಪ್ರಮಾಣ ಕಡಿಮೆ ಇರುವ ಹಿನ್ನೆಲೆಯಲ್ಲಿ ರೈತರಿಗೆ ಯೂರಿಯಾ ಕೊರತೆ ಇಲ್ಲ. ಆದರೆ ಯೂರಿಯಾ ಅಂತರಾಜ್ಯ ಸಾಗಣೆಗೆ ಅವಕಾಶವಿಲ್ಲದಿದ್ದರೂ ಅಕ್ರಮವಾಗಿ ಸಾಗಿಸುತ್ತಿದ್ದ ಹಿನ್ನೆಲೆಯಲ್ಲಿ ದಾಳಿ ನಡೆಸಿ ವಶಕ್ಕೆ ಪಡೆಯಲಾಗಿದೆ ಎಂದು ತಿಳಿಸಿದರು.

# ಬೆಂಗಳೂರಿನ ಸುತ್ತಮುತ್ತಲ ಪ್ರದೇಶಗಳ ಸಮಗ್ರ ಅಭಿವೃದ್ಧಿ : ಸಿಎಂ ಸಿದ್ದರಾಮಯ್ಯ




**ಬೆಂಗಳೂರು :** ಮುಂದಿನ ನಾಲ್ಕು ವರ್ಷಗಳ ಒಳಗಾಗಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಸಬರ್‌ಬನ್ ರೈಲು ಸಂಪರ್ಕ ಕಲ್ಪಿಸುವ ಮೂಲಕ ನಗರದ ಕೇಂದ್ರ ಭಾಗದಂತೆಯೇ ಇತರ ಪ್ರದೇಶಗಳನ್ನು ಸಮಗ್ರ ಅಭಿವೃದ್ಧಿ ಪಡಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ದೇವನಹಳ್ಳಿಯಲ್ಲಿ ಲ್ಯಾಬ್ಸ್ ಇಂಡಿಯಾದ 41 ಎಕರೆ ವಿಸ್ತೀರ್ಣದ ಹೊಸ ಇನ್ನೋವೇಶನ್ ಪಾರ್ಕ್ ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರಿನ ಸಮತೋಲಿತ ಅಭಿವೃದ್ಧಿಗೆ ಹಾಗೂ ಹೊರ ವಲಯಗಳನ್ನು ಅಭಿವೃದ್ಧಿಗೆ ಆಧ್ಯತೆ ನೀಡಲಾಗುತ್ತಿದೆ ಎಂದು ಹೇಳಿದರು.

ವಿಮಾನನಿಲ್ದಾಣಕ್ಕೆ ಮೆಟ್ರೋ ರೈಲು ಸಂಪರ್ಕವನ್ನು ತ್ವರಿತಗತಿಯಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, 2029ರ ವೇಳೆಗೆ ಸಬರ್‌ಬನ್ ರೈಲು ಸಂಪರ್ಕವನ್ನು ಒದಗಿಸಲಾಗುತ್ತಿದೆ ಎಂದಿದ್ದಾರೆ.

ರಾಜ್ಯ ಸರ್ಕಾರದ ಕ್ರಮಗಳು ಕೇವಲ ಬೆಂಗಳೂರಿಗೆ ಸೀಮಿತವಾಗಿವೆ. ರಾಜ್ಯಾದ್ಯಂತ ಜಿಲ್ಲಾ ಕೇಂದ್ರಗಳಲ್ಲೂ ಜಾಗತಿಕ ತಂತ್ರಜ್ಞಾನ ಕೇಂದ್ರಗಳು ಹಾಗೂ ಸಂಶೋಧನಾತಕ ಸಂಸ್ಥೆಗಳ ಅಭಿವೃದ್ಧಿಗೆ ಪೂರ್ವಕವಾಗಿವೆ?. ವಿಶ್ವ ಬ್ಯಾಂಕಿನ 2500 ಕೋಟಿ ರೂ.ಗಳ ಬೆಂಬಲದೊಂದಿಗೆ ಪ್ರಥಮ ದರ್ಜೆ ಕಾಲೇಜುಗಳ ಬಲವರ್ಧನೆ, ಜೇಷ್ಠತಾ ಕೇಂದ್ರಗಳ ಅಭಿವೃದ್ಧಿ, ಸಂಶೋಧನೆ ಮತ್ತು ಅಭಿವೃದ್ಧಿ ಸಾಮಾರ್ಥ್ಯ ವೃದ್ಧಿ ಹಾಗೂ ಕೌಶಲ್ಯ ಸುಧಾರಣೆಗೆ ಆಧ್ಯತೆ ನೀಡಲಾಗಿದೆ. ಭವಿಷ್ಯದಲ್ಲಿ ಆಧುನಿಕ ತಂತ್ರಜ್ಞಾನದೊಂದಿಗೆ ಕೈಜೋಡಿಸಿ ಕೆಲಸ ಮಾಡುವ ಮಾನವ ಸಂಪನೂಲಗಳನ್ನು ಅಭಿವೃದ್ಧಿ ಪಡಿಸಲಾಗುವುದು ಎಂದಿದ್ದಾರೆ.

ಭಾರತದ ಸಿಲಿಕಾನ್ ವ್ಯಾಲಿ ಎಂದು ಕರೆಯಲ್ಪಡುವ ಬೆಂಗಳೂರು ನಗರ ಎಂಬುಂದಕ್ಕಿಂತ ಹೆಚ್ಚಿನದಾಗಿದೆ. ಇದು ಒಂದು ಕಲ್ಪನೆ. ಪರಿಸರ ವ್ಯವಸ್ಥೆ, ನಾವೀನ್ಯತೆಯ ಚೈತನ್ಯ, ಯುವ ತಂತ್ರಜ್ಞರ ಕನಸುಗಳು, ಜಾಗತಿಕ ಉದ್ಯಮಗಳ ದೂರದೃಷ್ಟಿ, ಸಾರ್ವಜನಿಕ ನೀತಿಯ ಸ್ಥಿತಿಸ್ಥಾಪಕತ್ವ ಹಾಗೂ ಭವಿಷ್ಯದ ನಿರ್ಮಾಣ ಒಟ್ಟಿಗೆ ಸೇರುವ ಸಂಗಮವಾಗಿದೆ ಎಂದಿದ್ದಾರೆ.

ಬೆಂಗಳೂರು ಸಾಫ್ಟ್‌ವೇರ್ ಮಾತ್ರವಲ್ಲದೆ ಕ್ವಾಂಟಮ್ ಕಂಪ್ಯೂಟಿಂಗ್, ಕೃತಕ ಬುದ್ಧಿಮತ್ತೆ, ಯಂತ್ರ ಕಲಿಕೆಯಂತಹ ಕ್ಷೇತ್ರಗಳಲ್ಲಿ

## ನಗರದ ಮೂಲಭೂತ ಸೌಲಭ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲು ಕರವೇ ಒತ್ತಾಯ



**ಚಿಕ್ಕಮಗಳೂರು:** ನಗರಸಭೆ ಅಧ್ಯಕ್ಷರಾಗಿ ನೂತನವಾಗಿ ಆಯ್ಕೆಗೊಂಡ ಬಿ. ಶೀಲಾ ದಿನೇಶ್ ಅವರಿಗೆ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನ ಬಣದ ಜಿಲ್ಲಾ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿದರು.

ಬಳಿಕ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ಹೆಚ್. ಗುರುಮೂರ್ತಿ ನಗರದ ರಸ್ತೆಗಳು ಗುಂಡಿಮಯದಿಂದ ಕೂಡಿರುವ ಕಾರಣ ವಾಹನ ಸವಾರರು ಮತ್ತು ಪಾದಚಾರಿಗಳಿಗೆ ಬಹಳಷ್ಟು ತೊಂದರೆ ಆಗುತ್ತಿದೆ. ಅಲ್ಲದೇ ವಾರ್ಡ್‌ಗಳಲ್ಲಿ ಬೀದಿನಾಯಿಗಳ ಹಾವಳಿ ವಿಪರೀತವಾದ ಕಾರಣ ವೃದ್ಧರು, ಮಕ್ಕಳಿಗೆ ಆತಂಕ ಕಾಡುತ್ತಿದ್ದು, ಕೂಡಲೇ ಈ ಬಗ್ಗೆ ಸೂಕ್ತ ಕ್ರಮವಹಿಸಿ ಸಾರ್ವಜನಿಕರಿಗೆ ಮೂಲಭೂತ ಕೊರತೆ ಎದುರಾಗದಂತೆ ಕ್ರಮ ವಹಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಕರವೇ ಗೌರವಾಧ್ಯಕ್ಷ ಮಂಜುನಾಥ್ ತೇರದಾಳ್, ತಾಲ್ಲೂಕು ಅಧ್ಯಕ್ಷ ಅನೀಲ್, ನಗರಾಧ್ಯಕ್ಷ ಧರ್ಮೇಗೌಡ, ಅಜ್ಜಂಪುರ ಮಹಿಳಾ ಅಧ್ಯಕ್ಷೆ ನೀಲಾಂಬಿಕಾ, ಮುಖಂಡರುಗಳಾದ ಹರ್ಷ ತೇರದಾಳ್, ಕಿರಣ್, ಕುಮಾರ್, ಶ್ರೀಕಾಂತ್ ಮತ್ತಿತರರು ಹಾಜರಿದ್ದರು,

## ಹಾಸ್ಟೆಲ್ ಗೆ ಜಿಲ್ಲಾ ನಾಗರಿಕ ಜಾರಿ ಹಕ್ಕು ನಿರ್ದೇಶನಾಲಯದ ಅಧಿಕಾರಿಗಳ ಭೇಟಿ, ಪರಿಶೀಲನೆ ನಡೆಸಿದ ತಂಡ

**ಹರಿಹರ :** ವಿದ್ಯಾರ್ಥಿನಿಯರ ಕಲ್ಯಾಣ ಮತ್ತು ಹಾಸ್ಟೆಲ್ ವ್ಯವಸ್ಥೆಯ ಸದುದ್ದೇಶದ ಪರಿಶೀಲನೆಯಂತೆ, ದಾವಣಗೆರೆ ಜಿಲ್ಲಾ ನಾಗರಿಕ ಜಾರಿ ಹಕ್ಕು ನಿರ್ದೇಶನಾಲಯದ ಅಧಿಕಾರಿಗಳ ತಂಡ ಬುಧವಾರ ಹರಿಹರ ನಗರದಲ್ಲಿನ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿತು.

ಈ ಭೇಟಿ ಜಿಲ್ಲಾ ನಾಗರಿಕ ಜಾರಿ ಹಕ್ಕು ನಿರ್ದೇಶನಾಲಯದ ಸಿಪಿಐ ಎಂ.ವಿ. ಮೇಘರಾಜ್ ಅವರ ನೇತೃತ್ವದಲ್ಲಿ ನಡೆಯಿತು. ನಗರ ಹೈಸ್ಕೂಲ್ ಬಡಾವಣೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯು ನಿರ್ವಹಿಸುತ್ತಿರುವ ಈ ಹಾಸ್ಟೆಲ್‌ನಲ್ಲಿ ತಂಗಿರುವ ವಿದ್ಯಾರ್ಥಿನಿಯರೊಂದಿಗೆ ಅಧಿಕಾರಿಗಳು ನೇರವಾಗಿ ಸಂವಾದ ನಡೆಸಿ ಅವರ ಸಮಸ್ಯೆಗಳನ್ನು ಕೇಳಿದರು.

ಸಾಮಾಜಿಕ ನಡವಳಿಕೆ, ಹಕ್ಕುಗಳು ಮತ್ತು ಅವುಗಳ ಜಾಗೃತಿಯ ಕುರಿತಾದ ಮಾಹಿತಿ ವಿದ್ಯಾರ್ಥಿನಿಯರಿಗೆ ನೀಡಲಾಯಿತು. ಈ ಸಂದರ್ಭ ಮಾತನಾಡಿದ ಎಂ.ವಿ. ಮೇಘರಾಜ್, "ವಿದ್ಯಾರ್ಥಿನಿಯರಿಗೆ ಯಾವುದೇ ತೊಂದರೆ, ನ್ಯೂನತೆಗಳು ಎದುರಾದರೆ ಅವುಗಳನ್ನು ಧೈರ್ಯವಾಗಿ ಸಂಬಂಧಿತ ಮೇಲಾಧಿಕಾರಿಗಳಿಗೆ ತಿಳಿಸಬೇಕು. ನಮ್ಮ ನಿರ್ದೇಶನಾಲಯಕ್ಕೆ ಮಾಹಿತಿ ಬಂದ ಕೂಡಲೇ ಸಂಬಂಧಿತ ಇಲಾಖೆಯು ತನಿಖೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳುವುದು" ಎಂದು ಹೇಳಿದರು.

ಈ ಭೇಟಿ ವೇಳೆ ಕೆಲವೊಂದು ಸೌಕರ್ಯಗಳ ನ್ಯೂನತೆಗಳು ಅಧಿಕಾರಿಗಳ ಗಮನಕ್ಕೆ ಬಂದಿದ್ದು, ಅವುಗಳನ್ನು ಮೇಲಧಿಕಾರಿಗಳ ಗಮನಕ್ಕೆ ತರುವ ಭರವಸೆ ನೀಡಿದರು. "ನಾವು ಸ್ವತಂತ್ರ ನಿರ್ಣಯ ತೆಗೆದುಕೊಳ್ಳಲು ಅಧಿಕಾರ ಹೊಂದಿಲ್ಲ. ಆದರೆ ಕಂಡುಬರುವ ಸಮಸ್ಯೆಗಳ ಬಗ್ಗೆ ವರದಿ ನೀಡುವ ಜವಾಬ್ದಾರಿ ನಮ್ಮದು" ಎಂದು ಎಂ.ವಿ. ಮೇಘರಾಜ್ ತಿಳಿಸಿದರು.

ಈ ಪರಿಶೀಲನಾ ಕಾರ್ಯದ ವೇಳೆ ಪಿಎಸ್‌ಐ ಸಂಜೀವ್ ಕುಮಾರ್, ಪ್ರೊ. ಬಿ.ಕೃಷ್ಣಪ್ಪ ಸ್ಥಾಪಿತ ಕರ್ನಾಟಕ ದಲಿತ ಸಂಘರ್ಷ ಸಮಿತಿಯ ತಾಲೂಕು ಸಂಚಾಲಕ ಪಿ.ಜೆ. ಮಹಾಂತೇಶ್, ಕನ್ನಡ ಪರ ಸಂಘಟನೆಗಳ ಹಿರಿಯ ಮುಖಂಡ ಬಿ. ಮಗದುಮ್ ಹಾಗೂ ಇತರ ಪ್ರಮುಖರು ಹಾಜರಿದ್ದರು.

ಅಧಿಕಾರಿಗಳ ಈ ನಿಯಮಿತ ಮತ್ತು ಎಚ್ಚರಿಕಾಭರಿತ ಭೇಟಿಯಿಂದ ಹಾಸ್ಟೆಲ್ ವ್ಯವಸ್ಥೆಯ ಸುಧಾರಣೆಗೆ ಸಹಕಾರಿಯಾಗುವ ನಿರೀಕ್ಷೆಯಿದೆ.

## ದಲಿತ ಯುವಕನಿಗೆ ಹಲ್ಲೆ– ಪೊಲೀಸ್ ಪೇದೆ ವಿರುದ್ಧ ಕ್ರಮಕ್ಕೆ ಆಗ್ರಹ

**ಚಿಕ್ಕಮಗಳೂರು:** ಕಳಸದ ಸಂಸೆ ಗ್ರಾಮದಲ್ಲಿ ದಲಿತ ಯುವಕನ ಮೇಲೆ ಹಲ್ಲೆ ನಡೆಸಿ ಜಾತಿ ನಿಂದನೆ ಮಾಡಿರುವ ಪೊಲೀಸ್ ಪೇದೆ ಸೇರಿ ಇಬ್ಬರು ಖಾಸಗಿ ವ್ಯಕ್ತಿಗಳನ್ನು ಕೂಡಲೇ ಬಂಧಿಸಿ ಕಾನೂನುಕ್ರಮ ಜರುಗಿಸಬೇಕು ಎಂದು ಅಸೋಸಿಯೇಶನ್ ಫಾರ್ ಪ್ರೊಟೆಕ್ಷನ್ ಸಿವಿಲ್ ರೈಟ್ಸ್ ಪ್ರಧಾನ ಕಾರ್ಯದರ್ಶಿ ಲಿಂಗಪ್ಪ ಆಗ್ರಹಿಸಿದರು.

ಅವರು ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಕಳಸ ತಾಲೂಕಿನ ಸಂಸೆ ಗ್ರಾಮದ ದಲಿತ ಯುವಕ ನಾಗೇಶ್ ಎಂಬುವರು ರಾತ್ರಿ ಕೂಲಿ ಕೆಲಸ ಮುಗಿಸಿ ಸಾಮಗ್ರಿಗಳನ್ನು ಮನೆಯ ಮಾಲೀಕನ ಮನೆಗೆ ಇಡಲು ಹೋಗುತ್ತಿದ್ದರು. ದಾರಿ ಮಧ್ಯದಲ್ಲಿ ರಸ್ತೆಗೆ ಅಡ್ಡಲಾಗಿ ಪಿಕಪ್ ವಾಹನ ನಿಲ್ಲಿಸಿಕೊಂಡು ಪೊಲೀಸ್ ಪೇದೆ ಸಿದ್ದೇಶ್ ಮತ್ತು ಇಬ್ಬರು ಸ್ಥಳೀಯರು



ಮದ್ಯ ಸೇವಿಸುತ್ತಿದ್ದರು. ದಾರಿ ತೆರವು ಮಾಡಿಕೊಡಿ ಎಂದು ಕೇಳಿದಾಗ ಪೊಲೀಸ್ ಪೇದೆ ದರ್ಪದಿಂದ ನಾವು ಮದ್ಯ ಸೇವಿಸುತ್ತಿರುವ ವಿಡಿಯೋ ಮಾಡುತ್ತಿದ್ದೀಯಾ ಎಂದು ನಾಗೇಶ್‌ನಿಗೆ ಮಾರಣಾಂತಿಕವಾಗಿ ಹಲ್ಲೆ ಮಾಡಿ ಜಾತಿ ನಿಂಧನೆ ಮಾಡಿದ್ದಾರೆ ಎಂದು ಆರೋಪಿಸಿದರು.

ಈ ಬಗ್ಗೆ ವಿಷಯ ತಿಳಿದ ಕುದುರೆಮುಖ ಪೊಲೀಸರು ಸ್ಥಳಕ್ಕೆ ಬಂದು ನಾಗೇಶನ ಆಟೋ ಮತ್ತಿತರೆ ಸಾಮಗ್ರಿಗಳನ್ನು ಠಾಣೆಗೆ ಕೊಂಡೊಯ್ದಿದ್ದಾರೆ. ನಾಗೇಶ್ ಕೊಟ್ಟ ದೂರನ್ನು ಪಡೆದುಕೊಂಡಿಲ್ಲ. ಆದರೆ, ಪೊಲೀಸ್ ಪೇದೆ ಸಿದ್ದೇಶ ನೀಡಿದ ದೂರನ್ನು ಪಡೆದು ಪೆಟ್ಟು ತಿಂದಿದ್ದ ನಾಗೇಶನ ದೂರನ್ನು ಪ್ರತಿ ದೂರನ್ನಾಗಿ ಪರಿಗಣಿಸಿದ್ದಾರೆ ಎಂದು ಹೇಳಿದರು.

ಹೀಗಾಗಿ ಈ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿಸ್ಥರನ್ನು ಕೂಡಲೇ ಬಂಧಿಸಬೇಕು. ಅವರ ವಿರುದ್ಧ ದಲಿತ ದೌರ್ಜನ್ಯ ತಡೆ ಕಾಯಿದೆ ಅಡಿಯಲ್ಲಿ ಬಂಧಿಸಬೇಕು. ಪೊಲೀಸ್ ಪೇದೆಯನ್ನು ಸೇವೆಯಿಂದ ವಜಾಮಾಡಬೇಕು ಎಂದು ಒತ್ತಾಯಿಸಿ ಗೃಹಸಚಿವರು ಮತ್ತು ರಾಜ್ಯ ಸರಕಾರಕ್ಕೆ ಮನವಿ ಪತ್ರ ಸಲ್ಲಿಸಿದ್ದೇವೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಎಪಿಸಿಆರ್ ಜಿಲ್ಲಾಧ್ಯಕ್ಷ ಮಹಮದ್ ಸಮೀಉಲ್ಲಾ, ಡಿಎಸ್‌ಎಸ್ ಮುಖಂಡರಾದ ಸಂತೋಷ್, ಆಶಾ ಸಂತೋಷ್ ಮತ್ತಿತರರಿದ್ದರು.

# ದ್ವಿಶತಕ ದಾಟಿದ ಜಾಗತಿಕ ಬಾಕ್ಸಾಫಿಸ್ ಗಳಿಕೆ!

**ಬೆಂಗಳೂರು: ಕನ್ನಡದ ಆ್ಯನಿಮೇಷನ್ ಸಿನಿಮಾ ಮಹಾವತಾರ ನರಸಿಂಹ (Mahavatar Narsimha) ಚಿತ್ರದ ಜಾಗತಿಕ ಬಾಕ್ಸ್ ಆಫಿಸ್ ಗಳಿಕೆ 200 ಕೋಟಿ ರೂ ದಾಟಿದ್ದು, ಹಿಂದಿ ಭಾಷೆಯಲ್ಲೇ ಚಿತ್ರದ ಗಳಿಕೆ 126 ಕೋಟಿ ರೂಗಳಷ್ಟಿದೆ.**

**ಹೌದು... ಅಶ್ವಿನ್ ಕುಮಾರ್ ನಿರ್ದೇಶನದ ಮಹಾವತಾರ ನರಸಿಂಹ ಚಿತ್ರ ಸತತ 3ನೇ ವಾರದ ಯಶಸ್ವಿ ಪ್ರದರ್ಶನದ ಬಳಿಕ 4ನೇ ವಾರದತ್ತ ದಾಪುಗಾಲಿರಿಸಿದ್ದು, ಚಿತ್ರದ ಹಿಂದಿ ಅವತರಣಿಕೆಯ ಗಳಿಕೆ 126.76 ಕೋಟಿ ರೂ ಗೆ ಏರಿಕೆಯಾಗಿದೆ.**

ಈ ಬಗ್ಗೆ ಖ್ಯಾತ ಬಾಕ್ಸ್ ಆಫೀಸ್ ತಜ್ಞ ತರಣ್ ಆದರ್ಶ್ ಮಾಹಿತಿ ನೀಡಿದ್ದು, ಮಹಾವತಾರ ನರಸಿಂಹ ಇದೇ ಜುಲೈ 25 ಶುಕ್ರವಾರದಂದು ಬಿಡುಗಡೆಯಾಗಿತ್ತು. ಅಂದಿನಿಂದ ಇಂದಿನವರೆಗೂ ಚಿತ್ರ ತನ್ನ ಬಾಕ್ಸ್ ಆಫೀಸ್ ಗಳಿಕೆಯಲ್ಲಿ ಅಬ್ಬರ ಆರ್ಭಟ ನಡೆಸುತ್ತಿದೆ.

ಈಗಾಗಲೇ ಚಿತ್ರ ನೂರು ಕೋಟಿ ಕ್ಲಬ್ ಸೇರಿ, ಹಿಂದಿಯಲ್ಲಿ ಬ್ಲಾಕ್ ಬಸ್ಟರ್ ಪಟ್ಟಿಗೆ ಸೇರ್ಪಡೆಯಾಗಿದ್ದು ಚಿತ್ರ 100 ಕೋಟಿ ರೂ ಗಡಿದಾಟಿ ಇದೀಗ ತನ್ನ ಗಳಿಕೆಯನ್ನು 126.76 ಕೋಟಿ ರೂ ಗೆ ಏರಿಸಿಕೊಂಡಿದೆ ಎಂದು ಮಾಹಿತಿ ನೀಡಿದ್ದಾರೆ.



**200 ಕೋಟಿ ರೂ ದಾಟಿದ ಜಾಗತಿಕ ಗಳಿಕೆ**

ಇನ್ನು ಚಿತ್ರದ ಜಾಗತಿಕ ಗಳಿಕೆ 200 ಕೋಟಿ ರೂ ಗಡಿ ದಾಟಿದ್ದು, ಈ ಬಗ್ಗೆ ಹೊಂಬಾಳೆ ಫಿಲಂಸ್ ಮಾಹಿತಿ ನೀಡಿದೆ. ಕನ್ನಡ, ಹಿಂದಿ, ತೆಲುಗು, ತಮಿಳು, ಮಲಯಾಳಂ ಸೇರಿದಂತೆ ಪ್ಯಾನ್ ಇಂಡಿಯಾ ತೆರೆಕಂಡಿದ್ದ ಮಹವಾತಾರ ನರಸಿಂಹ ಚಿತ್ರ ಜಗತ್ತಿನಾದ್ಯಂತ ಈ ವರೆಗೂ 210 ಕೋಟಿ ರೂ ಗಳಿಸಿದೆ ಎಂದು ಟ್ವೀಟ್ ಮಾಡಿದೆ. 'ಮಹಾವತಾರನರಸಿಂಹ ಚಿತ್ರ ಅದ್ಭುತ ಓಟವನ್ನು ಮುಂದುವರೆಸಿದ್ದು, ದಾಖಲೆಗಳನ್ನು ಪುಡಿಗಟ್ಟಿ ವಿಶ್ವಾದ್ಯಂತ ಲಕ್ಷಾಂತರ ಜನರ ಪ್ರೀತಿಯನ್ನು ಗೆದ್ದಿದೆ' ಎಂದು ಟ್ವೀಟ್ ಮಾಡಿದೆ.

# 'ಏಳುಮಲೆ' ಚಿತ್ರದ ಎರಡನೇ ಹಾಡು ಬಿಡುಗಡೆ

## ತರುಣ್ ಕಿಶೋರ್ ಸುಧೀರ್‌ಗೆ ಕೃತಜ್ಞತೆ ಸಲ್ಲಿಸಿದ ಗಾಯಕಿ ಮಂಗ್ಲಿ

ಏಳುಮಲೆ' ಚಿತ್ರದ ಟೈಟಲ್ ಟೀಸರ್ ನಂತರ, ಚಿತ್ರತಂಡ 'ಕಾಪಾಡೋ ದ್ಯಾವ್ರೆ' ಎಂಬ ಎರಡನೇ ಹಾಡನ್ನು ಬಿಡುಗಡೆ ಮಾಡಿದೆ. ಹಾಡು ಬಿಡುಗಡೆ ಮಾಡಿದ ಹಿರಿಯ ನಟಿಯರಾದ ತಾರಾ ಅನುರಾಧ, ಶ್ರುತಿ ಮತ್ತು ಸುಧಾರಾಣಿ ತಂಡಕ್ಕೆ ಶುಭ ಕೋರಿದರು. ಈ ಗೀತೆಯ ರಾಗವು ಆಳವಾದ ನೋವನ್ನು ಹೊಂದಿದೆ ಮತ್ತು ಸಂಗೀತ ಸಂಯೋಜಕ ಡಿ ಇಮ್ಮಾನ್ ಅವರ ದೊಡ್ಡ ಅಭಿಮಾನಿ ಎಂದು ಗಾಯಕಿ ಮಂಗ್ಲಿ ಹೇಳಿದರು

ರಾಜು ಗೌಡ ಅವರು ಪ್ರಸ್ತುತಪಡಿಸಿದ ಈ ಚಿತ್ರವನ್ನು ತರುಣ್ ಕಿಶೋರ್ ಸುಧೀರ್ ಅಟ್ಲಾಂಟಾ ನಾಗೇಂದ್ರ ಅವರೊಂದಿಗೆ ನಿರ್ಮಿಸಿದ್ದಾರೆ. ಪುನೀತ್ ರಂಗಸ್ವಾಮಿ ನಿರ್ದೇಶನದ ಈ ಚಿತ್ರದಲ್ಲಿ ರಾಣಾ ಮತ್ತು ಪ್ರಿಯಾಂಕಾ ಆಚಾರ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ. 'ಕಾಪಾಡೋ ದ್ಯಾವ್ರೆ' ಹಾಡಿಗೆ ಮಂಗ್ಲಿ ಧ್ವನಿ ನೀಡಿದ್ದಾರೆ.

ಕಾರ್ಯಕ್ರಮದಲ್ಲಿ ಗಾಯಕಿ ಮಂಗ್ಲಿ, 'ಡಿ ಇಮ್ಮಾನ್ ಅವರ ಸಂಯೋಜನೆಗಳು ನನಗೆ ತುಂಬಾ ಇಷ್ಟ. ತರುಣ್ ಕಿಶೋರ್ ಸುಧೀರ್ ಅವರು ರಾಬರ್ಟ್ ಚಿತ್ರದ ಮೂಲಕ ಕನ್ನಡ ಚಿತ್ರರಂಗಕ್ಕೆ ನನ್ನನ್ನು ಪರಿಚಯಿಸಿದ್ದಕ್ಕಾಗಿ ಧನ್ಯವಾದಗಳು. ನಂತರ ಕಾಟೇರಾದಲ್ಲಿ ಒಂದು ಹಾಡು, ಮತ್ತು ಈಗ ಈ ಹಾಡನ್ನು ಹಾಡಲು ಅವಕಾಶ ನೀಡಿದ್ದಾರೆ. 'ಕಾಪಾಡೋ ದ್ಯಾವ್ರೆ' ತುಂಬಾ ಭಾವನಾತ್ಮಕವಾಗಿದೆ. ನಾನು ಅದನ್ನು ಮೊದಲು ಕೇಳಿದಾಗ, ಅದರಲ್ಲಿ ಹೆಣೆದ ನೋವು ಮತ್ತು ಪ್ರೀತಿಯನ್ನು ನಾನು ಅನುಭವಿಸಿದೆ. ಇದು ನಿಮ್ಮ ಕಿವಿಗಳಲ್ಲಿ ಮಾತ್ರ ಉಳಿಯದ; ನಿಮ್ಮ ಹೃದಯದಲ್ಲಿ ನೆಲೆಗೊಳ್ಳುವ ಮಧುರ ಹಾಡಾಗಿದೆ. ಇದನ್ನು ಹಾಡುವಾಗ ಹೃದಯಾಘಾತವನ್ನು ಎದುರಿಸುತ್ತಿರುವ ಪ್ರೇಮಿಯ ಭಾವನೆಗಳನ್ನು ಬದುಕುವಂತಿತ್ತು. ಭಾವನೆಗಳು ಸಾರ್ವತ್ರಿಕ.



ಇದು ಪೂರ್ಣ ಹೃದಯದಿಂದ ಪ್ರೀತಿಸಿದ ಯಾರನ್ನಾದರೂ ಸ್ಪರ್ಶಿಸುತ್ತದೆ ಎಂದು ನಾನು ನಂಬುತ್ತೇನೆ' ಎಂದು ಅವರು ಹೇಳುತ್ತಾರೆ.

ಈ ದೃಶ್ಯಗಳು ತಮಗೆ ಸಂತೋಷ ಮತ್ತು ಭಾವನಾತ್ಮಕತೆಯನ್ನು ಉಂಟುಮಾಡಿದವು ಎಂದು ತಾರಾ ಅನುರಾಧ ಒಪ್ಪಿಕೊಂಡರು. 'ಇದು ಪ್ರೇಮಿಗಳು ಹೋರಾಡುತ್ತಿರುವುದನ್ನು ತೋರಿಸುತ್ತದೆ ಮತ್ತು ಇದು ನಿಜವಾದ ಕಥೆಯನ್ನು ಆಧರಿಸಿದ್ದರೆ, ಅದನ್ನು ನಿಖರವಾಗಿ ನಡೆದಂತೆಯೇ ಹೇಳಬೇಕು ಎಂದ ಅವರು ರಾಣಾ ಮತ್ತು ಪ್ರಿಯಾಂಕಾ ಅವರ ಪರದೆಯ ಉಪಸ್ಥಿತಿ ಮತ್ತು ತರುಣ್ ಅವರ ಕೆಲಸ ಅತ್ಯುತ್ತಮ ಎಂದು ಶ್ಲಾಘಿಸಿದರು.

ಏಳುಮಲೆ ಚಿತ್ರವು ರಾಣಾಗೆ ಗಂಭೀರ ನಟನಾಗಿ ಗುರುತಿಸಿಕೊಳ್ಳಲು ಅವಕಾಶ ನೀಡುತ್ತದೆ. ಚಿತ್ರಕ್ಕೆ ಪ್ರಿಯಾಂಕಾ ಮೋಡಿಯನ್ನು ತರುತ್ತಾರೆ. ಹೊಸಬರಿಗೆ ಅಂತಹ ಅವಕಾಶಗಳನ್ನು ನೀಡುವುದು ಸಣ್ಣ ವಿಷಯವಲ್ಲ. ಆದರೆ, ತರುಣ್ ಹಿಂಜರಿಕೆಯಿಲ್ಲದೆ ಅದನ್ನು ಮಾಡುತ್ತಾರೆ' ಎಂದು ನಟಿ ಶ್ರುತಿ ಹೇಳಿದರು.

ಟೀಸರ್ ಮತ್ತು ಹಾಡು ಕನ್ನಡ ಚಿತ್ರರಂಗದ ಹಳೆಯ ಹೊಳಪನ್ನು ನೆನಪಿಸಿತು ಮತ್ತು ಪರದೆಯ ಮೇಲೆ ಕಾಣುವ ಸಮರ್ಪಣಾಭಾವ ಉತ್ತಮವಾಗಿದೆ ಎಂದು ಸುಧಾರಾಣಿ ಹೇಳಿದರು.

ಹಾಡಿಗೆ ಡಿ ಇಮ್ಮಾನ್ ಸಂಗೀತ ಸಂಯೋಜಿಸಿದ್ದಾರೆ ಮತ್ತು ನಾಗಾರ್ಜುನ್ ಶರ್ಮಾ ಸಾಹಿತ್ಯ ಬರೆದಿದ್ದಾರೆ. ಈ ಚಿತ್ರವು ಕರ್ನಾಟಕ-ತಮಿಳುನಾಡು ಗಡಿಭಾಗದಲ್ಲಿ ನಡೆಯುವ ಕಥೆಯನ್ನು ಒಳಗೊಂಡಿದೆ. ಚಿತ್ರವು ಕನ್ನಡ, ತಮಿಳು ಮತ್ತು ತೆಲುಗು ಭಾಷೆಗಳಲ್ಲಿ ಬಿಡುಗಡೆಯಾಗಲಿದೆ. ಸೆಪ್ಟೆಂಬರ್ ಮೊದಲ ವಾರದಲ್ಲಿ ಚಿತ್ರಮಂದಿರಗಳಲ್ಲಿ ಬಿಡುಗಡೆ ಮಾಡಲು ಚಿತ್ರತಂಡ ಯೋಜಿಸಿದ್ದು, ಅಧಿಕೃತ ದಿನಾಂಕವನ್ನು ಶೀಘ್ರದಲ್ಲೇ ಘೋಷಿಸಲಾಗುವುದು.

# ಕರಾವಳಿ'ಯಲ್ಲಿ ಮಾವೀರನಾಗಿ ರಾಜ್ ಬಿ ಶೆಟ್ಟಿ ಅಬ್ಬರ!

ಸದ್ಯ ಕರುಣಾಕರ ಗುರೂಜಿಯಾಗಿ ಅಭಿಮಾನಿಗಳ ಹೃದಯ ಗೆದ್ದಿರುವ ನಟ, ನಿರ್ದೇಶಕ ರಾಜ್ ಬಿ ಶೆಟ್ಟಿ ಅವರು ಈಗ 'ಕರಾವಳಿ'ಯಲ್ಲಿ ಮಾವೀರನಾಗಿ ಅಬ್ಬರಿಸಲಿದ್ದಾರೆ... ಹೌದು, ರಾಜ್ ಬಿ ಶೆಟ್ಟಿ ಇದೀಗ ಮತ್ತೊಂದು ವಿಭಿನ್ನ ಪಾತ್ರದ ಮೂಲಕ ಅಭಿಮಾನಿಗಳ ಮುಂದೆ ಬರುತ್ತಿದ್ದಾರೆ. ಅಂದಹಾಗೆ ಮಾವೀರನಾಗಿ ರಾಜ್ ಶೆಟ್ಟಿ ಕಾಣಿಸಿಕೊಳ್ಳುತ್ತಿರುವುದು ಈಗಾಗಲೇ ಭಾರಿ ನಿರೀಕ್ಷೆ ಮತ್ತು ಕುತೂಹಲ ಮೂಡಿಸಿರುವ 'ಕರಾವಳಿ' ಸಿನಿಮಾದಲ್ಲಿ.

ಗುರುದತ್ ಗಾಣಿಗ ನಿರ್ದೇಶನದಲ್ಲಿ ಮೂಡಿ ಬರುತ್ತಿರುವ ಕರಾವಳಿ ಸಿನಿಮಾದಲ್ಲಿ ರಾಜ್ ಬಿ ಶೆಟ್ಟಿ ಪ್ರಮುಖ ಪಾತ್ರದಲ್ಲಿ ನಟಿಸುತ್ತಿದ್ದಾರೆ. ಪ್ರಜ್ವಲ್ ದೇವರಾಜ್ ನಾಯಕನಾಗಿ ಕಾಣಿಸಿಕೊಳ್ಳುತ್ತಿರುವ ಕರಾವಳಿ ಸಿನಿಮಾಗೆ ರಾಜ್ ಬಿ ಶೆಟ್ಟಿ ಎಂಟ್ರಿ ಕೊಟ್ಟಿದ್ದಾರೆ.

ರಾಜ್ ಎಂಟ್ರಿಯಿಂದ ಕರಾವಳಿ ಚಿತ್ರದ ಮೇಲಿನ ನಿರೀಕ್ಷೆ ದುಪ್ಪಟ್ಟಾಗಿದೆ. ಸದ್ಯ ರಾಜ್ ಬಿ ಶೆಟ್ಟಿ ಅವರ ಪಾತ್ರ ಪರಿಚಯದ ಟೀಸರ್ ರಿಲೀಸ್ ಆಗಿದೆ. ರಾಜ್ ಶೆಟ್ಟಿ ಲುಕ್ ಆಕರ್ಷಕಾಗಿದ್ದು ಯಾವ ಪಾತ್ರ ಎನ್ನುವ ಕುತೂಹಲ ಹೆಚ್ಚಾಗಿದೆ. ಎರಡು ಕೋಣಗಳ ಮಧ್ಯೆ ನಿಂತು ದಿಟ್ಟಿಸಿ ನೋಡುತ್ತಿರುವ ರಾಜ್ ಬಿ ಶೆಟ್ಟಿ ಒಂದು ಕೈಯಲ್ಲಿ ಪಂಜು ಹಿಡಿದು ಕಾಣಿಸಿಕೊಂಡಿದ್ದಾರೆ.

ರಾಜ್ ಲುಕ್ ನೋಡುತ್ತಿದ್ದರೆ ಕಂಬಳ ಓಡಿಸುವ ಓಟಗಾರನ ಅಥವಾ ಕಂಬಳ ನಡೆಸುವ ಕುಟುಂಬದ ಮಹಾವೀರನ





ಎನ್ನುವುದು ಕುತೂಹಲ ಮೂಡಿಸಿದೆ. ರಾಜ್ ಪಾತ್ರದ ಬಗ್ಗೆ ಸಿನಿಮಾತಂಡ ಯಾವುದೇ ಮಾಹಿತಿ ಬಿಟ್ಟುಕೊಟ್ಟಿಲ್ಲ. ಆದರೆ ಲುಕ್ ರಿಲೀಸ್ ಮಾಡುವ ಮೂಲಕ ಕರಾವಳಿ ಸಿನಿಮಾ ಮೇಲಿನ ನಿರೀಕ್ಷೆಯನ್ನು ಹೆಚ್ಚಿಸಿದೆ.

ಈಗಾಗಲೇ ಕರಾವಳಿ ಸಿನಿಮಾದಿಂದ ರಿಲೀಸ್ ಆಗಿರುವ ಪೋಸ್ಟರ್ ಮತ್ತು ಟೀಸರ್ ಸಿಕ್ಕಾಪಟ್ಟೆ ವೈರಲ್ ಆಗಿದೆ. ಇದೀಗ ರಾಜ್ ಶೆಟ್ಟಿ ಪೋಸ್ಟರ್ ಮತ್ತಷ್ಟು ಆಕರ್ಷಕವಾಗಿದ್ದು ಸಿನಿಮಾದ ನಿರೀಕ್ಷೆಯನ್ನು ಮತ್ತಷ್ಟು ಹೆಚ್ಚಿಸಿದೆ. ಕರಾವಳಿಯಲ್ಲಿ ನಟ ಮಿತ್ರ ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಇನ್ನೂ ರಮೇಶ್ ಇಂದಿರ ಅವರ ಪಾತ್ರ ಕೂಡ ಸಿಕ್ಕಾಪಟ್ಟೆ ಪವರ್‌ಫುಲ್ ಆಗಿದೆ. ನಾಯಕಿಯಾಗಿ ಸಂಪದಾ ಕಾಣಿಸಿಕೊಂಡಿದ್ದಾರೆ.

ಕರಾವಳಿ ಹೆಸರೇ ಹೇಳುವ ಹಾಗೆ ಬಹುತೇಕ ಸಿನಿಮಾ ಕರಾವಳಿಯ ಸುತ್ತಮುತ್ತನೇ ಚಿತ್ರೀಕರಣಗೊಂಡಿದೆ. ಈ ಸಿನಿಮಾ ಗುರುದತ್ ಗಾಣಿಗ ನಿರ್ದೇಶನದ ಜೊತೆಗೆ ವಿಕೆ ಫಿಲ್ಮಂ ಅಸೋಸಿಯೇಷನ್ ನಲ್ಲಿ ಗಾಣಿಗ ಫಿಲ್ಮ್ಸ್‌ನಲ್ಲಿ ನಿರ್ಮಾಣವಾಗುತ್ತಿದೆ. ಕರಾವಳಿ ಮನುಷ್ಯ ಹಾಗೂ ಪ್ರಾಣಿ ಮಧ್ಯೆ ನಡೆಯುವ ಸಂಘರ್ಷದ ಕಥೆ. ಪಕ್ಕಾ ಹಳ್ಳಿ ಬ್ಯಾಕ್ ಡ್ರಾಪ್ ನಲ್ಲಿ ಸಿನಿಮಾ ಮೂಡಿ ಬರಲಿದೆ. ಈ ಚಿತ್ರಕ್ಕೆ ಸಚಿನ್ ಬಸ್ರೂರು ಸಂಗೀತ ಸಂಯೋಜನೆ ಮಾಡಿದ್ದಾರೆ. ಅಭಿಮನ್ಯೂ ಸದಾನಂದನ್ ಕ್ಯಾಮರ ವರ್ಕ್ ಚಿತ್ರಕ್ಕಿದೆ.

# ಅಭಿಮನ್ಯು-ಆದ್ಯ ಪ್ರಿಯಾ ನಟನೆಯ 'ಹಚ್ಚೆ' ಬಿಡುಗಡೆಗೆ ಸಿದ್ಧ; ಆಗಸ್ಟ್‌ನಲ್ಲಿ ತೆರೆಗೆ

ಸಸ್ಪೆನ್ಸ್ ಥ್ರಿಲ್ಲರ್ ಚಿತ್ರ 'ಹಚ್ಚೆ' ಚಿತ್ರ ಬಿಡುಗಡೆಗೆ ಸಜ್ಜಾಗಿದ್ದು, ಆಗಸ್ಟ್ 22 ರಂದು ರಾಜ್ಯದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ. ಟ್ರೇಲರ್ ಬಿಡುಗಡೆ ಜೊತೆಗೆ ಅಧಿಕೃತ ಘೋಷಣೆ ಮಾಡಲಾಯಿತು. ಅಶ್ವ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಿಸಲಾದ ಈ ಚಿತ್ರವನ್ನು ಯಶೋಧರ ಬರೆದು ನಿರ್ದೇಶಿಸಿದ್ದಾರೆ.

'ದಿ ಪವರ್ ಆಫ್ ಹಿಸ್ಟರಿ' ಎಂಬ ಟ್ಯಾಗ್‌ಲೈನ್ ಹೊಂದಿರುವ ಈ ಟ್ರೇಲರ್, ನಿಗೂಢತೆ, ಡ್ರಾಮಾ ಮತ್ತು ಐತಿಹಾಸಿಕ ಅಂಶಗಳನ್ನು ಮಿಶ್ರಣ ಮಾಡುವ ಕಥಾವಸ್ತುವಿನ ಸುಳಿವು ನೀಡುತ್ತದೆ. ಈ ಚಿತ್ರದಲ್ಲಿ ಅಭಿಮನ್ಯು ನಾಯಕನಾಗಿ ನಟಿಸಿದ್ದು, ಅವರಿಗೆ ಜೋಡಿಯಾಗಿ ಆದ್ಯ ಪ್ರಿಯಾ ನಟಿಸಿದ್ದಾರೆ. ಅನು ಪ್ರಭಾಕರ್, ಗುರುರಾಜ್ ಹೊಸಕೋಟೆ, ದುಷ್ಯಂತ್, ಶ್ರೀಮಂತ್ ಸುರೇಶ್ ಮತ್ತು ಚಂದ್ರು ಬಂಡೆ ಸೇರಿದಂತೆ ಇತರರು ಚಿತ್ರದಲ್ಲಿ ನಟಿಸಿದ್ದಾರೆ.

ಕರ್ನಾಟಕದ ವಿವಿಧ ಸುಂದರ ಸ್ಥಳಗಳಲ್ಲಿ ಚಿತ್ರೀಕರಣಗೊಂಡ ಹಚ್ಚೆ ಈ ವರ್ಷದ ಆರಂಭದಲ್ಲಿ ತನ್ನ 50 ದಿನಗಳ ಚಿತ್ರೀಕರಣವನ್ನು ಪೂರ್ಣಗೊಳಿಸಿತು. ಹಚ್ಚೆಯ ತಾಂತ್ರಿಕ ತಂಡದಲ್ಲಿ ಸಂಗೀತ ಸಂಯೋಜಕ ವಿವೇಕ್ ಚಕ್ರವರ್ತಿ, ಸಂಪಾದಕ ಸುರೇಶ್ ಆರುಮುಗಂ ಮತ್ತು ಛಾಯಾಗ್ರಾಹಕ ಯಾಸೀನ್ ಇದ್ದಾರೆ.



# ನನ್ನ 'ಬಾಷಾ' ಚಿತ್ರಕ್ಕಿಂತ 'ಓಂ' 10 ಪಟ್ಟು ದೊಡ್ಡದು; ಭಾರತದ ಬುದ್ಧಿವಂತ ನಿರ್ದೇಶಕರಿಗೆಲ್ಲಾ ಉಪೇಂದ್ರ ದೊಡ್ಡ ಸ್ಫೂರ್ತಿ!



ಉಪೇಂದ್ರ ಅವರ ನಿರ್ದೇಶನಕ್ಕೆ ಫಿದಾ ಆಗದವರೇ ಇಲ್ಲ. ಅಂತಹ ಸಿನಿಮಾಗಳನ್ನು ಅವರು ತಮ್ಮ ವೃತ್ತಿ ಜೀವನದಲ್ಲಿ ನೀಡಿದ್ದಾರೆ. ಅವರ ಸ್ಟೈಲ್ ಅನೇಕ ನಿರ್ದೇಶಕರಿಗೆ ಸ್ಫೂರ್ತಿ ಎಂದರೂ ತಪ್ಪಾಗಲಾರದು.

ನಿರ್ದೇಶಕ ಲೋಕೇಶ್ ಕನಗರಾಜ್ ಸೇರಿದಂತೆ ಅನೇಕ ನಿರ್ದೇಶಕರು ತಮ್ಮ ಸಿನಿಮಾ ಮೇಕಿಂಗ್‌ನಲ್ಲಿ ಉಪೇಂದ್ರ ಪ್ರಭಾವ ಇದೆ ಎಂದು ಒಪ್ಪಿಕೊಂಡಿದ್ದು ಇದೆ. ಈಗ ತಮಿಳಿನ ಸೂಪರ್‌ಸ್ಟಾರ್ ರಜನಿಕಾಂತ್ ಅವರು ಉಪೇಂದ್ರ ಅವರನ್ನು ಹಾಡಿ ಹೊಗಳಿದ್ದಾರೆ.


ಲೋಕೇಶ್ ಕನಕರಾಜ್ ನಿರ್ದೇಶನದ 'ಕೂಲಿ' ಸಿನಿಮಾದಲ್ಲಿ 'ಸೂಪರ್ ಸ್ಟಾರ್' ರಜನಿಕಾಂತ್ ಜೊತೆಗೆ ಉಪೇಂದ್ರ ನಟಿಸುತ್ತಿದ್ದಾರೆ. ಈ ಸಿನಿಮಾದ ಆಡಿಯೋ ಈಚೆಗೆ ಚೆನ್ನೈನಲ್ಲಿ ನಡೆದಿತ್ತು. ಈ ವೇಳೆ ರಜನಿಕಾಂತ್ ಅವರು ಉಪೇಂದ್ರ ಅವರನ್ನ ಮನಸಾರೆ ಹೊಗಳಿದ್ದಾರೆ. ಜೊತೆಗೆ 'ಓಂ' ಚಿತ್ರವನ್ನು ಕೂಡ ನೆನಪು ಮಾಡಿಕೊಂಡಿದ್ದಾರೆ.


ಕೂಲಿ' ಚಿತ್ರದಲ್ಲಿ ಉಪೇಂದ್ರ ಅವರು ಕಲೀಶ ಎಂಬ ಪಾತ್ರವನ್ನು ಮಾಡಿದ್ದಾರೆ. ಆ ಬಗ್ಗೆ ಮಾತನಾಡುತ್ತಾ ರಜನಿಕಾಂತ್, "ನಮ್ಮ ಸಿನಿಮಾದಲ್ಲಿ ಉಪೇಂದ್ರ ಅವರು ಒಂದು ಪಾತ್ರ ಮಾಡಿದ್ದಾರೆ. ಭಾರತದ ಅತ್ಯಂತ ಬುದ್ಧಿವಂತ ನಿರ್ದೇಶಕರಿಗೆಲ್ಲಾ ಉಪೇಂದ್ರ ಅವರೇ ದೊಡ್ಡ ಸ್ಫೂರ್ತಿ. ಮಲಯಾಳಂ, ಹಿಂದಿ, ತೆಲುಗು, ತಮಿಳು ಎಲ್ಲಾ ಭಾಷೆಯವರಿಗೂ ಉಪೇಂದ್ರ ಸ್ಫೂರ್ತಿ. ಅಂತಹ ದೊಡ್ಡ ಡೈರೆಕ್ಟರ್. ಅವರಿಗೆ ನಟನಾಗಬೇಕು ಎಂದು ಇಷ್ಟವಿರಲಿಲ್ಲ. ಅವರು ಮೂಲತಃ ನಿರ್ದೇಶಕರು" ಎಂದು ಹೇಳಿದ್ದಾರೆ.

ಅವರು 'ಓಂ' ಎಂಬ ಒಂದು ಸಿನಿಮಾವನ್ನು ಶಿವರಾಜ್‌ಕುಮಾರ್‌ಗೆ ಮಾಡಿದ್ದಾರೆ. ನನಗೆ ಇಲ್ಲಿ 'ಬಾಷಾ' ಸಿನಿಮಾ ಹೇಗೋ, ಅಲ್ಲಿ (ಕರ್ನಾಟಕದಲ್ಲಿ) ಅದಕ್ಕಿಂತಲೂ 10 ಪಟ್ಟು ದೊಡ್ಡ ಸಿನಿಮಾ 'ಓಂ'. ಆದಾದ ಮೇಲೆ ಅವರು ಮಾಡಿರುವ ಒಂದೊಂದು ಪಾತ್ರಗಳು ಡಿಫರೆಂಟ್. ಈಗ ಲೋಕೇಶ್ ಕನಕರಾಜ್ ನಾನ್ ಲೀನಿಯರ್ ಅಂತೇನೋ ಟೆಕ್ನಿಕ್ ಬಳಸುತ್ತಾರಲ್ವಾ? ಅದನ್ನು ಉಪೇಂದ್ರ ಅಂದೇ ಮಾಡಿದ್ದಾರೆ" ಎಂದು ರಜನಿಕಾಂತ್ ಹೇಳಿದ್ದಾರೆ.

ರಜನಿಕಾಂತ್ ಅವರ ಬಗ್ಗೆ ಖುಷಿಯಿಂದ ಮಾತನಾಡಿರುವ ಉಪೇಂದ್ರ, "ನಾನು ಈಗ ಹೇಳುವುದು ಅತಿಶಯೋಕ್ತಿ ಎನಿಸಬಹುದು. ಆದರೆ ನಾನು ನಿಜವಾಗಿಯೂ ಹೇಳುತ್ತಿದ್ದೇನೆ, ನಾನು 25 ವರ್ಷದ ಹಿಂದೆ ತಲೈವಾ ಅವರನ್ನು ಭೇಟಿಯಾದೆ. ಅದು ನನಗೆ ಯಾವತ್ತೂ ಮರೆಯದಂತಹ ಕ್ಷಣ.

# ಕನಕವತಿ ಪೋಸ್ಟರ್ ರಿಲೀಸ್



ಕಾಂತಾರ ಚಾಪ್ಟರ್ 1' ಚಿತ್ರ ಅಕ್ಟೋಬರ್ 2ಕ್ಕೆ ತೆರೆಕಾಣುವುದಕ್ಕೆ ಚಿತ್ರಪ್ರೇಮಿಗಳು ಕಾತರದಿಂದ ಕಾಯುತ್ತಿದ್ದಾರೆ. ಕಾಂತಾರ ಚಿತ್ರಕ್ಕೆ ಸಪ್ತಮಿ ಗೌಡ ನಾಯಕಿ ಆಗಿದ್ದರು. ಇದೀಗ ಈ ಚಿತ್ರದ ಪ್ರೀಕ್ವೆಲ್ 'ಕಾಂತಾರ: ಚಾಪ್ಟರ್ 1' (Kantara: Chapter 1) ಸಿನಿಮಾಗೆ ನಾಯಕಿ ಯಾರು ಎಂಬ ವಿಚಾರವನ್ನು ಚಿತ್ರತಂಡ ರಿವೀಲ್ ಮಾಡಿದೆ.

ಇಂದು ವರಮಹಾಲಕ್ಷ್ಮಿಯ ಶುಭದಿನ ಕಾಂತಾರಾ ಚಾಪ್ಟರ್ 1 ಚಿತ್ರದ ನಾಯಕಿಯ ಪಾತ್ರ ಕನಕವತಿ ಎಂದು ಚಿತ್ರತಂಡ ಪೋಸ್ಟರ್ ರಿಲೀಸ್ ಮಾಡಿದೆ.

'ಕಾಂತಾರ: ಚಾಪ್ಟರ್ 1' ಇನ್ನು ಒಂದೂವರೆ ತಿಂಗಳು ಬಾಕಿಯಿದೆ. ಹೀಗಾಗಿ, ಚಿತ್ರಕ್ಕೆ ದೊಡ್ಡ ಮಟ್ಟದಲ್ಲಿ ಪ್ರಚಾರ ಆರಂಭಿಸಲು ತಂಡ ಸಿದ್ಧವಾಗಿದೆ. ಅದರ ಭಾಗವಾಗಿ ಸಿನಿಮಾದ ನಾಯಕಿ ಪಾತ್ರದ ಪರಿಚಯವನ್ನು ನೀಡಲಾಗಿದೆ. ರುಕ್ಮಿಣಿ ವಸಂತ್ ಈ ಚಿತ್ರದ ನಾಯಕಿ ಎಂಬ ಬಗ್ಗೆ ಅಧಿಕೃತ ಮಾಹಿತಿ ಹೊರಬಿದ್ದಿದೆ.

ರುಕ್ಮಿಣಿ ವಸಂತ್ ಅವರು ಚಿತ್ರದಲ್ಲಿ ಯುವರಾಣಿ ರೀತಿ ಕಾಣಿಸಿದ್ದಾರೆ. ಅವರ ಪಾತ್ರದ ಬಗ್ಗೆ ಸಾಕಷ್ಟು ಕುತೂಹಲ ಮೂಡಿದೆ. ಪೋಸ್ಟರ್ ಹಿಂಭಾಗ ನೋಡಿದರೆ ಅದು ರಾಜರ ಆಸ್ಥಾನದ ರೀತಿಯೇ ಕಾಣಿಸುತ್ತದೆ. ಈ ಖುಷಿಯ ವಿಚಾರವನ್ನು ಹೊಂಬಾಳೆ ಫಿಲ್ಮ್ಸ್ ನಿರ್ಮಾಣ ಸಂಸ್ಥೆ ಸೇರಿದಂತೆ ರಿಷಬ್ ಶೆಟ್ಟಿ, ರುಕ್ಮಿಣಿ ವಸಂತ್ ಹಂಚಿಕೊಂಡಿದ್ದಾರೆ.

# ಆಡಿಯೋ ರೈಟ್ಸ್ ದಾಖಲೆ ಮೊತ್ತಕ್ಕೆ ಮಾರಾಟ


ಸ್ಯಾಂಡಲ್ ವುಡ್ ನಲ್ಲಿ ಸಾಕಷ್ಟು ನಿರೀಕ್ಷೆಗಳನ್ನು ಮೂಡಿಸಿರುವ ದುನಿಯಾ ವಿಜಯ್ ಅಭಿನಯದ ಲ್ಯಾಂಡ್ ಲಾರ್ಡ್ ಚಿತ್ರದ ಆಡಿಯೋ ರೈಟ್ಸ್ ಆನಂದ್ ಆಡಿಯೋ ಪಾಲಾಗಿದೆ. ದಾಖಲೆ ಮೊತ್ತಕ್ಕೆ ಚಿತ್ರದ ಆಡಿಯೋ ರೈಟ್ಸ್ ಮಾರಾಟವಾಗಿದೆ.

ಸಾರಥಿ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ಹೇಮಂತ್ ಗೌಡ ಕೆ.ಎಸ್ ಮತ್ತು ಕೆ.ವಿ. ಸತ್ಯಪ್ರಕಾಶ್ ನಿರ್ಮಿಸಿರುವ ಈ ಚಿತ್ರವನ್ನು ಜಡೇಶಾ ಕೆ. ಹಂಪಿ ನಿರ್ದೇಶಿಸಿದ್ದಾರೆ.

ಸೆಟ್ಟೇರಿದಾಗ್ಲೇ ಭಾರಿ ಸದ್ದು ಮಾಡಿದ್ದ ಈ ಚಿತ್ರದ ಬಹುತೇಕ ಚಿತ್ರೀಕರಣ ಪೂರ್ಣಗೊಂಡಿದ್ದು, ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ಬಿರುಸಿನಿಂದ ಸಾಗಿದೆ.

ಈ ನಡುವೆ ಚಿತ್ರತಂಡ ವರಮಹಾಲಕ್ಷ್ಮೀ ಹಬ್ಬದ ಪ್ರಯುಕ್ತ ಸಂತಸದ ಸುದ್ದಿಯೊಂದನ್ನ ಹಂಚಿಕೊಂಡಿದೆ. ಆನಂದ್ ಆಡಿಯೋ ಕಂಪನಿ ಲ್ಯಾಂಡ್ ಲಾರ್ಡ್ ಚಿತ್ರದ ಆಡಿಯೋ ಹಕ್ಕುಗಳನ್ನ ದಾಖಲೆಯ ಬೆಲೆಗೆ ಖರೀದಿಸಿದೆ ಎಂದು ತಿಳಿಸಿದೆ. ಆ ವಿಚಾರವನ್ನ ಚಿತ್ರತಂಡ ಮೋಷನ್ ಪೋಸ್ಟರ್ ಬಿಡುಗಡೆ ಮಾಡುವ ಮೂಲಕ ವಿಶೇಷವಾಗಿ ಹಂಚಿಕೊಂಡಿದೆ.

ಆನಂದ್ ಆಡಿಯೋ ಪಾಲಿಗಿದು ಲಕ್ಕಿ ಮತ್ತು ಹಿಟ್ ಕಾಂಬಿನೇಷಶನ್ ಆಗಿದೆ. ದುನಿಯಾ ವಿಜಯ್ ಅವರ ಸಾಲು ಸಾಲು ಸಿನಿಮಾಗಳು ಆನಂದ್ ಆಡಿಯೋ ಕಂಪನಿಗೆ ಒಳ್ಳೆಯ ವ್ಯಾಪಾರವನ್ನ ಮಾಡಿಕೊಟ್ಟಿವೆ. ಅಜನೀಶ್ ಲೋಕನಾಥ್ ಹಾಗೂ ಜಡೇಶ ಕೆ. ಹಂಪಿ ಅವ್ರ ಕಾಂಬಿನೇಶನ್ ಸಿನಿಮಾಗಳು ಆನಂದ್ ಆಡಿಯೋ ಆಯ್ಕೆಯ ಸಕ್ಸಸ್ ಫುಲ್ ಸಿನಿಮಾಗಳಾಗಿವೆ. ಇದರಂತೆ ಆನಂದ್ ಆಡಿಯೋ ಕಂಪನಿ ಲ್ಯಾಂಡ್ ಲಾರ್ಡ್ ಆಡಿಯೋ ಹಕ್ಕನ್ನ



ದೊಡ್ಡ ಮೊತ್ತ ಕೊಟ್ಟು ಖರೀದಿಸಿದೆ.

ಈ ಆಲ್ಬಂ ತುಂಬಾ ವಿಶೇಷತೆಗಳಿಂದ ಕೂಡಿದ್ದು, ಹಿನ್ನೆಲೆ ಸಂಗೀತ ಚಿತ್ರದ ಹೈಲೈಟ್ ಗಳಲ್ಲಿ ಒಂದಾಗಿರಲಿದೆಯಂತೆ. ಲ್ಯಾಂಡಲ್ ಲಾರ್ಡ್ ಚಿತ್ರದಲ್ಲಿ ವಿಜಯ್ ಹಿರಿಯ ಮಗಳು ರಿತನ್ಯ ವಿಜಯ್ ಅಭಿನಯಿಸಿರುವುದು ವಿಶೇಷ. ರಚಿತಾರಾಮ್ ಈ ಚಿತ್ರದಲ್ಲಿ ವಿಜಯ್ ಅವರಿಗೆ ನಾಯಕಿಯಾಗಿ ಕಾಣಿಸಿಕೊಂಡಿದ್ದಾರೆ. ಇತರ ಪ್ರಮುಖ ಪಾತ್ರವರ್ಗ ಕುರಿತ ಮಾಹಿತಿಗಳನ್ನು ಚಿತ್ರ ತಂಡ ಬಹಿರಂಗಪಡಿಸಿಲ್ಲ, ಆದರೆ, ಶೀಘ್ರದಲ್ಲೇ ಚಿತ್ರ ಬಿಡುಗಡೆ ಮಾಡುವ ಸುಳಿವನ್ನು ಚಿತ್ರತಂಡ ನೀಡಿದೆ. ಅಂದುಕೊಂಡಂತೆ ಆದರೆ, ದಸರಾ ಅಥವಾ ದೀಪಾವಳಿ ಹಬ್ಬಕ್ಕೆ ಚಿತ್ರ ಪ್ರೇಕ್ಷಕರೆದುರಿಗೆ ಬರುವ ಸಾಧ್ಯತೆಗಳಿವೆ.

# ಸೂರಿ ಅಣ್ಣ' ಚಿತ್ರದ ಟೀಸರ್ ರಿಲೀಸ್: ನಟ-ನಿರ್ದೇಶಕನಾಗಿ ದಿನೇಶ್ ಮಿಂಚು

**ದುನಿಯಾ ವಿಜಯ್ ನಟನೆಯ ಸಲಗ ಚಿತ್ರದಲ್ಲಿ ಸೂರಿ ಅಣ್ಣಾ ಪಾತ್ರದ ಮೂಲಕ ಕನ್ನಡ ಪ್ರೇಕ್ಷಕರ ಮನ ಗೆದ್ದಿದ್ದ ನಟ ದಿನೇಶ್ ಅವರು, ಇದೀಗ ಅದೇ ಹೆಸರಿನ ಹೊಸ ಚಿತ್ರದ ಮೂಲಕ ಪ್ರೇಕ್ಷಕರ ರಂಜಿಸಲು ಸಜ್ಜಾಗಿದ್ದಾರೆ.**

**ಚಿತ್ರದಲ್ಲಿ ದಿನೇಶ್ ಅವರು ಕೇವಲ ನಾಯಕ ನಟನಾಗಿ ಮಾತ್ರವಷ್ಟೇ ಅಲ್ಲದೆ, ಬರಹಗಾರ, ನಿರ್ದೇಶಕ ಮತ್ತು ನಿರ್ಮಾಪಕರೂ ಆಗಿ ಕೆಲಸ ಮಾಡಿದ್ದಾರೆ. ಇತ್ತೀಚೆಗೆ ಅದ್ದೂರಿಯಾಗಿ ಈ ಚಿತ್ರದ ಟೀಸರ್ ಬಿಡುಗಡೆ ಸಮಾರಂಭ ನಡೆಯಿತು.**

ಈ ವೇಳೆ ಮಾತನಾಡಿದ ಸೂರಿ (ದಿನೇಶ್) ಅವರು, 'ನಾನು ಈ ಸಿನಿಮಾ



ನಿರ್ಮಾಣ ಮಾಡಲು ಇಲ್ಲಿ ಬಂದಿರುವ ಸಾಕಷ್ಟು ಜನರು ಸ್ಫೂರ್ತಿ. ನಮ್ಮ ತಂದೆ ಕೆ. ದೊರೈ ಮತ್ತು ತಾಯಿ ಜ್ಯೋತಿಯಮ್ಮ ಅವರ ಆಶೀರ್ವಾದವೇ ಕಾರಣ. ನನ್ನ ಸಹೋದರ ವಿಜಯ್ ಅವರು ಈ ಚಿತ್ರದ ಸಹ ನಿರ್ಮಾಪಕರಾಗಿದ್ದಾರೆ. ಈ ಸಿನಿಮಾದಲ್ಲಿ ರೌಡಿಸಂ ಕಥಾಹಂದರ ಇದೆ. ಆದರೆ ಯಾರೂ ಕೂಡ ರೌಡಿಸಂ ಮಾಡಬೇಡಿ ಎಂಬ ಸಂದೇಶವನ್ನು ಈ ಚಿತ್ರ ನೀಡುತ್ತದೆ. ಯಾರೂ ಅಂತಹ ಜೀವನವನ್ನು ಆರಿಸಿಕೊಳ್ಳಬಾರದು. ಯಾವಾಗಲೂ ಕುಟುಂಬವೇ ಮೊದಲಾಗಬೇಕು. ಯುವಕರನ್ನು ಗುರಿಯಾಗಿರಿಕೊಂಡು ಚಿತ್ರ ನಿರ್ಮಿಸಲಾಗಿದೆ. 'ಸಲಗ ಚಿತ್ರದ ನಂತರ ಸೂರಿ ಅಣ್ಣ ಎಂದೇ ಎಲ್ಲರೂ ನನ್ನನ್ನು ಗುರುತಿಸುತ್ತಾರೆ ಎಂದು ಹೇಳಿದರು.

ಸೂರಿ ಅಣ್ಣ ಸಿನಿಮಾದಲ್ಲಿ ನಾನೇ ನಾಯಕನಾಗಿ ನಟಿಸಿದ್ದೇನೆ. ಸಂಭ್ರಮಶ್ರೀ ಅವರು ನಾಯಕಿ ಆಗಿದ್ದಾರೆ. ರವಿ ಕಾಳೆ, ಕಾಕ್ರೋಜ್ ಸುಧೀ, ಹರೀಶ್ ರಾಯ್, ಎಸ್.ಕೆ. ಉಮೇಶ್, ಪ್ರಕಾಶ್ ತುಮಿನಾಡು, ಪ್ರಸಾದ್, ವೇಡಿ ಅಣ್ಣ, ಚಿತ್ರಲ್ ರಂಗಸ್ವಾಮಿ, ಯಶಸ್ವಿನಿ ಗೌಡ, ಬೆನಕ ನಂಜಪ್ಪ, ಬೇಬಿ ಮರಿಶಾ, ಪ್ರವೀಣ್ ರಾಜ್ ಮುಂತಾದವರು ನನ್ನ ಜೊತೆ ನಟಿಸಿದ್ದಾರೆ ಎಂದು ಮಾಹಿತಿ ನೀಡಿದರು.

ಇನ್ನು ಚಿತ್ರಕ್ಕೆ ಎಂ.ಬಿ. ಅಳ್ಳಿಕಟ್ಟಿ ಅವರು ಛಾಯಾಗ್ರಹಣ, ಎನ್.ಎಂ. ವಿಶ್ವ ಅವರ ಸಂಕಲನವಿದೆ. ಎನ್. ರಾಜ್ ಅವರು ನೃತ್ಯ ನಿರ್ದೇಶನ ಮಾಡಿದ್ದು, ವಿಶ್ವ ಜಿ. ಕಲಾ ನಿರ್ದೇಶನ, ಜಾಗ್ವಾರ್ ಸಣ್ಣಪ್ಪ ಅವರ ಸಾಹಸ ನಿರ್ದೇಶನ ಈ ಚಿತ್ರಕ್ಕಿದೆ.

ಚಿತ್ರದಲ್ಲಿ ಒಟ್ಟು ಐದು ಹಾಡುಗಳಿದ್ದು, ಕೆ.ಎಂ. ಇಂದ್ರ ಅವರು ಸಂಗೀತ ನೀಡಿದ್ದಾರೆ. ಶ್ರೀಧರ್ ಕಶ್ಯಪ್ ಅವರು ಹಿನ್ನೆಲೆ ಸಂಗೀತ ನೀಡಿದ್ದಾರೆ.

ಸಿನಿಮಾದ ಕ್ರಿಯೇಟಿವ್ ಹೆಡ್ ಆಗಿ ರಂಜಿತ್ ತಿಗಡಿ ಅವರು ಕೆಲಸ ಮಾಡಿದ್ದಾರೆ. ಈಗಾಗಲೇ ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದ್ದು, ಚಿತ್ರತಂಡ ಸಿನಿಮಾ ಬಿಡುಗಡೆಗೆ ಸಿದ್ಧತೆ ನಡೆಸುತ್ತಿದೆ. ಎಂಆರ್‌ಜಿ ಮ್ಯೂಸಿಕ್ ಮೂಲಕ ಈ ಸಿನಿಮಾದ ಟೀಸರ್ ಬಿಡುಗಡೆ ಆಗಿದೆ.

### "ಹಿರಿಯ ನಾಗರಿಕರ ಕಾನೂನು ಸಲಹಾ ಕೇಂದ್ರ" ಉದ್ಘಾಟನೆ

# ಹಿರಿಯ ನಾಗರಿಕರ ನಿರ್ಲಕ್ಷ್ಯ ಸಲ್ಲದು : ಜಿಲ್ಲಾ ನ್ಯಾಯಾಧೀಶ ರೋಣ ವಾಸುದೇವ್

**ಚಿತ್ರದುರ್ಗ :** ಹಿರಿಯ ನಾಗರಿಕರನ್ನು ಚೆನ್ನಾಗಿ ನೋಡಿಕೊಳ್ಳುವ ಮೂಲಕ ಹಿರಿಯ ನಾಗರಿಕರನ್ನು ಗೌರವಿಸಿ, ಅವರಿಗೆ ಸಿಗಬೇಕಾದ ಸೌಲಭ್ಯಗಳನ್ನು ಕಲ್ಪಿಸಬೇಕು. ಯಾರೂ ಸಹ ಹಿರಿಯ ನಾಗರಿಕರನ್ನು ನಿರ್ಲಕ್ಷಿಸಬಾರದು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ ರೋಣ ವಾಸುದೇವ್ ಹೇಳಿದರು.

ಚಿತ್ರದುರ್ಗ ನಗರದ ಬಿ.ಡಿ. ರಸ್ತೆಯ ಲೋಕಾಯುಕ್ತ ಕಚೇರಿ ಹಿಂಭಾಗದ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರದಲ್ಲಿ ಬುಧವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರ, ರಾಜ್ಯ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ರಾಜ್ಯ ನಿವೃತ್ತ ನೌಕರರ ಜಿಲ್ಲಾ ಸಂಘ, ಹೊಂಬೆಳಕು ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ ಇವರುಗಳ ಸಂಯುಕ್ತಾಶ್ರಯದಲ್ಲಿ "ಹಿರಿಯ ನಾಗರಿಕರ ಕಾನೂನು ಸಲಹಾ ಕೇಂದ್ರ" ಉದ್ಘಾಟಿಸಿ ಅವರು ಮಾತನಾಡಿದರು.

ಮನೆಯಲ್ಲಿ ಹಿರಿಯ ನಾಗರಿಕರ ಮಾರ್ಗದರ್ಶನ ಇಲ್ಲದೇ ಇತ್ತೀಚಿನ ದಿನಗಳಲ್ಲಿ ವೈವಾಹಿಕ ಹಾಗೂ ಆಸ್ತಿ ವಿವಾದಗಳಿಗೆ ಸಂಬಂಧಿಸಿದ ಪ್ರಕರಣಗಳು ಹೆಚ್ಚಳವಾಗುತ್ತಿವೆ. ಹಿರಿಯರ ಮಾರ್ಗದರ್ಶನದಿಂದ ನಮ್ಮ ನಡೆತೆಗಳನ್ನು ತಿದ್ದಿಕೊಳ್ಳಬಹುದಾಗಿದೆ. ಅಂತಹ ಹಿರಿಯ ನಾಗರಿಕರನ್ನು ಮನೆಯಿಂದ ಹೊರಗಡೆ ಹಾಕಿದಾಗ ಕಿರಿಯರಿಗೆ ಸಕಾಲದಲ್ಲಿ ಸೂಕ್ತ ರೀತಿಯ ಸಲಹೆ ಸಿಗದೇ, ಚಿಕ್ಕ ಚಿಕ್ಕ ವಿಷಯಗಳಿಗೂ ಜಗಳ ಮಾಡಿಕೊಂಡು ನ್ಯಾಯಾಲಯಕ್ಕೆ ಬರುತ್ತಾರೆ ಎಂದು ತಿಳಿಸಿದ ಅವರು, ದೇವಸ್ಥಾನದಲ್ಲಿರುವ ದೇವರಂತೆ ಮನೆಯಲ್ಲಿ ಇರುವ ಹಿರಿಯ ನಾಗರಿಕರು ಸಹ ಪೂಜ್ಯನೀಯ ಎಂದು ಹೇಳಿದರು.

ರಾಜ್ಯದಲ್ಲಿ ಮೊದಲ ಬಾರಿಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಹಿರಿಯ ನಾಗರಿಕರ ಕಾನೂನು ಸಲಹಾ ಕೇಂದ್ರ ಉದ್ಘಾಟನೆ ನೆರವೇರಿಸಲಾಗಿದ್ದು, ಹಿರಿಯ ನಾಗರಿಕರು ಸಲಹಾ ಕೇಂದ್ರದ ಸದುಪಯೋಗವನ್ನು ಪಡೆದುಕೊಳ್ಳಬೇಕು. ಹಿರಿಯ ನಾಗರಿಕರನ್ನು ಗೌರವಿಸಿ, ಅವರಿಗೆ ಸಿಗಬೇಕಾದ ಸೌಲಭ್ಯ ನೀಡಿದರೆ ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರದ ಮೂಲಕ ಸಹಾಯ ಪಡೆಯುವ ಸಂದರ್ಭ ಬರುವುದಿಲ್ಲ ಎಂದು ಹೇಳಿದರು.



ಉಪ ವಿಭಾಗಾಧಿಕಾರಿ ಮೆಹಬೂಬ್ ಜೀಲಾನಿ ಖುರೇಷಿ ಮಾತನಾಡಿ, ಹಿರಿಯ ನಾಗರಿಕರ ಹಕ್ಕುಗಳ ರಕ್ಷಣೆ ಮಾಡುವ ನಿಟ್ಟಿನಲ್ಲಿ ಹಿರಿಯ ನಾಗರಿಕರಿಗೆ ಸಂಬಂಧಿಸಿದಂತೆ 35 ಪ್ರಕರಣಗಳನ್ನು ಗುರುತಿಸಿಕೊಂಡು, ಇದರಲ್ಲಿ 19 ಪ್ರಕರಣಗಳು ವಿಲೇವಾರಿ ಮಾಡಲಾಗಿದ್ದು, 6 ಪ್ರಕರಣಗಳಲ್ಲಿ ಹಿರಿಯ ನಾಗರಿಕರ ಆಸ್ತಿಯನ್ನು ವಾಪಾಸ್ಸು ನೋಂದಣಿ ಮಾಡಿಕೊಡಲಾಗಿದೆ ಎಂದು ತಿಳಿಸಿದರು.

ಸರ್ಕಾರದ ನಿರ್ದೇಶನದಂತೆ ಪ್ರತಿ ತಾಲ್ಲೂಕಿನ ಆಯಾ ಹೋಬಳಿ ವ್ಯಾಪ್ತಿಯಲ್ಲಿ ಪ್ರತಿ ತಿಂಗಳು ಸಾಮಾಜಿಕ ಭದ್ರತಾ ಯೋಜನೆಗಳಿಗೆ ಸಂಬಂಧಿಸಿದಂತೆ ಹಿರಿಯ ನಾಗರಿಕರಿಗೆ ಹಾಗೂ ಅಂಗವಿಕಲರಿಗೆ ಸಮರ್ಪಕವಾಗಿ ತಲುಪಿಸಲಾಗುತ್ತಿದೆ ಎಂಬ ಕುರಿತು ಪಿಂಚಣಿ ಅದಾಲತ್ ನಡೆಸಲಾಗುತ್ತಿದೆ. ಪಿಂಚಣಿ ಅದಾಲತ್‌ನಲ್ಲಿ ಹಿರಿಯ ನಾಗರಿಕರ ಕುಂದು ಕೊರತೆ ಆಲಿಸಿ, ಪರಿಹಾರ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಮಾತನಾಡಿ, ಸರ್ಕಾರ ಹಿರಿಯ ನಾಗರಿಕರಿಗೆ ಅನೇಕ ಸೌಲಭ್ಯ ಒದಗಿಸಿದೆ. ಜತೆಗೆ ಅವರಿಗಾಗಿಯೇ ಕಾನೂನು ಭದ್ರತೆ ಒದಗಿಸಿದೆ. ಆದರೆ ಅಸಮರ್ಥ ಕಾಲಘಟ್ಟದಲ್ಲಿ ಹಿರಿಯ ಜೀವಗಳಿಗೆ ನೋವುಂಟು ಮಾಡುವ ಕೆಲಸ ಮಾಡಬಾರದು. ಅವರ ಅವಶ್ಯಕತೆಗಳಿಗೆ ಮಕ್ಕಳು ಭದ್ರತೆಯಾಗಬೇಕು ಎಂದು ಸಲಹೆ ನೀಡಿದರು.


ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಮಾತನಾಡಿ, ಹಿರಿಯ ನಾಗರಿಕರು ಹಲವಾರು ಸಮಸ್ಯೆಗಳನ್ನು ಎದುರಿಸುತ್ತಿದ್ದು, ಕುಟುಂಬದಿಂದ ಹಿರಿಯ ನಾಗರಿಕರು ಆರ್ಥಿಕ, ಸಾಮಾಜಿಕ, ಆರೋಗ್ಯ ಹಾಗೂ ಕಾನೂನಾತ್ಮಕವಾಗಿ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಹಾಗಾಗಿ ಹಿರಿಯ ನಾಗರಿಕರ ಸಮಸ್ಯೆ ನಿವಾರಿಸುವ ನಿಟ್ಟಿನಲ್ಲಿ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರಗಳು ಕಾರ್ಯನಿರ್ವಹಿಸಲಿವೆ. ಈ ಕೇಂದ್ರಗಳಲ್ಲಿ ಹಿರಿಯ ನಾಗರಿಕರ ರಕ್ಷಣೆಗಾಗಿ ಉಚಿತ ಕಾನೂನು ಸಲಹೆ, ಆಪ್ತ ಸಲಹೆ ನೀಡಲು ಹಾಗೂ ಸಮಸ್ಯೆಗಳ ತುರ್ತು ಸ್ಪಂದನೆಗಾಗಿ ಓರ್ವ ಕಾನೂನು ಸಲಹೆಗಾರರನ್ನು ನಿಯೋಜಿಸಲಾಗಿದ್ದು, ಪ್ರತಿ ಗುರುವಾರ ಹಿರಿಯ ನಾಗರಿಕರಿಗೆ ಕಾನೂನು ಸಲಹೆಗಳನ್ನು ನೀಡಲಾಗುವುದು ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ನಶಾಮುಕ್ತ ಭಾರತ ಅಭಿಯಾನ ಯೋಜನೆಯಡಿ ಮಾದಕ ವಸ್ತು ಸೇವನೆ ಮಾಡದೇ ಇರುವುದಾಗಿ ಜಿಲ್ಲಾ ಅಂವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಪ್ರತಿಜ್ಞಾವಿಧಿ ಬೋಧಿಸಿದರು. ಹಿರಿಯ ನಾಗರಿಕರಿಗೆ ಗುರುತಿನ ಚೀಟಿಯನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್, ತಹಶೀಲ್ದಾರ್ ಗೋವಿಂದರಾಜ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ಕೆ.ಹೆಚ್.ವಿಜಯ್ ಕುಮಾರ್, ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್, ಕಾರ್ಯದರ್ಶಿ ಆರ್.ಗಂಗಾಧರ್, ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘದ ಜಿಲ್ಲಾಧ್ಯಕ್ಷ ಪ್ರೇಮನಾಥ್, ಹಿರಿಯ ನಾಗರಿಕರ ಜಿಲ್ಲಾ ಸಂಘ ಅಧ್ಯಕ್ಷ ರಂಗಪ್ಪ ರೆಡ್ಡಿ, ಬಸವೇಶ್ವರ ವಿದ್ಯಾಸಂಸ್ಥೆ ಕಾರ್ಯದರ್ಶಿ ಕೆ.ಶಂಕರಪ್ಪ ಸೇರಿದಂತೆ ಹಿರಿಯ ನಾಗರಿಕರು ಇದ್ದರು.

# ದಿವಂಗತ ದೇವರಾಜ ಅರಸು ಜಯಂತಿ ಆಚರಣೆಗೆ ಸಿದ್ಧತೆ

**ಚಿಕ್ಕಮಗಳೂರು, ಆ.13:** ರಾಜ್ಯದ ಮಾಜಿ ಮುಖ್ಯಮಂತ್ರಿ ದಿವಂಗತ ಡಿ.ದೇವರಾಜ ಅರಸು ಅವರ ಜಯಂತಿಯನ್ನು ಆಗಸ್ಟ್ 20 ರಂದು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ದಿವಂಗತ ಡಿ.ದೇವರಾಜ ಅರಸು ಅವರ 110ನೇ ಜನ್ಮ ದಿನವನ್ನು ಆಚರಿಸುವ ಸಂಬಂಧ ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.




ಆಗಸ್ಟ್ 20 ರಂದು ನಗರದ ಪೊಲೀಸ್ ಭವನದಲ್ಲಿ ಕಾರ್ಯಕ್ರಮ ಆಯೋಜಿಸಲು ಕ್ರಮ ವಹಿಸುವಂತೆ ತಿಳಿಸಿದ ಅವರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಸದುಪಯೋಗಪಡಿಸಿಕೊಳ್ಳುವಂತೆ ಹೇಳಿದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಮಂಜುನಾಥ್ ಸಭೆಗೆ ಮಾಹಿತಿ ನೀಡಿ, ದಿವಂಗತ ಡಿ.ದೇವರಾಜ ಅರಸು ಅವರ ಜೀವನ ಮತ್ತು ಸಾಧನೆಗಳ ಕುರಿತು ಉಪನ್ಯಾಸ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿದ್ದು ಎಸ್‌ಎಸ್‌ಎಲ್‌ಸಿ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಗುವುದು. ಇಲಾಖೆ ವತಿಯಿಂದ ಅರಸು ಅವರ ಜೀವನ, ಸಾಧನೆ ಕುರಿತ ಕಿರು ಪುಸ್ತಕ ಮುದ್ರಿಸಿ ವಿತರಿಸಲು ಕ್ರಮ ವಹಿಸಲಾಗುವುದು ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ನಾರಾಯಣರಡ್ಡಿ ಕನಕರಡ್ಡಿ, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿವಿಧ ಸಂಘಟನೆಗಳ ಮುಖಂಡರು ಹಾಜರಿದ್ದರು.

# ನಯನಾಗೆ ಓಟ್ ಹಾಕಿದ್ದಕ್ಕೆ ಪಶ್ಚಾತ್ತಾಪ ಧರಣಿ




**ಚಿಕ್ಕಮಗಳೂರು:** ಮೂಡಿಗೆರೆ ವಿಧಾನಸಭಾ ಕ್ಷೇತ್ರದ ಶಾಸಕಿ ನಯನ ಮೋಟಮ್ಮ ಅವರು ಇತ್ತೀಚಿನ ಕಾರ್ಯಕ್ರಮವೊಂದರಲ್ಲಿ ಕೋಮುವಾದಿಗಳೊಂದಿಗೆ ವೇದಿಕೆ ಹಂಚಿಕೊಂಡರು ಎಂಬ ಕಾರಣಕ್ಕೆ ಕಾಂಗ್ರೆಸ್ ಸೇರಿದಂತೆ ವಿವಿಧ ಪಕ್ಷ ಸಂಘಟನೆಗಳಿಂದ ನಗರದಲ್ಲಿ ಪಶ್ಚಾತ್ತಾಪ ಧರಣಿ ನಡೆಯಿತು.

ನಗರದ ಗಾಂಧಿ ಪ್ರತಿಮೆ ಮುಂದೆ ಧರಣಿ ನಡೆಸಿದ ಕಾಂಗ್ರೆಸ್, ಸಿಪಿಐ, ರೈತಸಂಘ, ಎಸ್‌ಡಿಪಿಐ ಮತ್ತಿತರೆ ಸಂಘಟನೆಗಳ ಹಲವಾರು ಮುಖಂಡರು ಕಾರ್ಯಕರ್ತರು ಹಿಂದಿನ ಚುನಾವಣೆಯಲ್ಲಿ ನಯನಾ ಅವರಿಗೆ ಮತ ಹಾಕಿದ ತಪ್ಪಿಗಾಗಿ ಇಂದು ಪಶ್ಚಾತ್ತಾಪ ಧರಣಿ ನಡೆಸುತ್ತಿದ್ದೇವೆ ಎಂದು ಹೇಳಿದರು.

ಕೆಪಿಸಿಸಿ ವಕ್ತಾರ ಎಚ್.ಎಚ್.ದೇವರಾಜ್ ಈ ಸಂದರ್ಭ ಮಾತನಾಡಿ, ಜಾತ್ಯಾತೀತ ಸಿದ್ಧಾಂತದ ಅಡಿಯಲ್ಲಿ ಕಾಂಗ್ರೆಸ್ ಪಕ್ಷ ರಾಜ್ಯ, ದೇಶದಲ್ಲಿ ಮುನ್ನೆಡೆಯುತ್ತಿದೆ, ಆರ್‌ಎಸ್‌ಎಸ್, ಬಿಜೆಪಿ ಜತೆ ಯಾರು ಒಳ ಒಪ್ಪಂದ ಮಾಡಿಕೊಂಡಿದ್ದಾರೋ ಅವರನ್ನು ಪಕ್ಷದಿಂದ ಉಚ್ಛಾಟನೆ ಮಾಡಿ ಅಂತ ರಾಹುಲ್ ಗಾಂಧಿ ಅವರು ಸ್ಪಷ್ಟವಾಗಿ ಹೇಳಿದ್ದಾರೆ. ಶಾಸಕಿ ನಯನ ಮೋಟಮ್ಮ ಅವರು ಆರ್‌ಎಸ್‌ಎಸ್, ಬಿಜೆಪಿ ಮತ್ತು ಬಜರಂಗದದೊಂದಿಗೆ ಸಂಬಂಧ ಇಟ್ಟುಕೊಂಡಿದ್ದಾರೆ. ಅವರನ್ನು ಪಕ್ಷದಿಂದ ಕೂಡಲೇ ಉಚ್ಛಾಟನೆ ಮಾಡಬೇಕು ಎಂದು ನಾನು ಆಗ್ರಹಿಸುತ್ತೇನೆ ಎಂದು ಹೇಳಿದರು.

ಮೂಡಿಗೆರೆ ಕ್ಷೇತ್ರದ ಶಾಸಕರಾದ ನಯನ ಮೋಟಮ್ಮ ಅವರು ಕೆಲವು ದಿನಗಳ ಹಿಂದೆ ಹಿಂದೂ ಮಹಾಸಭಾ ಗಣಪತಿ ಕಾರ್ಯಕ್ರಮ ಲಾಂಛನ ಬಿಡುಗಡೆ ಕಾರ್ಯಕ್ರಮದಲ್ಲಿ ಅವರು ಹೇಳಿರುವ ವಿಚಾರ ಕಾಂಗ್ರೆಸ್ ಮತ್ತು ಪ್ರಗತಿಪರರಿಗೆ ಆಘಾತ ಉಂಟುಮಾಡಿದೆ. ಅವರು ಒಬ್ಬ ಕಾಂಗ್ರೆಸ್ ಶಾಸಕಿಯಾಗಿ ಒಬ್ಬ ಕೋಮುವಾದಿ ಜತೆಗೆ 30-40 ಕ್ರಿಮಿನಲ್ ಕೇಸು ಇರುವಂತಹ ಪ್ರಮೋದ್‌ಮುತಾಲಿಕ್ ಅವರೊಂದಿಗೆ ವೇದಿಕೆ ಹಂಚಿಕೊಂಡಿರುವುದು ಅಕ್ಷಮ್ಯ ಎಂದು ದೂರಿದರು.

ಕಾಂಗ್ರೆಸ್ ಜಾತ್ಯಾತೀತ ಸಿದ್ಧಾಂತ ಮೈಗೂಡಿಸಿಕೊಂಡಿದೆ ಎಂಬ ಭಾವನೆ ಎಲ್ಲರಲ್ಲಿದೆ. ಈ ಮಧ್ಯೆ ನಯನ ಅವರು ಬಹಿರಂಗವಾಗಿ ಕೋಮುವಾದಿಗಳೊಂದಿಗೆ ವೇದಿಕೆ ಹಂಚಿಕೊಂಡಿರುವುದು ಆಘಾತವಾಗಿದೆ. ಕಳೆದ ಚುನಾವಣೆಯಲ್ಲಿ ದಲಿತ ಸಂಘಟನೆಗಳು, ರೈತ ಸಂಘ, ಮತ್ತಿತರೆ ಎಲ್ಲ ಪ್ರಗತಿಪರ ಸಂಘಟನೆಗಳು ನಾವೆಲ್ಲರೂ ಸೇರಿ ನಯನಾ ಅವರಿಗೆ ಬೆಂಬಲ ಕೊಟ್ಟಿದ್ದೆವು. ಅವರಿಗೆ ಬೆಂಬಲ ಕೊಟ್ಟ ತಪ್ಪಿಗಾಗಿ ಪಶ್ಚಾತ್ತಾಪ ಧರಣಿ ಮಾಡಿದ್ದೇವೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವಿವಿಧ ಪಕ್ಷ ಸಂಘಟನೆಗಳ ಮುಖಂಡರಾದ ಅಂಗಡಿಚಂದ್ರು, ಮರ್ಲೆ ಅಣ್ಣಯ್ಯ, ಮಂಜಪ್ಪ, ಭರತ್, ಮಂಜುಕೂದುವಳ್ಳಿ, ದಲಿತ, ಭರತ್, ರೈತ, ದಲಿತ ಸಂಘಟನೆಗಳ ಮುಖಂಡರು, ಕಾರ್ಯಕರ್ತರು ಭಾವಹಿಸಿದ್ದರು.

# ಮುಷ್ಕರ-ಚಳುವಳಿ ನಡೆಸುವುದು ಕಾರ್ಮಿಕರ ಜನ್ಮಸಿದ್ಧ ಹಕ್ಕು : ಡಾ. ಸಿದ್ಧನಗೌಡ ಪಾಟೀಲ



**ಚಿಕ್ಕಮಗಳೂರು:** ಮುಷ್ಕರ ಮತ್ತು ಚಳವಳಿ ನಡೆಸುವುದು ಕಾರ್ಮಿಕರ ಜನ್ಮಸಿದ್ಧ ಹಕ್ಕು ಎಂದು ಸಿಪಿಐ ರಾಜ್ಯ ಸಮಿತಿ ಮುಖಂಡ ಡಾ.ಸಿದ್ಧನಗೌಡ ಪಾಟೀಲ ಪ್ರತಿಪಾದಿಸಿದರು.

ಅವರು ಇಂದು ಭಾರತೀಯ ಕಮ್ಯೂನಿಸ್ಟ್ ಪಕ್ಷದ ಜಿಲ್ಲಾ ಸಮಿತಿಯ 14ನೇ ವರ್ಷದ ಜಿಲ್ಲಾ ಸಮಾವೇಶದ ಅಂಗವಾಗಿ ಆಜಾದ್‌ವೃತ್ತದಲ್ಲಿ ಹಮ್ಮಿಕೊಂಡಿದ್ದ ಬಹಿರಂಗ ಸಭೆಯನ್ನು ಉದ್ಘಾಟಿಸಿ ಮಾತನಾಡಿದರು.

ಸರ್ಕಾರ ಸಾರ್ವಜನಿಕರ ಮೂಲಕ ನ್ಯಾಯಾಲಯದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಸಲ್ಲಿಸಿದ್ದು, ನ್ಯಾಯಾಲಯ ಮುಷ್ಕರ ಮುಂದೂಡಲು ಸೂಚಿಸಿದೆ. ಬೇಡಿಕೆ ಈಡೇರಿಸಲು ಮುಷ್ಕರ ನಡೆಸುವುದು ಕಾರ್ಮಿಕರ ಹಕ್ಕು ಎಂದು ಹೇಳಿದರು.

ಸ್ವಾತಂತ್ರ್ಯ ಹೋರಾಟದಲ್ಲಿ ಜನಸಂಘದ ನಾಯಕರು ಭಾಗಿಯಾಗಿರಲಿಲ್ಲ. ಆದರೆ ಭಾರತೀಯ ಕಮ್ಯೂನಿಸ್ಟ್ ಪಕ್ಷದ ಮುಖಂಡರು ತ್ಯಾಗ, ಬಲಿದಾನವಾಗಿದ್ದಾರೆ. ಇಂದಿನ ಯುವಕರಿಗೆ ಗೋಡ್ಸೆ ಮಾದರಿಯಾಗಬಾರದು. ಭಗತ್‌ಸಿಂಗ್, ಸುಕದೇವ್, ರಾಜಗುರು ಮಾದರಿಯಾಗಬೇಕು ಎಂದರು.

ಪಕ್ಷ ಜಾತಿವಾದ, ಕೋಮುವಾದ, ರಕ್ತದಲ್ಲಿ ರಾಜಕಾರಣ ಮಾಡುವುದಿಲ್ಲ, ದುಡಿಯುವ ವರ್ಗದ ಪರವಾಗಿ ಹೋರಾಟ ನಡೆಸಲಿವೆ ಎಂದು ಹೇಳಿದ ಅವರು,

ಬೇಟಿಬಚಾವೋ, ಬೇಟಿ ಪಡಾವೋ ಎನ್ನುವ ಬಿಜೆಪಿಗರು ಧರ್ಮದಲ್ಲಿ ನಡೆದಿರುವ ನೂರಾರು ಮಹಿಳೆಯ ಹತ್ಯೆಯ ಬಗ್ಗೆ ಏಕೆ ಮಾತನಾಡುವುದಿಲ್ಲವೆಂದು ಪ್ರಶ್ನಿಸಿದರು.

ಎಲ್ಲರೂ ಕೂಡಿಬಾಳಬೇಕೆಂದು ಸಂವಿಧಾನ ಹೇಳುತ್ತಿದ್ದು, ಅದನ್ನೆ ಪಕ್ಷ ಪಾಲಿಸಿಕೊಂಡು ಬರುತ್ತಿದೆ. ಎಂದು ತಿಳಿಸಿ ಮೋದಿ ಜನಸಾಮಾನ್ಯರ ಹಕ್ಕುಗಳನ್ನು ಕಸಿದುಕೊಂಡು ಕಾರ್ಪೋರೇಟ್‌ಕಂಪನಿಗಳ ಪರವಾಗಿ ಕಾರ್ಯನಿರ್ವಹಿಸುತ್ತಿದ್ದಾರೆಂದು ದೂರಿದರು.

ಸಿಪಿಐ ರಾಜ್ಯ ಕಾರ್ಯದರ್ಶಿ ಸಾತಿಸುಂದರೇಶ್ ಮಾತನಾಡಿ, ಸಮಸಮಾಜ ಸ್ಥಾಪನೆ ಪಕ್ಷದ ಮುಖ್ಯ ಗುರಿಯಾಗಿದೆ. ದೇಶದ ಸಂಪತ್ತು ಸಮಾನವಾಗಿ ಹಂಚಿಕೆಯಾಗಬೇಕೆಂಬುದನ್ನು ಬಯಸುತ್ತದೆ ಎಂದು ತಿಳಿಸಿದರು.

ರಾಜ್ಯಸರ್ಕಾರ ಜಾರಿಗೆ ತಂದಿರುವ ಗ್ಯಾರಂಟಿಗಳನ್ನು ಪಕ್ಷ ವಿರೋಧಿಸುವುದಿಲ್ಲ. ಕೃಷಿಕಾಯ್ದೆ, ಕಾರ್ಮಿಕ ಕಾಯ್ದೆ ತಿದ್ದುಪಡಿಗೆ ಏಕೆ ಮುಂದಾಗಲಿಲ್ಲವೆಂದು ಪ್ರಶ್ನಿಸಿದ ಅವರು, ಬಸ್ ಮುಷ್ಕರವನ್ನು ತಡೆದಿರುವ ಸರ್ಕಾರ ಕಾರ್ಮಿಕರ ಪರವಾಗಿದೆಯೋ, ವಿರೋಧವಾಗಿದೆಯೋ ಎಂಬುದನ್ನು ಸ್ಪಷ್ಟಪಡಿಸಬೇಕೆಂದು ಆಗ್ರಹಿಸಿದರು.

ಧರ್ಮಸ್ಥಳದಲ್ಲಿ ಅಮಾಯಕರ ಜೀವಗಳು ಬಲಿಯಾಗಿದ್ದು, ನೊಂದ ಕುಟುಂಬಕ್ಕೆ ನ್ಯಾಯಸಿಗಬೇಕಿದೆ. ಗ್ರೌಂಡ್ ರಿಪೋರ್ಟ್‌ಗೆ ಮುಂದಾದ ಮಾಧ್ಯಮದವರ ಮೇಲೆ ನಿನ್ನೆ ಹಲ್ಲೆ ನಡೆದಿದ್ದು, ಹಲ್ಲೆ ನಡೆಸಿರುವ ಗೂಂಡಾಗಳನ್ನು ಬಂಧಿಸಿ ಕಾನೂನು ಕ್ರಮ ಕೈಗೊಳ್ಳಲು ಸರ್ಕಾರ ಮುಂದಾಗಬೇಕೆಂದು ಒತ್ತಾಯಿಸಿದರು.

ಪಿಐ ಜಿಲ್ಲಾ ಮಾಜಿ ಕಾರ್ಯದರ್ಶಿ ಹೆಚ್.ಎಂ. ರೇಣುಕಾರಾಧ್ಯ ಮಾತನಾಡಿ, ಜನರ ನೋವಿನ ನಡುವೆ ಚಳವಳಿ ಹುಟ್ಟಿಬಂದಿದ್ದು, ಚಳವಳಿಗೆ ಪಕ್ಷ ನಾಯಕತ್ವ ಕೊಡುತ್ತದೆ. ರಾಜಕೀಯ ವ್ಯವಸ್ಥೆಯ ವಿರುದ್ಧ ಹೋರಾಟ ನಡೆಸುತ್ತೇವೆಂದು ತಿಳಿಸಿದರು.

ಅಧ್ಯಕ್ಷತೆಯನ್ನು ಸಿಪಿಐ ಜಿಲ್ಲಾಕಾರ್ಯದರ್ಶಿ ಎಸ್.ಎಲ್.ರಾಧಾಸುಂದರೇಶ್ ವಹಿಸಿದ್ದರು. ಪಕ್ಷದ ರಾಜ್ಯ ಮುಖಂಡ ಪಿ.ವಿ.ಲೋಕೇಶ್, ಜಿಲ್ಲಾ ಮತ್ತು ತಾಲೂಕು ಮುಖಂಡರುಗಳಾದ ಜಿ.ರಘು, ಎಸ್. ವಿಜಯಕುಮಾರ್, ಕೆರೆಮಕ್ಕಿ ರಮೇಶ್, ಹೆಡದಾಳ್‌ಕುಮಾರ್, ಬಿ.ಕೆ. ಲಕ್ಷ್ಮಣ್‌ಕುಮಾರ್, ಗೋಪಾಲ್ ಎನ್. ಶೆಟ್ಟಿ, ಜಿ.ರಮೇಶ್, ಜರ್ಮಿಲೋಬೊ, ಕೆಳಗೂರು ರಮೇಶ್ ಇದ್ದರು. ಕೆಳವಳ್ಳಿ ಕಳಸಪ್ಪ ಸ್ವಾಗತಿಸಿ, ಕಳೆಗೂರು ರಮೇಶ್ ನಿರೂಪಿಸಿದರು.

# ಖಾಯಂ ಲೋಕ್ ಅದಾಲತ್‌ನ ಮೊದಲ ಆದ್ಯತೆ ರಾಜೀ ಸಂಧಾನ: ನ್ಯಾ.ಸಂತೋಷ್



**ಶಿವಮೊಗ್ಗ :** ಖಾಯಂ ಲೋಕ್ ಅದಾಲತ್ ಒಂದು ವಿಶೇಷ ನ್ಯಾಯಾಲಯವಾಗಿದ್ದು, ಪ್ರಕರಣಗಳ ರಾಜಿ ಸಂಧಾನವೇ ಈ ನ್ಯಾಯಾಲಯದ ಮೊದಲ ಆದ್ಯತೆಯಾಗಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಂ.ಎಸ್.ಸಂತೋಷ್ ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ನ್ಯಾಯವಾದಿಗಳ ಸಂಘ, ಜಿಲ್ಲಾ ಪಂಚಾಯತ್, ಕುವೆಂಪು ವಿಶ್ವವಿದ್ಯಾಲಯದ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಾನಗರಪಾಲಿಕೆ, ಕಾರ್ಮಿಕ ಇಲಾಖೆ, ಮೆಸ್ಕಾಂ, ಖಾಸಗಿ ಮತ್ತು ರಾಷ್ಟ್ರೀಕೃತ ಬ್ಯಾಂಕ್‌ಗಳು, ಸಹಕಾರಿ ಸಂಘ ಸಂಸ್ಥೆಗಳು, ಸಾರಿಗೆ ಇಲಾಖೆ, ಬಿಎಸ್‌ಎನ್‌ಎಲ್, ಇನ್ಶೂರೆನ್ಸ್ ಕಂಪನಿಗಳು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಬುಧವಾರ ನಗರದ ಜಿ.ಪಂ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಆಯೋಜಿಸಿದ್ದ ಖಾಯಂ ಲೋಕ್ ಅದಾಲತ್ ಕುರಿತಾದ ಜಾಗೃತಿ ಅಭಿಯಾನದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಾರ್ವಜನಿಕರ ಉಪಯುಕ್ತ ಸೇವೆಗೆ ಸಂಬಂಧಿಸಿದಂತೆ ಇದೊಂದು ವಿಶೇಷ ವೇದಿಕೆ ಆಗಿದ್ದು, ಪ್ರಯಾಣಿಕರನ್ನು ಅಥವಾ ಸರಕನ್ನು ಸಾಗಿಸುವ ಭೂ ಸಾರಿಗೆ, ಜಲಸಾರಿಗೆ, ವಾಯು ಸಾರಿಗೆ ಸೇವೆಗಳು, ಅಂಚೆ, ತಂತಿ, ದೂರವಾಣಿ ಸೇವೆಗಳು, ವಿದ್ಯುತ್, ನೀರು ಸರಬರಾಜು, ಸಾರ್ವಜನಿಕ ನೈರ್ಮಲ್ಯ ಹಾಗೂ ಚರಂಡಿ ವ್ಯವಸ್ಥೆ, ವಿಮಾ ಸೇವೆ, ಆಸ್ಪತ್ರೆ ಹಾಗೂ ಔಷಧಾಲಯಗಳ ಸೇವೆ, ಹಣಕಾಸು ಸಂಸ್ಥೆ ಹಾಗೂ ಬ್ಯಾಂಕ್ ಸೇವೆ, ಶಿಕ್ಷಣ ಅಥವಾ ಶಿಕ್ಷಣ ಸಂಸ್ಥೆಗಳ ಸಂಬಂಧಪಟ್ಟ ಸೇವೆ, ಗೃಹ ಹಾಗೂ ರಿಯಲ್ ಎಸ್ಟೇಟ್ ಸೇವೆ ಒಳಗೊಂಡಂತೆ ಇನ್ನಿತರ ಸಾರ್ವಜನಿಕ ಉಪಯುಕ್ತ ಸೇವೆಗಳ ಪ್ರಕರಣಗಳನ್ನು ಈ ನ್ಯಾಯಾಲಯದಲ್ಲಿ ಸಲ್ಲಿಸಬಹುದು. ಇತರೆ ನ್ಯಾಯಾಲಯಗಳಂತೆ ಇಲ್ಲಿ ಶುಲ್ಕ ಕಟ್ಟವಂತಿಲ್ಲ ಹಾಗೂ ಯಾವುದೇ ಆದಾಯದ ಮಿತಿ ಇರುವುದಿಲ್ಲ. ಈ ಖಾಯಂ ಲೋಕ್ ಅದಾಲತ್ ರಾಜ್ಯದ 6 ಜಿಲ್ಲೆಗಳಲ್ಲಿ ಕಚೇರಿ ಹೊಂದಿದೆ. ಶಿವಮೊಗ್ಗ ಜಿಲ್ಲೆಯು ಮಂಗಳೂರಿನ ವ್ಯಾಪ್ತಿಗೆ ಬರಲಿದೆ ಎಂದರು.

ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಅಧ್ಯಕ್ಷರಾಗಿ ಹಾಗೂ ಸಾರ್ವಜನಿಕ ಉಪಯುಕ್ತ ಸೇವೆಗಳ ಬಗ್ಗೆ 15 ರಿಂದ 20 ವರ್ಷಗಳ ಅನುಭವ ಹೊಂದಿರುವ ಇಬ್ಬರು ಸದಸ್ಯರು ಕರ್ನಾಟಕ ರಾಜ್ಯ ಸರ್ಕಾರದ ನಾಮನಿರ್ದೇಶನ ಮಾಡಿದಂತೆ ಈ ನ್ಯಾಯಾಲಯದಲ್ಲಿ ಕರ್ತವ್ಯ ನಿರ್ವಹಿಸಲಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ರೂ.1 ಕೋಟಿ ಮೌಲ್ಯದ ವ್ಯಾಜ್ಯಗಳನ್ನು ಅಥವಾ ಹಣಕಾಸಿ ವ್ಯವಹಾರದ ಅರ್ಜಿಯನ್ನು ದಾಖಲಿಸಬಹುದು ಎಂದರು.

### ಹಂಸಭಾವಿಯಲ್ಲಿ ವಾಸವಿರುವ ಅಲೆಮಾರಿ ಸಿಂಧೋಳು ಸಮುದಾಯಕ್ಕೆ ಭೇಟಿ

# ಜನರ ಕುಂದುಕೊರತೆ ಆಲಿಸಿದ ಡಾ.ನಾಗಲಕ್ಷ್ಮೀ ಚೌಧರಿ

**ಹಾವೇರಿ:** ಕಾನೂನಾತ್ಮಕವಾಗಿ, ಸಂವಿದಾನಾತ್ಮಕವಾಗಿ ಅಲೆಮಾರಿ, ಅರೇ ಅಲೆಮಾರಿ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ ನಾಗಲಕ್ಷ್ಮಿ ಚೌಧರಿ ಅವರು ಹೇಳಿದರು.

ಬ್ಯಾಡಗಿ ತಾಲೂಕಿನ ಸರಹದ್ದಿನಲ್ಲಿರುವ ಹಿರಂಜಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಹಂಸಬಾವಿಯ ಸರ್ವೆ ನಂ.105 ರಲ್ಲಿ ವಾಸವಿರುವ ಅಲೆಮಾರಿ ಸಿಂಧೋಳು ಸಮುದಾಯಕ್ಕೆ ಭೇಟಿ ಜನರ ಸಮಸ್ಯೆಗಳನ್ನು ಆಲಿಸಿ ಬಳಿಕ ಮಾತನಾಡಿದ ಅವರು, ಸರ್ಕಾರದ ಎಲ್ಲ ಸೌಲಭ್ಯಗಳನ್ನು ಒದಗಿಸಿ, ಯಾವುದೇ ಮಹಿಳೆ ಕಚೇರಿಗೆ ಬಂದರೆ ಅವರಿಗೆ ಸರಿಯಾಗಿ ಸ್ಪಂದಿಸಿ ಅವರ ಸಮಸ್ಯೆಗಳನ್ನು ಆಲಿಸಿ ತಾಲೂಕಿನಲ್ಲಿ ಯಾರೆಲ್ಲ ಅಧಿಕಾರಿಗಳು ಕರ್ತವ್ಯದಲ್ಲಿದ್ದೀರಾ ನೀವೆಲ್ಲರೂ ನಿಮ್ಮ ಕೆಲಸವನ್ನು ಜವಾಬ್ದಾರಿಯಿಂದ ಮಾಡಿ. ಜನರಿಗೆ ಮೂಲಭೂತ ಸೌಲಭ್ಯ ಕಲ್ಪಿಸಿ ತಾಲೂಕಿನಲ್ಲಿ ಸರಿಯಾಗಿ ಕೆಲಸ ಮಾಡದೇ ಇರೋ ಅಧಿಕಾರಿಗಳಿಗೆ ನೋಟಿಸ ನೀಡಿ, ಅವರ ವಿರುದ್ಧ ಕ್ರಮ ಜರುಗಿಸಿ ಎಂದು ಬ್ಯಾಡಗಿ ತಹಸೀಲ್ದಾರ್ ಫಿರೋಜ್ ಸೋಮನಕಟ್ಟಿ ಅವರಿಗೆ ಸೂಚನೆ ನೀಡಿದರು. ಒಂದು ವೇಳೆ ನಿಮ್ಮಿಂದ ಆಗದೆ ಇದ್ದಲ್ಲಿ ನಾನೆ ಖುದ್ದಾಗಿ ಸರ್ಕಾರಕ್ಕೆ ಇಲ್ಲಿನ ಅವ್ಯವಸ್ಥೆ ಕುರಿತು ವರದಿ ಸಲ್ಲಿಸುತ್ತೇನೆ ಇದರಲ್ಲಿ ಯಾವುದೇ ಮುಲಾಜೇ ಇಲ್ಲ ಎಂದರು.

ಸಿಂಧೋಳು ಸಮುದಾಯದಲ್ಲಿ ವಾಸವಿರುವ ಅಲೆಮಾರಿ ಜನರಿಗೆ ಸರಿಯಾಗಿ ಶುದ್ಧ ಕುಡಿಯುವ ನೀರಿಲ್ಲ, ಚರಂಡಿ ಅಂತೂ ಮೊದಲೇ ಇಲ್ಲ, ಇವರಿಗಳು ವಾಸಿಸುವುದಕ್ಕೆ ಮನೆ ಇಲ್ಲ, ಮಳೆಯಿಂದ ಇಲ್ಲಿ ತಿರಗಾಡುವುದಕ್ಕೂ ಆಗುತ್ತಿಲ್ಲ ಅಷ್ಟು ಶೋಚನಿಯ ಸ್ಥಿತಿಯಲ್ಲಿ ಇವರುಗಳು ವಾಸಿಸುತ್ತಿದ್ದಾರೆ. ನೀವೆಲ್ಲರೂ ಈ ಕಡೆಗೆ ಗಮನ ಹರೆಸಿಲ್ಲ, ಸರಕಾರದ ಉನ್ನತ ಮಟ್ಟದ ಹುದ್ದೆಯಲ್ಲಿರುವ ನೀವುಗಳು ಇಂತಹ ಜನರನ್ನು ಮಕ್ಕಳಂತೆ ಭಾವಿಸಿ ಅವರಿಗೆ ಕನಿಷ್ಠ ಮೂಲಭೂತ ಸೌಕರ್ಯಗಳನ್ನಾದರೂ ಕಲ್ಪಿಸಿ ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಶಾಶ್ವತ ಸೂರು ಒದಗಿಸಿ: ನಿಮಗೆ ಶಾಶ್ವತ ಸೂರು ಒದಗಿಸಲು ದುಳಿಕೊಪ್ಪ ಕ್ರಾಸ್ ನಲ್ಲಿರುವ ಸರ್ಕಾರ ಜಾಗ ಗೊತ್ತುಪಡಿಸಿದೆ ಅದಕ್ಕೆ ನಿಮ್ಮ ಸಹಕಾರಬೇಕು ನೀವು ಹೇಳಿದ ಸ್ಥಳದಲ್ಲೇ ಮನೆ ನೀಡಬೇಕು ಎಂದಾದರೆ ಅದು ಕಷ್ಟಸಾಧ್ಯ. ನಿಮಗೆ ಮನೆ ನೀಡುತ್ತೇವೆ ನೀವು ಅಲ್ಲಿ ಹೋಗಿ ವಾಸಿಸಲು ಸಿದ್ದರಾಗಿ ಎಂದು ತಿಳಿಸದರು. ಸಮುದಾಯದ ಗರ್ಭಿಣಿ ಮಹಿಳೆಯರಿಗೆ ಮಾತೃವಂದನ ನೊಂದಣಿ ಮಾಡಿಲ್ಲ, ಅವರುಗಳಿಗೆ ಲಸಿಕೆ ಹಾಕಿಸಿಲ್ಲ, ವಿಧವಾವೇತನ ಸೌಲಭ್ಯ ನೀಡಿಲ್ಲ, ಸರ್ಕಾರ ಜಾರಿಗೆ ತಂದಿರುವ ಸಿಂಗಲ್ ಪೇರೆಂಟ್ ಪ್ರಾಯೋಜಕತ್ವ ಯೋಜನೆಯು ಈ ಸಮುದಾಯದ ಹೆಣ್ಣು ಮಕ್ಕಳಿಗೆ ಮರೀಚಕೆಯಾಗಿದೆ. ಪ್ರಾಯೋಜಕತ್ವ ಯೋಜನೆಯ ಸೌಲಭ್ಯವನ್ನು 18 ವರ್ಷದೊಳಗಿನ ಮಕ್ಕಳನ್ನು ಹೊಂದಿರುವ ಸಿಂಗಲ್ ಪೇರೆಂಟ್ ಮಹಿಳೆಗೆ ಒದಗಿಸಿದ್ದರೆ ಸರ್ಕಾರದಿಂದ ಅವರಿಗೆ ಪ್ರತಿ ತಿಂಗಳು ರೂ. 4000-00 ಸಹಾಯಧನ ಬರುತ್ತಿತ್ತು ಇದು ಇವರ ಆರ್ಥಿಕತೆಗೆ ಸಹಾಯವಾಗುತ್ತಿತ್ತು ಎಂದರು. ಹಾಗೆಯೇ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಡಿಯಲ್ಲಿ ಬರುವ ಅಷ್ಟು ಸೌಲಭ್ಯಗಳನ್ನು ಒದಗಿಸಿ ಎಂದು ಅಧಿಕಾರಿಗಳಿಗೆ ಖಡಕ ಸೂಚನೆ ನೀಡಿದರು ಮತ್ತು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ನಾಳೆ ಒಳಗಾಗಿ ವರದಿ ನೀಡುವಂತೆ ಸೂಚಿಸಿದರು. ಸಿಂಧೋಳು ಸಮುದಾಯದ ಅಲೆಮಾರಿ ಜನರು ಅಧ್ಯಕ್ಷರ ಎದುರಿಗೆ ತಮ್ಮ ಸಮಸ್ಯೆಗಳನ್ನು ಹೇಳಿಕೊಂಡರು. ಈ ಭಾಗಕ್ಕೆ ಯಾವ ಅಧಿಕಾರಿಗಳು ಬರುವುದಿಲ್ಲ ನಮಗೆ ಯಾವುದೇ ಜಾತಿ ಪ್ರಮಾಣ ಪತ್ರ ಇಲ್ಲ, ಆಧಾರ ಕಾರ್ಡ್ ಇಲ್ಲ, ರೇಷನ್ ಕಾರ್ಡ್ ಇಲ್ಲ, ಇವುಗಳನ್ನು ಮಾಡಿಸಲು ನಾವು ಸಂಬಂಧಪಟ್ಟ ಕಚೇರಿಗೆ ಅಲೆದು ಸಾಕಾಯಿತು ನಮಗೆ ಆಧಾರ ಕಾರ್ಡ್ ಮಾಡಿಸಲು ರೂ. 9,000-00 ಗಳ ಲಂಚ ಕೇಳುತ್ತಾರೆ, ವಿಧವಾ ವೇತನ ಮಾಡಿಸಲು ರೂ. 20,000-00 ಗಳ ಲಂಚ ಕೇಳುತ್ತಾರೆ ಇಷ್ಟು ಹಣ ನಾವು ಎಲ್ಲಿಂದ ತರೋಣ, ಒಂದು ಹೊತ್ತು ಊಟಕ್ಕೆ ನಾವು ದಿನಂಪ್ರತಿ ದುಡೀಬೇಕು ಎಂದು ತಮ್ಮ ಅಳಲು ತೋಡಿಕೊಂಡರು.



Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**